ಸಂಪುಟ: ೦೭/ ಸಂಚಿಕೆ: ೧೧೪/ಬುಧವಾರ ದಿನಾಂಕ : ೧೮-೦೬-೨೦೨೫/ ಪುಟ: ೬/ ಬೆಲೆ ೨-೦೦
ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ
ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 114/ WENDESDAY Date : 18-06-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಉನ್ನತ ಶಿಕ್ಷಣದಲ್ಲಿ ಪರಿಸರ ಪಠ್ಯಕ್ರಮ ಸೇರ್ಪಡೆ: ಮುಖ್ಯಮಂತ್ರಿ

ಬೆಂಗಳೂರು: ಉನ್ನತ ಶಿಕ್ಷಣದಲ್ಲಿ ಪರಿಸರ ಪಠ್ಯಕ್ರಮ ಸೇರ್ಪಡೆ ಅತ್ಯಂತ ಅವಶ್ಯಕವಾಗಿದೆ. ಈ ಕೆಲಸವನ್ನು ಸರ್ಕಾರ ಮಾಡಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಗಳವಾರ ಹೇಳಿದ್ದಾರೆ.

ನಗರದಲ್ಲಿ ಆಯೋಜಿಸಿದ್ದ "ವಿಶ್ವ ಪರಿಸರ ದಿನಾಚರಣೆ – 2025" ನ್ನು ಉದ್ಘಾಟಿಸಿ, ಕರ್ನಾಟಕ ರಾಜ್ಯ ಪರಿಸರ ಪ್ರಶಸ್ತಿ ಪ್ರದಾನ ಮಾಡಿ, ಮಾತನಾಡಿದ ಮುಖ್ಯಮಂತ್ರಿ, ಪರಿಸರ ಸಂರಕ್ಷಣೆ, ಅದರ ಬಗೆಗಿನ ಜ್ಞಾನ ಹಾಗೂ ಸಾರ್ವಜನಿಕರಿಗೆ ಅರಿವು ಮೂಡಿಸಬೇಕಾಗಿರುವುದು ಅತ್ಯಂತ ಅವಶ್ಯಕವಾಗಿದೆ ಎಂದರು.

ಪ್ಲಾಸ್ಟಿಕ್ ಮಾಲಿನ್ಯ ಕೊನೆಗಾಣಿಸಿ" ಈ ಬಾರಿಯ ವಿಶ್ವ ಪರಿಸರ ದಿನಾಚರಣೆಯ ಘೋಷವಾಕ್ಯವಾಗಿದೆ. ಇದು ಕಷ್ಟದ ಕೆಲಸವಾದರೂ ನಾವು ಮಾಡಲೇಬೇಕಾಗುತ್ತದೆ. ಪರಿಸರ ಶುದ್ಧವಾಗಿದ್ದರೆ ಜನರು ಆರೋಗ್ಯ, ಪ್ರಕೃತಿಯನ್ನು ಉಳಿಸಿಕೊಳ್ಳಲು ಸಾಧ್ಯ ಎಂದರು.

ಪ್ರಕೃತಿ ಮನುಷ್ಯನ ಆಸೆಗಳನ್ನು ಈಡೇ–ರಿಸುತ್ತದೆ. ಆದರೆ ದುರಾಸೆಗಳನ್ನಲ್ಲ ಎಂದು ಮಹಾತ್ಮಾ ಗಾಂಧೀಜಿ ಹೇಳಿದ್ದರು. ದುರಾಸೆಯಿಂದ ಪ್ರಕೃತಿಯನ್ನು ನಾಶ ಮಾಡಿದರೆ ನಮ್ಮನ್ನು ನಾವೇ ನಾಶ ಮಾಡಿಕೊಂಡಂತೆ. ಕರ್ನಾಟಕದಲ್ಲಿ ಪಶ್ಚಿಮ ಘಟ್ಟ, ವೈವಿಧ್ಯಮಯ ಕಾಡು, ನದಿಗಳು, ಜೀವ ಸಂಪತ್ತನ್ನು ನಾವು ಕಾಪಾಡಬೇಕು. ಪರಿಸರವನ್ನು ನಾವು ಕಾಪಾಡಿದರೆ ಅದು ನಮ್ಮನ್ನು ಕಾಪಾಡುತ್ತದೆ. ಇಂದು ಬೋಧಿಸಲಾಗಿರುವ ಪ್ರತಿಜ್ಞಾ ವಿಧಿಯನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಹೇಳಿದರು.




ಬೆಂಗಳೂರಿನಲ್ಲಿ ದಿನಕ್ಕೆ 900 ಟನ್ ತ್ಯಾಜ್ಯ ಉತ್ಪಾದನೆ: ಬೆಂಗಳೂರು ಒಂದರಲ್ಲೇ ದಿನವೊಂದಕ್ಕೆ 900 ಟನ್ ತ್ಯಾಜ್ಯ ಉತ್ಪಾದನೆಯಾಗುತ್ತದೆ. 1.50 ಕೋಟಿ ಜನಸಂಖ್ಯೆಯನ್ನು ಬೆಂಗಳೂರು ಹೊಂದಿದೆ. ಜನಸಂಖ್ಯೆ ಬೆಳೆದಷ್ಟು ಪರಿಸರದ ಮೇಲೆ ಹಾನಿ ಉಂಟಾಗುತ್ತಿದೆ. ದೇಶ ಜನಸಂಖ್ಯೆಯಲ್ಲಿ ನಂಬರ್ ಒನ್ ಆಗಿದೆ. ಜನಸಂಖ್ಯೆಯ ನಿಯಂತ್ರಣದ ಜೊತೆಗೆ ಪರಿಸರ ಕುರಿತು ಜ್ಞಾನವನ್ನು ಬೆಳೆಸಿಕೊಳ್ಳಬೇಕಿದೆ ಎಂದರು.

ಭೂಮಿಯಲ್ಲಿ ರಾಸಾಯನಿಕ ಗೊಬ್ಬರ ಬಳಸಿ ಮಣ್ಣಿನ ಫಲವತ್ತತೆ ಕಡಿಮೆಯಾಗಿದೆ. ಇದನ್ನು ಹೀಗೇ ಬಿಟ್ಟರೆ ಕರ್ನಾಟಕ ಮುಂದೆ ಮರುಭೂಮಿಯಾಗಲಿದೆ. ಅದಕ್ಕಾಗಿ ನಾವು ಈಗಲೇ ಎಚ್ಚರಿಕೆ ವಹಿಸಲೇಬೇಕು. ಪ್ಲಾಸ್ಟಿಕ್ ಬಳಕೆಯನ್ನು ನಿಲ್ಲಿಸಬೇಕು.

ಬೆಂಗಳೂರಿನಲ್ಲಿ ಪ್ಲಾಸ್ಟಿಕ್ ಮರುಬಳಕೆ ಘಟಕದಿಂದ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆ. ನಾವಿಂದು ಪ್ಲಾಸ್ಟಿಕ್ ಗೆ ಪರ್ಯಾಯ ವ್ಯವಸ್ಥೆ ಕಂಡುಕೊಳ್ಳಬೇಕು ಎಂದು ಹೇಳಿದರು.

ಪುನರ್ಬಳಕೆ ಮತ್ತು ಮರುಬಳಕೆ ಪ್ರೋತ್ಸಾಹಿಸಿ, ಏಕ ಬಳಕೆ ಪ್ಲಾಸ್ಟಿಕ್ ನಿಲ್ಲಿಸೋಣ, ಸಾರ್ವಜನಿಕ ಸಾರಿಗೆ ಉಪಯೋಗಿಸೋಣ, ಹತ್ತಿರದ ಸ್ಥಳಗಳಿಗೆ ನಡೆದು ಹೋಗುವ ಅಥವಾ ಸೈಕಲ್ ಬಳಕೆ ಮಾಡೋಣ, ಹನಿ ಹನಿ ನೀರನ್ನು ಸಂಗ್ರಹಿಸಿ ಬಳಸಿಕೊಳ್ಳೋಣ, ನೀರನ್ನು ಪೋಲು ಮಾಡದೇ ಜವಾಬ್ದಾರಿಯುತವಾಗಿ ಬಳಸೋಣ. ಸಾಧ್ಯವಾದ ಮಟ್ಟಿಗೆ ಇದು ಪ್ರತಿಯೊಬ್ಬರ ಕರ್ತವ್ಯ ಎಂದು ಅರಿತು 'ನನ್ನ ಜೀವ ನನ್ನ ಮರ' ಎಂದು ಗಿಡ ಮರಗಳನ್ನು ನೆಟ್ಟು ಬೆಳೆಸೋಣ. ಪರಿಸರ ನ್ಯಾಯ, ಸುಸ್ಥಿರ ಬದ್ಧತೆಗೆ ಸಂಪೂರ್ಣ ಒಪ್ಪಿಗೆ ನೀಡಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು.

## ಬಾಲ್ಯ ವಿವಾಹ ತಡೆಗೆ ಜಿಪಂ ಸಿಇಒ ರಾಹುಲ್ ಶಿಂಧೆ ಸೂಚನೆ



ಮೂಡಲಗಿ : ಬಾಲ್ಯವಿವಾಹ ತಡೆಗೆ ಗ್ರಾಪಂಗಳು ಅಗತ್ಯ ಕ್ರಮಕೈಗೊಳ್ಳಬೇಕು. ಈ ಕುರಿತು ಗ್ರಾಪಂ ಆಡಳಿತ ಮಂಡಳಿ ಜನರಲ್ಲಿಯೂ ಜಾಗೃತಿ ಮೂಡಿಸಬೇಕು. ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಜಿಪಂ ಸಿಇಒ ರಾಹುಲ್ ಶಿಂಧೆ ಅವರು ತಿಳಿಸಿದರು.

ಮೂಡಲಗಿ ತಾಲೂಕಿನ ಹುಣಶ್ಯಾಳ ಪಿಜಿ ಗ್ರಾಪಂ ಕಾರ್ಯಾಲಯದಲ್ಲಿ ಗ್ರಾಪಂ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರೊಂದಿಗೆ ಸಂವಾದ ನಡೆಸಿದ ಅವರು, ಗ್ರಾಮೀಣ ಭಾಗದ ಮಕ್ಕಳು ಕೂಡ ಉನ್ನತ ಹುದ್ದೆಗೆ ಏರಬೇಕು. ಈ ನಿಟ್ಟಿನಲ್ಲಿಯೂ ಗ್ರಾಪಂಗಳು ಗಮನ ಹ–ರಿಸಬೇಕು. ಸರಕಾರಿ ಶಾಲೆಗಳಿಗೆ ಅಗತ್ಯ ಸೌಲಭ್ಯಗಳನ್ನು ನೀಡಬೇಕು ಎಂದು ಸೂಚನೆ ನೀಡಿದರು.

ಬಳಿಕ ಗ್ರಂಥಾಲಯ, ಹಳ್ಳಿ ಸಂತೆ ಹಾಗೂ ಸರ್ಕಾರಿ ಶಾಲೆ ಹಾಗೂ ಪ್ರವಾಹ ಪೀಡಿತ ಪ್ರದೇಶ ಪರಿಶೀಲಿಸಿ, ಬಳಿಕ ವಡೇರಹಟ್ಟಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ವಸತಿ ನಿಲಯ ಹಾಗೂ ಅಂಗನವಾಡಿಗೆ ಭೇಟಿ ನೀಡಿದ ಜಿಪಂ ಸಿಇಒ ರಾಹುಲ್ ಶಿಂಧೆ ಅವರು ಮಕ್ಕಳೊಂದಿಗೆ ಸಂವಾದ ನಡೆಸಿದರು.


ಗೋಕಾಕ ತಾಲೂಕಿನ ಬಳೋಬಾಳ ಗ್ರಾಪಂ ವ್ಯಾಪ್ತಿಯ ಪ್ರವಾಹ ಪೀಡಿತ ಪ್ರದೇಶಕ್ಕೆ ಭೇಟಿ ನೀಡಿದ ಜಿಪಂ ರಾಹುಲ್ ಶಿಂಧೆ ಅವರು ಸರಕಾರಿ ಪ್ರೌಢ ಶಾಲೆಗೆ ಭೇಟಿ ಶಾಲಾ ಮಕ್ಕಳೊಂದಿಗೆ ಸಂವಾದ ನಡೆಸಿದರು. ಬಳಿಕ ಗೋಕಾಕ ನಗರದ ಸಾರ್ವಜನಿಕ ಆಸ್ಪತ್ರೆಯ ನಮ್ಮ ಕ್ಲಿನಿಕ್ ಗೆ ಭೇಟಿ ನೀಡಿ, ವ್ಯವಸ್ಥೆಯನ್ನು ಪರಿಶೀಲಿಸಿದರು. ಗೋಕಾಕ ತಾಪಂ ಕಾರ್ಯಾಲಯದ ನವೀಕರಣ ಕಾಮಗಾರಿ ಪರಿಶೀಲಿಸಿ, ನಿಗದಿತ ಸಮಯದಲ್ಲಿ ಕಾಮಗಾರಿ ಪೂರ್ಣಗೊಳಿಸಲು ಸೂಚನೆ ನೀಡಿದರು.

ಗೋಕಾಕ ನಗರದ ಜ್ಯೂನಿಯರ್ ಕಾಲೇಜು ಸಭಾಭವನದಲ್ಲಿ ಮಂಗಳವಾರ ಮೂಡಲಗಿ ಮತ್ತು ಗೋಕಾಕ ತಾಲೂಕಿನ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಜಿಪಂ ಸಿಇಒ ರಾಹುಲ್ ಶಿಂಧೆ ಅವರು ನಡೆಸಿ, ಗ್ರಾಪಂಗಳಿಂದ ಮುಂಜಾಗ್ರತಾ ಕ್ರಮವಾಗಿ ಪ್ರಕೃತಿ ವಿಕೋಪ ತಡೆಗೆ ಪೂರ್ವ ತಯಾರಿ ಮಾಡಿಕೊಳ್ಳಬೇಕು ಎಂದು ಜಿಪಂ ಸಿಇಒ ರಾಹುಲ್ ಶಿಂಧೆ ಸೂಚನೆ ನೀಡಿದರು.

ಶಾಲಾಭಿವೃದ್ಧಿ ಕಾಮಗಾರಿಗಳನ್ನು ಆದ್ಯತೆ ಮೇರೆಗೆ ಪೂರ್ಣಗೊಳಿಸಬೇಕು. ನಿಗದಿತ ಕರ ವಸೂಲಿ ಮಾಡಬೇಕು. ಜೆಜೆಎಂ, 15ನೇ ಹಣಕಾಸು ಕಾಮಗಾರಿಗಳು ಸೇರಿದಂತೆ ವಿವಿಧ ಯೋಜನೆಗಳ ಪ್ರಗತಿ ಸಾಧಿಸುವಂತೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಮೂಡಲಗಿ ತಾಪಂ ಇಒ ಎಫ್.ಜಿ.ಚಿನ್ನನವರ, ಗೋಕಾಕ ತಾಪಂ ಇಒ ಪರಶುರಾಮ ಘಸ್ತೆ, ಎಇಇ ಉದಯಕುಮಾರ ಕಾಂಬಳೆ, ಬಿಇಒ ಅಜೀತ ಮನ್ನಿಕೇರಿ, ಸಿಡಿಪಿಒ ಯಲ್ಲಪ್ಪಾ ಗದಾಡಿ, ತಾಪಂ ಸಹಾಯಕ ನಿರ್ದೇಶಕರಾದ ಸಂಗಮೇಶ ರೊಡ್ಡನ್ನವರ, ಚಂದ್ರಶೇಖರ ಬಾರ್ಕಿ, ವಿನಯಕುಮಾರ ಪಿಡಿಒ ಶಿವಾನಂದ ಗುಡಸೆ, ತಾಂತ್ರಿಕ ಸಂಯೋಜಕ ನಾಗಾರ್ಜುನ ಇಳಿಗೇರ, ಎಂಐಎಸ್ ಸಂಯೋಜಕರು ನಿರಂಜನ ಮಲ್ಲವ್ವಗೋಳ, ತಾಂತ್ರಿಕ ಸಹಾಯಕ ಮಹಮ್ಮದ ನಯಾಗರ ಮತ್ತಿತರರು ಉಪಸ್ಥಿತರಿದ್ದರು

## ನೀಟ್ ಸೀಟು: ದಲ್ಲಾಳಿಗಳ ಮೋಸಕ್ಕೆ ಬಲಿಯಾಗಬೇಡಿ- ಸಚಿವ ಡಾ. ಶರಣಪ್ರಕಾಶ್ ಪಾಟೀಲ್



ಬೆಂಗಳೂರು : ವೈದ್ಯರಾಗಬೇಕೆಂಬ ಭವ್ಯ ಭವಿಷ್ಯದ ಕನಸು ಹೊತ್ತು ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ ಬರೆದಿರುವ ವಿದ್ಯಾರ್ಥಿಗಳು ಹಾಗೂ ಅವರ ಪೋಷಕರು ಯಾವುದೇ ಕಾರಣಕ್ಕೂ ಮಧ್ಯವರ್ತಿಗಳ ಮೋಸದ ಜಾಲಕ್ಕೆ ಬೀಳಬಾರದು ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾಗಿರುವ ಡಾ. ಶರಣಪ್ರಕಾಶ್ ಪಾಟೀಲ್ ಸಲಹೆ ನೀಡಿದ್ದಾರೆ.

ಈ ಸಂಬಂಧ ಪತ್ರಿಕಾ ಪ್ರಕಟಣೆ ಹೊರಡಿಸಿರುವ ಸಚಿವರು, ಅತ್ಯುತ್ತಮವಾಗಿ ಓದಿ, ಪರೀಕ್ಷೆ ಬರೆದಿರುವ ಆಕಾಂಕ್ಷಿಗಳು, ಸೀಟು ಪಡೆಯಲೇಬೇಕು ಎಂಬ ಆತುರದಲ್ಲಿ ಮೋಸದ ಜಾಲಕ್ಕೆ ಬೀಳಬಾರದು ಎಂದು ಹೇಳಿದ್ದಾರೆ.

ವೈದ್ಯಕೀಯ ಸೀಟು ಕೊಡಿಸುತ್ತೇವೆ, ಆ ಕಾಲೇಜಿನಲ್ಲಿ ಸೀಟು ಸಿಗುತ್ತೆ ನಿಮಗೆ, ನಮಗೆ ಅವರು ಗೊತ್ತಿದ್ದಾರೆ, ಇವರು ಗೊತ್ತಿದ್ದಾರೆ ಎಂದು ಹೇಳಿ ಸೀಟು ಕೊಡಿಸುವ ಭರವಸೆ ನೀಡಿ ಮರಳು ಮಾಡುವವರ ಸಂಖ್ಯೆ ಹೆಚ್ಚಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

ನೀಟ್ ಫಲಿತಾಂಶಗಳು ಈಗಾಗಲೇ ಪ್ರಕಟವಾಗಿವೆ. ಕರ್ನಾಟಕದಲ್ಲಿ 1,47,782 ಅಭ್ಯರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದರು. 1,42,369 ವಿದ್ಯಾರ್ಥಿಗಳು ಹಾಜರಾಗಿದ್ದರು. ಈ ಪೈಕಿ 83,582 ಅರ್ಹತೆ ಪಡೆದುಕೊಂಡಿದ್ದಾರೆ. ಹೇಗಾದರೂ ಮಾಡಿ ಒಳ್ಳೆ ಕಾಲೇಜಿನಲ್ಲಿ ಸೀಟು ಪಡೆಯಬೇಕು ಎಂಬ ಆತುರಕ್ಕೆ ಬರಬೇಡಿ. ನಿಮ್ಮ ಆತಂಕವನ್ನು ದುರುಪಯೋಗಪಡಿಸಿಕೊಳ್ಳಲು ಮಧ್ಯವರ್ತಿಗಳು ಕಾದಿರುತ್ತಾರೆ. ಅವರ ಮೋಸದ ಜಾಲಕ್ಕೆ ಬೀಳಬೇಡಿ ಎಂದು ಸಲಹೆ ನೀಡಿದ್ದಾರೆ.

ಕೆಇಎಯಿಂದ ಸೀಟು ಹಂಚಿಕೆ: ನಮ್ಮ ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ವತಿಯಿಂದಲೇ ಸೀಟುಗಳ ಹಂಚಿಕೆ ಕ್ರಮಬದ್ಧವಾಗಿ ಆಗುತ್ತದೆ. ಅದರಂತೆ ನಿಯಮಗಳನ್ನು ಪಾಲಿಸಿ. ವಿದ್ಯಾರ್ಥಿಗಳು ಮತ್ತು ಪೋಷಕರು ಇದನ್ನು ತಪ್ಪದೇ ತಿಳಿದುಕೊಳ್ಳಬೇಕು ಎಂದು ಸಚಿವರು ವಿವ–ರಿಸಿದ್ದಾರೆ.

ಅತ್ಯುತ್ತಮ ಸಾಧನೆ ಮಾಡಿ ರ್‍ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸುತ್ತೇನೆ. ಎಲ್ಲ ವಿದ್ಯಾರ್ಥಿಗಳ ಭವಿಷ್ಯವೂ ಉತ್ತಮವಾಗಿರಲಿ ಎಂದು ಹಾರೈಸುತ್ತೇನೆ ಎಂದು ಸಚಿವ ಪಾಟೀಲ್ ತಿಳಿಸಿದ್ದಾರೆ.

ದಲ್ಲಾಳಿಗಳಿಗೆ ಎಚ್ಚರಿಕೆ : ಸೀಟು ಕೊಡಿಸುತ್ತೇನೆಂದು ವಿದ್ಯಾರ್ಥಿಗಳು ಅಥ–'ವಾ ಪೋಷಕರನ್ನು ದಿಕ್ಕು ತಪ್ಪಿಸಿ ಮೋಸ ಮಾಡಿದವರು ಕಂಡುಬಂದರೆ, ಅಂಥ ದಲ್ಲಾಳಿಗಳನ್ನು ಪತ್ತೆ ಹಚ್ಚಿ, ಕಾನೂನು ರೀತಿಯಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುವುದು. ವಿದ್ಯಾರ್ಥಿಗಳು ಮತ್ತು ಪೋಷಕರ ಭವಿಷ್ಯದ ಜೊತೆ ಚೆಲ್ಲಾಟವಾಡುವುದನ್ನು ಸಹಿಸುವುದಿಲ್ಲ. ಮಧ್ಯವರ್ತಿಗಳ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಸಚಿವರು ಖಡಕ್ ಎಚ್ಚರಿಕೆಯನ್ನು ವಂಚಕರಿಗೆ ರವಾನಿಸಿದ್ದಾರೆ.

## ಭಾರಿ ಮಳೆಗೆ ಜಲಾಶಯಗಳ ಒಳ ಹರಿವು ಹೆಚ್ಚಳ: ಇಂದಿನಿಂದ ಮಳೆ ಪ್ರಮಾಣ ಇಳಿಕೆ

ಬೆಂಗಳೂರು, ಜೂ.17– ಕರಾವಳಿ, ಮಲೆನಾಡು ಸೇರಿದಂತೆ ರಾಜ್ಯದ ಕೆಲವು ಭಾಗಗಳಲ್ಲಿ ಕಳೆದ 8–10 ದಿನಗಳಿಂದ ಆರ್ಭಟಿಸುತ್ತಿರುವ ಮುಂಗಾರು ಮಳೆ ಇನ್ನೂ ಎರಡು ದಿನ ಮುಂದುವರೆಯಲಿದೆ. ಆದರೆ, ನಾಳೆಯಿಂದ ಮಳೆಯ ಪ್ರಮಾಣ ಇಳಿಮುಖವಾಗುವ ಮುನ್ಸೂಚನೆಗಳಿವೆ. ಮುಂಗಾರು ಚುರುಕಾಗಿ ಮತ್ತೆ ಆರ್ಭಟಿಸುತ್ತಿರುವ ಹಿನ್ನೆಲೆಯಲ್ಲಿ ನದಿಗಳ ನೀರಿನ ಮಟ್ಟ ಗಣನೀಯವಾಗಿ ಏರಿಕೆ ಕಂಡಿದ್ದು, ಜಲಾಶಯಗಳ ಒಳಹರಿವು ಹೆಚ್ಚಾಗಿಗೆ. ಜಲಪಾತಗಳಲ್ಲಿ ಜೀವಕಳೆ ತುಂಬಿದ್ದು, ಪ್ರವಾಸಿಗರನ್ನು ಕೈ ಬೀಸಿ ಕರೆಯುತ್ತಿವೆ. ಕೃಷ್ಣಾ, ಕಾವೇರಿ ಕಣಿವೆಯ ಪ್ರಮುಖ ನದಿಗಳ ಪ್ರಮುಖ ಜಲಾಶಯಗಳ ನೀರಿನ ಮಟ್ಟ ಏರತೊಡಗಿದೆ.

ಮಲೆನಾಡು ಭಾಗದಲ್ಲಿ ಇನ್ನೆರಡು ದಿನಗಳ ಕಾಲ ಭಾರಿ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದ್ದು, ಜಲಾಶಯಗಳ ನೀರಿನ ಮಟ್ಟದಲ್ಲಿ ಗಣನೀಯ ಏರಿಕೆ ಕಂಡುಬರಲಿದೆ.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮಾಹಿತಿ ಪ್ರಕಾರ, ಉಡುಪಿ, ಶಿವಮೊಗ್ಗ, ಕೊಡಗು, ಉತ್ತರ ಕನ್ನಡ, ದಕ್ಷಿಣ ಕನ್ನಡ, ಹಾವೇರಿ, ಮೈಸೂರು, ದಾವಣಗೆರೆ ಜಿಲ್ಲೆಗಳಲ್ಲಿ ವ್ಯಾಪಕ ಪ್ರಮಾಣದ ಮಳೆಯಾಗಿದೆ. ಕಾರ್ಕಳ ತಾಲ್ಲೂಕಿನ ಪಲ್ಲಿ ಗ್ರಾಮ ಪಂಚಾಯ್ತಿಯಲ್ಲಿ 230 ಮಿ.ಮೀ.ನಷ್ಟು ಭಾರಿ ಮಳೆಯಾಗಿದೆ.

ಹಾಸನ ಜಿಲ್ಲೆಯಲ್ಲಿ ಸಾಧಾರಣ ಮಳೆಯಾಗಿದ್ದು, ಬೆಳಗಾವಿ ಮತ್ತು ಧಾರವಾಡ ಜಿಲ್ಲೆಗಳಲ್ಲಿ ಅಲ್ಲಲ್ಲಿ ಮಳೆ ಬಿದ್ದಿದೆ. ಉಳಿದಂತೆ ರಾಜ್ಯದ ಇತರ ಜಿಲ್ಲೆಗಳಲ್ಲಿ ಚದುರಿದಂತೆ ಕೆಲವೆಡೆ ಮಾತ್ರ ಹಗುರದಿಂದ ಸಾಧಾರಣ ಮಳೆಯಾಗಿದೆ. ಜಲ ವಿದ್ಯುತ್ ಉತ್ಪಾದಿಸುವ ಲಿಂಗನಮಕ್ಕಿ, ಸೂಪಾ, ವಾರಾಹಿ ಜಲಾಶಯಗಳಿಗೆ ಒಟ್ಟು 74 ಸಾವಿರ ಕ್ಯುಸೆಕ್ಸ ಅಧಿಕ ಒಳಹ–ರಿವು ಇದೆ. ಕಾವೇರಿ ಕಣಿವೆಯ ಹಾರಂಗಿ ಹಾಗೂ ಕಬಿನಿ ಜಲಾಶಗಳ ಒಳಹ–ರಿವು ಹೆಚ್ಚಾಗಿರುವ ಪರಿಣಾಮ ಹೊರ ಹರಿವನ್ನು ಹೆಚ್ಚಿಸಲಾಗಿದೆ. ಹಾರಂಗಿ



ಜಲಾಶಯ ಶೇ.72ರಷ್ಟು ಭರ್ತಿಯಾಗಿದ್ದರೆ, ಕಬಿನಿ ಜಲಾಶ ಶೇ.84ರಷ್ಟು ತುಂಬಿದೆ. ಈ ಜಲಾಶಯಕ್ಕೆ ಪ್ರಸ್ತುತ 15 ಸಾವಿರ ಕ್ಯುಸೆಕ್‌ಸಗೂ ಅಧಿಕ ಒಳಹರಿವು ಇದೆ. ಶೇ.70ರಷ್ಟು ಭರ್ತಿಯಾಗಿರುವ ಹೇಮಾವತಿ ಜಲಾಶಯಕ್ಕೆ 8 ಸಾವಿರ ಕ್ಯುಸೆಕ್ಸ ಅಧಿಕ ಪ್ರಮಾಣದ ಒಳಹರಿವು ಇದೆ. ಅದೇ ರೀತಿ ಶೇ.66ರಷ್ಟು ನೀರಿನ ಸಂಗ್ರಹವಿರುವ ಕೆಆರ್–ಎಸ್ ಜಲಾಶಯಕ್ಕೆ 16 ಸಾವಿರ ಕ್ಯುಸೆಕ್‌ಸಗೂ ಅಧಿಕ ಪ್ರಮಾಣದ ಒಳ ಹರಿವು ಇದೆ. ಚಿಕ್ಕಮಗಳೂರು, ಹಾಸನ, ಕೊಡಗು ಹಾಗೂ ಕೇರಳದಲ್ಲಿ ಭಾರಿ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಜಲಾಶಯಗಳ ಒಳಹರಿವು ಇನ್ನಷ್ಟು ಹೆಚ್ಚಾಗುವ ಸಾಧ್ಯತೆಗಳಿವೆ. ಒಳಹ–ರಿವು ಇದೇ ರೀತಿ ಮುಂದುವರೆದರೆ ಜೂನ್ ಅಂತ್ಯದೊಳಗೆ ಪೂರ್ಣ ಪ್ರಮಾಣದಲ್ಲಿ ಈ ಜಲಾಶಯಗಳು ಭರ್ತಿಯಾಗುವುದನ್ನು ತಳ್ಳಿ ಹಾಕುವಂತಿಲ್ಲ. ಕೃಷ್ಣಾ ಕೊಳ್ಳದ ಭದ್ರಾ, ತುಂಗಭದ್ರಾ, ಘಟಪ್ರಭಾ, ಮಲಪ್ರಭಾ, ಆಲಮಟ್ಟಿ, ನಾರಾಯಣಪುರ ಜಲಾಶಯಗಳ ಒಳಹರಿವು ಏರಿಕೆಯಾಗಿದೆ. ಒಟ್ಟಾರೆ ಈ ಜಲಾಶಯಗಳಿಗೆ 60 ಸಾವಿರ ಕ್ಯುಸೆಕ್‌ಸಗೂ ಅಧಿಕ ಪ್ರಮಾಣದ ನೀರು ಹರಿದು ಬರುತ್ತಿದೆ. ಈ ಜಲಾಶಯಗಳಲ್ಲಿ ಶೇ.40ರಷ್ಟು ನೀರು ಸಂಗ್ರಹವಾಗಿದೆ. ರಾಜ್ಯ ಪ್ರಮುಖ ಜಲಾಶಯಗಳಲ್ಲಿ ಕಳೆದ ವರ್ಷ ಇದೇ ಸಂದರ್ಭದಲ್ಲಿ ಕೇವಲ 84.05 ಟಿಎಂಸಿ ಅಡಿಯಷ್ಟು ಮಾತ್ರ ನೀರಿತ್ತು. ಈ ವರ್ಷ174.66 ಟಿಎಂಸಿ ಅಡಿಯಷ್ಟು ನೀರು ಸಂಗ್ರಹವಾಗಿದೆ.ಮೇನಲ್ಲಿ ಮುಂಗಾರು ಆರಂಭವಾದಾಗ ಇದೇ ರೀತಿ ಭಾರಿ ಮಳೆಯಾಗಿತ್ತು. ಜಲಾಶಯಗಳಿಗೆ ಸಾಕಷ್ಟು ನೀರು ಬಂದಿತ್ತು. ಕೊಂಕಣ ಭಾಗದಲ್ಲಿ ಮೇಲ್ಮೈ ಸುಳಿಗಾಳಿ ಉಂಟಾಗಿರುವ ಪರಿಣಾಮ ರಾಜ್ಯದಲ್ಲಿ ಭಾಗಶಃ ಮೋಡ ಕವಿದ ವಾತಾವರಣ ಇರಲಿದ್ದು, ಕೆಲವೆಡೆ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಗಳಿವೆ. ಕರಾವಳಿ ಹಾಗೂ ಕರಾವಳಿಗೆ ಹೊಂದಿಕೊಂಡಿರುವ ಜಿಲ್ಲೆಗಳಿಗೆ ಇನ್ನೆರಡು ದಿನಗಳ ಕಾಲ ಭಾರಿ ಮಳೆ ಮುನ್ನೆಚ್ಚ–ರಿಕೆ ನೀಡಲಾಗಿದೆ. ಒಳನಾಡಿನ ಇತರ ಜಿಲ್ಲೆಗಳಲ್ಲಿ ಒಣ ಹವೆ ಇರಲಿದ್ದು, ಕೆಲವೆಡೆ ಮಾತ್ರ ಮಳೆಯಾಗಲಿದೆ ಎಂಬ ಮುನ್ಸೂಚನೆ ನೀಡಲಾಗಿದೆ.

## 1 ಕೋಟಿ ರೂ. ಮೌಲ್ಯದ ಮಾದಕ ವಸ್ತು ಜಪ್ತಿ : ವಿದೇಶಿ ಡ್ರಗ್ ಪೆಡ್ಲರ್ ಬಂಧನ

ಬೆಂಗಳೂರು,ಜೂ.17– ಮಾದಕ ವಸ್ತುಗಳನ್ನು ಸರಬರಾಜು ಮಾಡುತ್ತಿದ್ದ ನೈಜೀರಿಯಾದ ಡ್ರಗ್ ಪೆಡ್ಲರ್‌ನನ್ನು ಸಿಸಿಬಿ ಪೊಲೀಸರು ಬಂಧಿಸಿ 1.20 ಕೋಟಿ ರೂ. ಮೌಲ್ಯದ ಎಂಡಿಎಂಎ ಕ್ರಿಸ್ಟಲ್ ವಶಪಡಿಸಿಕೊಂಡಿದ್ದಾರೆ. ನಗರದ ಆವಲಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯ ಕೆ.ದೊಮಸಂದ್ರ ಗ್ರಾಮದ ಮನೆಯೊಂದರಲ್ಲಿ ವಾಸವಿದ್ದ ವಿದೇಶಿ ಪ್ರಜೆಯನ್ನು ಪೊಲೀಸರು ಬಂಧಿಸಿದ್ದಾರೆ.

ವಿದೇಶಿ ಪ್ರಜೆ ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿದ್ದಾನೆಂಬ ಮಾಹಿತಿ ಸಿಸಿಬಿಯ ಮಾದಕ ದ್ರವ್ಯ ನಿಗ್ರಹ ದಳದ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಮಾಹಿತಿ ಲಭಿಸಿದೆ.

ಖಚಿತ ಮಾಹಿತಿ ಮೇರೆಗೆ ಸಿಸಿಬಿ ಪೊಲೀಸರು ಆವಲಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ ನಂತರ ಕಾರ್ಯಾಚರಣೆ ಕೈಗೊಂಡು ವಿದೇಶಿ ಪ್ರಜೆಯನ್ನು ವಶಕ್ಕೆ ಪಡೆದು, ಪರಿಶೀಲಿಸಿ 600 ಗ್ರಾಂ ಮಾದಕ ವಸ್ತುವಾದ ಬಿಳಿ ಬಣ್ಣದ ಎಂಡಿಎಂಎ ಕ್ರಿಸ್ಟಲ್‌ಗಳನ್ನು ಹಾಗೂ ಇತರೆ ವಸ್ತುಗಳನ್ನು ಜಪ್ತಿ ಮಾಡಿದ್ದು, ಇದರ ಒಟ್ಟು ಮೌಲ್ಯ 1.20 ಕೋಟಿ ರೂ.ಗಳೆಂದು ಅಂದಾಜಿಸಲಾಗಿದೆ. ಈ ವಿದೇಶಿ ಡ್ರಗ್ ಪೆಡ್ಲರ್ ತನಗೆ ಪರಿಚಯವಿಲ್ಲದವ–ರಿಂದ ಕಡಿಮೆ ಬೆಲೆಗೆ ಮಾದಕ ವಸ್ತು ಖರೀದಿಸಿ ಹೆಚ್ಚಿನ ಬೆಲೆಗೆ ಮಾರಾಟ ಮಾಡಿ ಅಕ್ರಮ ಲಾಭಗಳಿಸುತ್ತಿದ್ದುದು



ವಿಚಾರಣೆಯಿಂದ ತಿಳಿದುಬಂದಿದೆ.

ಈ ಕಾರ್ಯಾಚರಣೆಯನ್ನು ಸಿಸಿಬಿಯ ಮಾದಕ ದ್ರವ್ಯ ನಿಗ್ರಹ ದಳದ ಎಸಿಪಿ ಮಹಾನಂದ ಮತ್ತು ಸಿಬ್ಬಂದಿ ಹಾಗೂ ಆವಲಹಳ್ಳಿ ಪೊಲೀಸ್ ಠಾಣೆಯ ಅಧಿಕಾರಿ, ಸಿಬ್ಬಂದಿ ತಂಡವು ಯಶಸ್ವಿಯಾಗಿ ಕೈಗೊಂಡಿವೆ.

ಆರೋಪಿಯಿಂದ ಮೊಬೈಲನ್ನು ವಶಪಡಿಸಿಕೊಂಡಿರುವ ಪೊಲೀಸರು, ಆತ ಯಾರ್ಯಾರ ಡ್ರಗ್ ಸರಬರಾಜುಗಾರರ ಜೊತೆ ಸಂಪರ್ಕದಲ್ಲಿದ್ದ ಎಂಬುವುದನ್ನು ಪತ್ತೆ ಹಚ್ಚುತ್ತೇವೆ ಎಂದು ನಗರ ಪೊಲೀಸ್ ಕಮಿಷನರ್ ಸೀಮಂತ್‌ಕುಮಾರ್ ಸಿಂಗ್ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ಕಳೆದ ವಾರ ಇದೇ ತಂಡ ವಿದೇಶಿ ಮಹಿಳೆಯನ್ನು ಬಂಧಿಸಿ 10 ಕೋಟಿ ರೂ. ಬೆಲೆಯ ಮಾದಕ ವಸ್ತು ವಶಪಡಿಸಿಕೊಂಡಿತ್ತು.

## ವಿಶ್ವ ಯೋಗ ದಿನದಂದು 'ಯೋಗ ಸಂಗಮ' ಕಾರ್ಯಕ್ರಮ ಆಯೋಜನೆ : ದಿನೇಶ್ ಗುಂಡೂರಾವ್

ಬೆಂಗಳೂರು : ವಿಶ್ವ ಯೋಗ ದಿನಾಚರಣೆಯ ಅಂಗವಾಗಿ ಜೂ.21ರಂದು ರಾಜ್ಯದಲ್ಲಿ 'ಯೋಗ ಸಂಗಮ' ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಏಕಕಾಲದಲ್ಲಿ ರಾಜ್ಯಾದ್ಯಂತ 5 ಲಕ್ಷ ಜನರಿಂದ ಯೋಗಭ್ಯಾಸ ನಡೆಸಲು ರಾಜ್ಯ ಸರಕಾರ ಅನುವು ಮಾಡಿಕೊಡುತ್ತಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಮಂಗಳವಾರ ಇಲ್ಲಿನ ಆರೋಗ್ಯಸೌಧದಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೂ.21ರ ಮುಂಜಾನೆ 6 ಗಂಟೆಯಿಂದ 8 ಗಂಟೆಯವರೆಗೆ 5 ಸಾವಿರ ಜನರು ವಿಧಾನಸೌಧದ ಮೆಟ್ಟಿಲುಗಳ ಎದುರು ಯೋಗಾಭ್ಯಾಸ ನಡೆಸಲಿದ್ದು, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ ಶಿವಕುಮಾರ್ ಸೇರಿದಂತೆ ಶಾಸಕರು, ಸಂಸದರು, ಕ್ರೀಡಾಪಟುಗಳು, ತಾರೆಯರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದರು.

ಮೈಸೂರಿನ ಅರಮನೆ ಆವರಣದಲ್ಲಿ 'ಯೋಗ ಮಹಾಕುಂಭ' ಎಂಬ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಯೋಗ ದಿನಾಚರಣೆಯಂದು 15 ಸಾವಿರ ಜನರು ಯೋಗಭ್ಯಾಸ ನಡೆಸಲಿದ್ದಾರೆ. ಹೀಗೆ ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ 'ಯೋಗ ಸಂಗಮ' ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಪ್ರತಿ ಕಾರ್ಯಕ್ರಮದಲ್ಲಿ ಕನಿಷ್ಠ 5 ಸಾವಿರ ಜನರು ಭಾಗವಹಿಸಲಿದ್ದಾರೆ. ಬೆಳಗ್ಗೆ 7 ಗಂಟೆಯಿಂದ 7.45ರವರೆಗೆ ರಾಜ್ಯದ 100 ಆರೋಗ್ಯ ಕೇಂದ್ರಗಳಲ್ಲಿ 45 ನಿಮಿಷಗಳ ಯೋಗ ಪ್ರಾತ್ಯಕ್ಷಿಕೆ ಪ್ರದರ್ಶನ ನಡೆಯಲಿದೆ ಎಂದು ಅವರು ಮಾಹಿತಿ ನೀಡಿದರು.

ಯೋಗ ದಿನಾಚರಣೆಯ ಪ್ರಯುಕ್ತ ರಾಜ್ಯದ ಹಲವೆಡೆ ಯೋಗ ಪಾರ್ಕ್, ಯೋಗ ಧನುಷ್, ಹಸಿರು ಯೋಗ, ಯೋಗ ಮಹಾಕುಂಭ, ಯೋಗ ಸಂಂ–ಯೋಗ, ಯೋಗ ಅನ್ ಪ್ಲಗ್ಸ್ ನಂತಹ ಕಾರ್ಯಕ್ರಮಗಳನ್ನು ರಾಜ್ಯದ ಆಯುಷ್ ಇಲಾಖೆಯಿಂದ ಆಯೋಜಿಸಲಾಗಿದೆ. ಹಸಿರು ಯೋಗ ಕಾರ್ಯಕ್ರಮದ ಅಡಿಯಲ್ಲಿ 1 ಲಕ್ಷ ಗಿಡಗಳನ್ನು ನಡಲಾಗುವುದು. ಅಲ್ಲದೇ ಯೋಗ ಧನಷ್ ಎಂಬ ಕಾರ್ಯಕ್ರಮದ ಅಡಿಯಲ್ಲಿ 5 ಸಾವಿರ ಶಾಲೆಗಳಲ್ಲಿ ಯೋಗ ಪ್ರೋಟೋಕಾಲ್ ಅನ್ನು ಹೇಳಿಕೊಡಲಾಗುವುದು ಎಂದು ಅವರು ತಿಳಿಸಿದರು.

ಜೂನ್ ಕೊನೆ ವಾರದಲ್ಲಿ 'ಒಂದು ವಿಶ್ವ–ಒಂದು ಆರೋಗ್ಯದಲ್ಲಿ ಯೋಗದ ಪಾತ್ರ' ಎಂಬ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಮೈಸೂರು ವಿಶ್ವವಿದ್ಯಾಲಯದ ವಿಜ್ಞಾನಭವನದಲ್ಲಿ ಆಯೋಜಿಸಿದ್ದು, ಇದರಲ್ಲಿ ರಾಷ್ಟ್ರೀಯ ಯೋಗ ತಜ್ಞರು ತಮ್ಮ ವಿಚಾರವನ್ನು ಮಂಡಿಸಲಿದ್ದಾರೆ. ಜುಲೈ ಮೊದಲನೆಯ ವಾರದಲ್ಲಿ ನಗರದಲ್ಲಿರುವ ನಿಮಾನ್ಸ್ ಆಸ್ಪತ್ರೆಯ ಸಭಾಂಗಣದಲ್ಲಿ 'ಮಾನಸ ಯೋಗ' ಎಂಬ ವಿಚಾರ ಸಂಕಿರಣವನ್ನು ಆಯೋಜಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

ಇದೇ ವೇಳೆ ಯೋಗದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ಡಿಜಿಟಲ್ ಪೋಸ್ಟರ್ ಬಿಡುಗಡೆ ಮಾಡಲಾಯಿತು. ಆಯುಷ್ ಇಲಾಖೆಯ ಆಯುಕ್ತ ವಿಪಿನ್ ಸಿಂಗ್ ಇದ್ದರು.

## ಚಿಕ್ಕಮಗಳೂರು ಜಿಲ್ಲೆಯಲ್ಲಿ ನಿಲ್ಲದ ಮುಂಗಾರು ಮಳೆ ಆರ್ಭಟ: ನದಿಗಳಲ್ಲಿ ಹೆಚ್ಚಿದ ನೀರಿನ ಹರಿವು





ಚಿಕ್ಕಮಗಳೂರು : ಕಾಫಿನಾಡಿ ಮಲೆನಾಡು ಭಾಗದಲ್ಲಿ ಮುಂಗಾರು ಮಳೆಯ ಆರ್ಭಟ ಹೆಚ್ಚುತ್ತಲೇ ಇದೆ. ಆಗಾಗ್ಗೆ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ಮಲೆನಾಡು ಭಾಗದ ಪ್ರಮುಖ ನದಿಗಳು ತುಂಬಿ ಹರಿಯುತ್ತಿದ್ದರೇ, ಮಂಗಳವಾರ ತರೀಕೆರೆ ತಾಲೂಕಿನಲ್ಲಿ ಬೃಹತ್ ಮರವೊಂದು ಭಾರೀ ಮಳೆ ಗಾಳಿಗೆ ನಿಂತಿದ್ದ ಕಾರಿನ ಮೇಲೆ ಉರುಳಿ ಬಿದ್ದ ಪರಿಣಾಮ ಕಾರು ಸಂಪೂರ್ಣವಾಗಿ ಜಖಂಗೊಂಡಿದೆ.

ಕಳಸ ತಾಲೂಕಿನ ಮರಸಣಿಗೆ ಗ್ರಾಮದಲ್ಲಿ ಮರವೊಂದು ಮನೆಯ ಮೇಲೆ ಉರುಳಿ ಬಿದ್ದ ಪರಿಣಾಮ ಮನೆ ಸಂಪೂರ್ಣವಾಗಿ ಜಖಂಗೊಂಡ ಘಟನೆ ನಡೆದಿದೆ.

ಜಿಲ್ಲೆಯ ಬಯಲು ಭಾಗದಲ್ಲಿ ಮುಂಗಾರು ಮಳೆಯ ಆರ್ಭಟ ಕೊಂಚ ಕಡಿಮೆ ಇದ್ದರೂ ಮಲೆನಾಡು ಭಾಗದಲ್ಲಿ ಮಳೆ ಆರ್ಭಟ ದಿನದಿಂದ ದಿನಕ್ಕೆ ಜೋರಾಗುತ್ತಲೇ ಇದೆ. ಭಾರೀ ಮಳೆಯಿಂದಾಗಿ ಮಲೆನಾಡು ಭಾಗದಲ್ಲಿ ಜನಜೀವನ ಅಸ್ತವ್ಯಸ್ತಗೊಂಡಿದೆ. ಮಂಗಳವಾರ ಬೆಳಗ್ಗೆ ಜಿಲ್ಲೆಯ ತರೀಕೆರೆ ತಾಲೂಕಿನ ಕಲ್ಲತ್ತಗಿರಿ ಭಾಗದಲ್ಲಿ ಧಾರಾಕಾರ ಮಳೆಯಾಗಿದ್ದು, ಮಳೆಯೊಂದಿಗೆ ಭಾರೀ ಗಾಳಿ ಬೀಸಿದೆ. ಭಾರೀ ಗಾಳಿ ಪರಿಣಾಮ ಕಲ್ಲತ್ತಗಿರಿಗೆ ಪ್ರವಾಸಕ್ಕೆ ಬಂದಿದ್ದವರ ಕಾರಿನ ಮೇಲೆ ಮರವೊಂದು ಉರುಳಿ ಬಿದ್ದ ಪರಿಣಾಮ ಕಾರು ಸಂಪೂರ್ಣವಾಗಿ ಜಖಂಗೊಂಡಿದೆ. ಅದೃಷ್ಟವಶಾತ್ ಕಾರಿನಲ್ಲಿದ್ದವರು ಕಾರಿನಿಂದ ಹೊರಗಿದ್ದ ಪರಿಣಾಮ ಭಾರೀ ಅನಾಹುತ ತಪ್ಪಿದಂತಾಗಿದೆ.

ಕಳಸ ತಾಲೂಕಿನಾದ್ಯಂತ ಮಂಗಳವಾರ ಬೆಳಗ್ಗೆ ಭಾರೀ ಮಳೆ ಸುರಿದಿದ್ದು, ಭಾರೀ ಮಳೆ ಹಾಗೂ ಗಾಳಿಯಿಂದಾಗಿ ಮರಸಣಿಗೆ ಗ್ರಾಮದಲ್ಲಿ ಪ್ರೇಮಾ ಎಂಬವರ ಮನೆಯ ಮೇಲೆ ಮರವೊಂದು ಉರುಳಿ ಬಿದ್ದು ಮನೆ ಸಂಪೂರ್ಣವಾಗಿ ಜಖಂಗೊಂಡಿದೆ. ಮರ ಮು–ರಿದು ಬೀಳು ಶಬ್ಧ ಕೇಳಿ ಮನೆ ಮಂದಿ ಹೊರ ಬಂದಿದ್ದರಿಂದ ಮನೆಯಲ್ಲಿದ್ದವರಿಗೆ ಯಾವುದೇ ತೊಂದರೆಯಾಗದೇ ಸುರಕ್ಷಿತರಾಗಿದ್ದಾರೆ. ಸ್ಥಳಕ್ಕೆ ಗ್ರಾಪಂ, ಕಂದಾಯಾಧಿಕಾರಿಗಳ ತಂಡ ಬೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಇನ್ನು ಜಿಲ್ಲೆಯ ಶೃಂಗೇರಿ, ಮೂಡಿಗೆರೆ, ಕೊಪ್ಪ, ಎನ್.ಆರ್.ಪುರ ತಾಲೂಕಿನಾದ್ಯಂತ ಮಂಗಳವಾರ ಬೆಳಗ್ಗೆ ಧಾರಾಕಾರ ಮಳೆಯಾಗಿದ್ದು, ಮಧ್ಯಾಹ್ನದ ವೇಳೆ ಕೊಂಚ ಬಿಡುವು ನೀಡಿದ್ದ ಮಳೆ ಸಂಜೆ ವೇಳೆ ಮತ್ತೆ ಆರ್ಭಟಿಸಲಾರಂಭಿಸಿದೆ. ಭಾರೀ ಮಳೆಯೊಂದಿಗೆ ಗಾಳಿಯ ಆರ್ಭಟವೂ ಹೆಚ್ಚಾಗಿರುವುದರಿಂದ ಮರಗಳು ಎಲ್ಲೆಂದರಲ್ಲಿ ಧರಾಶಹಿಯಾಗುತ್ತಿವೆ. ಮರಗಳು ವಿದ್ಯುತ್ ಮಾರ್ಗಗಳ ಮೇಲೆ ಬೀಳುತ್ತಿರುವುದರಿಂದ ವಿದ್ಯುತ್ ಕಂಬಗಳೂ ನೆಲ್ಲಕ್ಕುರುಳಿ ಹಲವು ಗ್ರಾಮಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ಮೆಸ್ಕಾಂ ಸಿಬ್ಬಂದಿ ವಿದ್ಯುತ್ ಸಂಪರ್ಕ ಕಲ್ಪಿಸಲು ಮಳೆಯ ನಡುವೆಯೂ ಶ್ರಮಿಸುತ್ತಿದ್ದಾರೆ.

ಮಲೆನಾಡು ಭಾಗದಲ್ಲಿ ಭಾರೀ ಮಳೆ ಪರಿಣಾಮ ಭದ್ರಾ, ತುಂಗಾ, ಹೇಮಾವತಿ ನದಿಗಳೂ ಸೇ–ರಿದಂತೆ ಹಳ್ಳಕೊಳ್ಳಗಳು ತುಂಬಿ ಹರಿಯುತ್ತಿವೆ. ಧಾರಾಕಾರ ಮಳೆ ಮುಂದುವರಿದಲ್ಲಿ ನದಿಗಳ ನೆರೆ ನೀರು ಅಕ್ಕಪಕ್ಕದ ಹೊಲ ಗದ್ದೆಗಳಿಗೆ ನುಗ್ಗಿ ಭತ್ತ, ಶುಂಠಿಯಂತಹ ಬೆಳೆಗಳಿಗೆ ಹಾನಿಯುಂಟು ಮಾಡುವ ಸಾಧ್ಯತೆ ಹೆಚ್ಚಿದೆ.

ಚಿಕ್ಕಮಗಳೂರು ತಾಲೂಕಿನಾದ್ಯಂತ ಮಂಗಳವಾರ ಆಗಾಗ್ಗೆ ಸಾಧಾರಣ ಮಳೆಯಾಗಿದ್ದರೇ, ಉಳಿದಂತೆ ಮಳೆ ಬಿಡುವು ನೀಡಿತ್ತು, ಆದರೆ ಇಡೀ ದಿನ ಮೋಡ ಕವಿದ ವಾತಾವರಣ ಇದ್ದು, ರಾತ್ರಿ ವೇಳೆ ಮಳೆ ಸುರಿಯುವ ಸಾಧ್ಯತೆ ಹೆಚ್ಚಿತ್ತು. ಬಯಲು ಭಾಗದ ಕಡೂರು, ತರೀಕೆರೆ, ಅಜ್ಜಂಪುರ ತಾಲೂಕುಗಳ ವ್ಯಾಪ್ತಿಯಲ್ಲಿ ಆಗಾಗ್ಗೆ ಉತ್ತಮ ಮಳೆಯಾಗಿದ್ದು, ಮಳೆಯಿಂದಾಗಿ ಬಯಲು ಭಾಗದಲ್ಲಿ ಕೃಷಿ ಚಟುವಟಿಕೆ ಚುರುಕುಗೊಂಡಿದೆ.

# ಬಣಜಿಗ ಸಮಾಜ: ನೂತನ ಪದಾಧಿಕಾರಿಗಳ ಆಯ್ಕೆ



ಮುದ್ದೇಬಿಹಾಳ: ತಾಲ್ಲೂಕು ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾಗಿ ಮೂರು ವರ್ಷದ ಅವಧಿಗೆ 2025-28 ಅಶೋಕ ಚಟ್ಟೇರ ಅವಿರೋಧವಾಗಿ ಆಯ್ಕೆಯಾದರು. ಪಟ್ಟಣದ ಕಿಲ್ಲಾದಲ್ಲಿರುವ ಹೊಸಮಠದಲ್ಲಿ ನಡೆದ ಬಣಜಿಗ ಸಮಾಜದ ಸರ್ವ ಸದಸ್ಯರ ಸಭೆಯಲ್ಲಿ ಯುವ ಘಟಕ ಹಾಗೂ ಮಹಿಳಾ ಘಟಕದ ಪದಾಧಿಕಾರಿಗಳ ಆಯ್ಕೆ ಸಹ ನಡೆಯಿತು.

ಈವರೆಗೆ ಅಧ್ಯಕ್ಷರಾಗಿದ್ದ ಪ್ರಭುರಾಜ ಕಲಬುರ್ಗಿ ಮಾತನಾಡುತ್ತಾ, ಈಗ್ಗೆ ಎರಡು ವರ್ಷಗಳ ಹಿಂದೆಯೇ ನೂತನ ಪದಾಧಿಕಾರಿಗಳ ಆಯ್ಕೆ ನಡೆಯಬೇಕಿತ್ತು. ರಾಜ್ಯ ಘಟಕದ ಪದಾಧಿಕಾರಿಗಳ ಆಯ್ಕೆ ಸಹ ವಿಳಂಬವಾಗಿದ್ದರಿಂದ ನಮ್ಮಲ್ಲಿ ಸಹ ಆಯ್ಕೆ ಪ್ರಕ್ರಿಯೆ ತಡವಾಗಿ ನಡೆಯಿತು ಎಂದರು. ಸಭೆಯಲ್ಲಿ ಉಪಸ್ಥಿತರಿದ್ದ ಬಣಜಿಗ ಸಮಾಜದ ಹಿರಿಯರಾದ ಬಸವರಾಜ ನಾವದಗಿ, ಬಸವರಾಜ ನಾಲತವಾಡ, ದಾನಪ್ಪ ನಾಗಠಾಣ, ಸಂಗಣ್ಣ ಕಂಚ್ಯಾಣಿ, ಎಂ.ವಿ.ಮಾಟಲದಿನ್ನಿ, ವಿಶ್ವನಾಥ್ ಕಿಣಗಿ, ಮುರಿಗೆಪ್ಪ ಮೋಟಗಿ, ಮುತ್ತು ಕಡಿ, ನಿಂಗಣ್ಣ ಚಟ್ಟೇರ, ರಾಜು ಜೋಳದ, ಮಹಾಬಲೇಶ್ವರ ಗಡೇದ, ಲೋಹಿತ ನಾಲತವಾಡ, ಸಂಗಮೇಶ ನಾವದಗಿ, ಸೋಮಶೇಖರ ಅಣೆಪ್ಪನವರ, ಪ್ರವೀಣ ನಾಗಠಾಣ, ಡಿ.ಎಸ್.ಚಳಗೇರಿ, ಚಂದ್ರಶೇಖರ ಕಡಿ, ರಾಜು ದಡ್ಡಿ, ಶಿವಾನಂದ ಚಿಲ್ಲಾಳಶೆಟ್ಟಿ, ಉಮೇಶ ತಾರನಾಳ, ಮಹಾಂತೇಶ ಮೋಟಗಿ, ಮತ್ತಿತರರು ಸೇರಿದ್ದರು. ಆನಂದ ಕಂಠಿ ಪ್ರಾಸ್ತಾವಿಕ ಮಾತನಾಡಿದರು. ರುದ್ರೇಶ ಕಿತ್ತೂರು ನಿರೂಪಿಸಿದರು.

ನೂತನ ಪದಾಧಿಕಾರಿಗಳು: ಎಂ.ಎಸ್.ನಾವದಗಿ ವಕೀಲರು ಗೌರವಾಧ್ಯಕ್ಷರು. ಅಧ್ಯಕ್ಷರಾಗಿ ಅಶೋಕ ಚಟ್ಟೇರ, ಉಪಾಧ್ಯಕ್ಷರಾಗಿ ಬಿ.ಎಸ್.ಚಿನಿವಾರ ನಾಲತವಾಡ, ಪ್ರಧಾನ ಕಾರ್ಯದರ್ಶಿಯಾಗಿ ರಾಜು ಬಳ್ಳೊಳ್ಳಿ, ಖಜಾಂಚಿಯಾಗಿ ಸಂತೋಷ ನಾಯನೇಗಲಿ ಯುವ ಘಟಕದ ಅಧ್ಯಕ್ಷರಾಗಿ ಶಂಕರ ಕಡಿ, ಉಪಾಧ್ಯಕ್ಷರಾಗಿತಬಸವರಾಜ ದಡ್ಡಿ ವಕೀಲರು, ಸುಚೇತ ಚಳಗೇರಿ ಪ್ರಧಾನ ಕಾರ್ಯದರ್ಶಿ, ಮಹಿಳಾ ಘಟಕದ ಅಧ್ಯಕ್ಷರಾಗಿ ಶೋಭಾ ಉಮೇಶ ನಾಗಠಾಣ,ಉಪಾಧ್ಯಕ್ಷರಾಗಿ ಕವಿತಾ ದಡ್ಡಿ, ಕಾರ್ಯದರ್ಶಿಯಾಗಿ ರೇಖಾ ಗಡೇದ ಆಯ್ಕೆಯಾದರು.

## ಸಾರ್ವಜನಿಕರ ಗಮನಕ್ಕೆ

ಗದಗ : ಇಸ್ರೇಲ್ ಮತ್ತು ಇರಾನ್ ನಡುವೆ ನಿರ್ಮಾಣವಾಗಿರುವ ಉದ್ವಿಗ್ನ ಪರಿಸ್ಥಿತಿಯು ಆ ದೇಶಗಳಲ್ಲಿ ನೆಲೆಸಿರುವ ವಿದೇಶಿಗರಿಗೆ ಆತಂಕ ಉಂಟು ಮಾಡಿದೆ. ಕರ್ನಾಟಕದ ಸುಮಾರು 9 ವಿದ್ಯಾರ್ಥಿಗಳು ಇರಾನ್ ದೇಶದ ರಾಜಧಾನಿಯಾದ ತೆಹರಾನ್ ಸಮೀಪದಲ್ಲಿರುವ ಖುಚಿ-ಖಜ ಭಜ್ಞುಣು ಒಜಜುಭಿಚಿಟ ಗಟಿ-ತುಜಥಿುಣಥಿ ಯಲ್ಲಿ ವೈದ್ಯಕೀಯ ಶಿಕ್ಷಣ ಓದುತ್ತಿದ್ದು ಸದರಿ ಉದ್ವಿಗ್ನ ಪರಿಸ್ಥಿತಿಯಿಂದಾಗಿ ಆತಂಕಗೊಂಡಿರುತ್ತಾರೆ. ಈ ವಿದ್ಯಾರ್ಥಿಗಳ ಪೈಕಿ ಓರ್ವ ವಿದ್ಯಾರ್ಥಿಯಾದ ನದೀಮ್ ಹುಸೇನ್‌ರವರು ಹಾಗೂ ಬೆಂಗಳೂ-ರಿನಲ್ಲಿರುವ ಅವರ ಪೋಷಕರು ಅನಿವಾಸಿ ಭಾರತೀಯ ಸಮಿತಿ, ಬೆಂಗಳೂರು ಕಚೇ-ರಿಗೆ ದೂರವಾಣಿ ಮುಖೇನ ಸಂಪರ್ಕಿಸಿದ್ದು ಅವರ ನೋವನ್ನು ತೋಡಿಕೊಂಡಿದ್ದು, ಕೂಡಲೇ ದೇಶಕ್ಕೆ ಹಿಂದಿರುಗಲು ಇಚ್ಛೆಯನ್ನು ವ್ಯಕ್ತಪಡಿಸಿರುತ್ತಾರೆ. ಇದಕ್ಕೆ ಸ್ಪಂದಿಸಿದ ಅನಿವಾಸಿ ಭಾರತೀಯ ಸಮಿತಿ , ಉಪಾಧ್ಯಕ್ಷರಾದ ಡಾ.ಆರತಿ ಕೃಷ್ಣ ರವರು ಕೂಡಲೇ ವಿದೇಶಾಂಗ ವ್ಯವಹಾರಗಳ ಸಚಿವಾಲಯಕ್ಕೆ ಪತ್ರ ಬರೆದು ಇರಾನ್ ನಲ್ಲಿ ನೆಲೆಸಿರುವ ಈ ಮೇಲ್ಕಂಡ ವಿದ್ಯಾರ್ಥಿಗಳನ್ನು ಕೂಡಲೇ ಕರೆತರಲು ಕ್ರಮಗಳನ್ನು ಕೈಗೊಳ್ಳುವಂತೆ ಕೋ-ರಿರುತ್ತಾರೆ. ಇದಲ್ಲದೇ ದೂರವಾಣಿ ಮುಖೇನ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ಖುದ್ದು ಪರಿಸ್ಥಿತಿಯನ್ನು ಅವಲೋಕಿಸಿ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಅನಿವಾಸಿ ಭಾರತೀಯ ಸಮಿತಿ ಉಪಾಧ್ಯಕ್ಷರ ವಿಶೇಷ ಕರ್ತವ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯುವಕರು ದುಶ್ಚಟಗಳಿಂದ ದೂರ ಇರಿ:ಸಿಪಿಐ ಮಠಪತಿ



ಬೈಲಹೊಂಗಲ: ಯುವಕರು ದುಷ್ಚ-ರಿಂದ ದೂರವಿದ್ದು ಕಾನೂನುಗಳನ್ನು ಪಾಲಿಸಿ ಹಿರಿಯರಿಗೆ ಗೌರವ ನೀಡಿ ಒಳ್ಳೆಯ ವಿದ್ಯಾಭ್ಯಾಸ ಮಾಡಿದಲ್ಲಿ ಯಶಸ್ಸು ಸಾಧಿಸಲು ಸಾಧ್ಯ ಎಂದು ಮುರಗೋಡ ಠಾಣೆಯ ಸಿಪಿಐಯ್ ಆಯ್.ಎಮ್. ಮಠಪತಿ ಯುವಕರಿಗೆ ತಿಳಿ ಹೇಳಿದರು.

ಸಮೀಪದ ಹೊಸೂರ ಗ್ರಾಮದ ಡಾ. ಅಂಬೇಡ್ಕರ್ ದಲಿತ ಕಾಲೋನಿಯಲ್ಲಿ ನಡೆದ ಎಸ್ಸಿ.ಎಸ್ಟಿ ಕುಂದುಕೊರತೆ ಸಭೆಯಲ್ಲಿ ಮಾತನಾಡಿ, ಇಂದಿನ ಯುವಕರು ಮೋಜು ಮಸ್ತಿಗಾಗಿ ಕಾಲೇಜುಗಳಿಗೆ ಬೈಕ್ ಮೇಲೆ ಹೆಲ್ಮೆಟ್ ಇಲ್ಲದೆ ತೆರಳುವದು ಗುಂಪುಗಾರಿಕೆ, ಪುಂಡರ ಹಾಗೂ ಮಾದಕ ವ್ಯಸನಿಗಳ ಗೆಳೆತನ ಬೇಳೆಸಿಕೊಂಡು ತಮ್ಮ ಜೀವನ ಹಾಳು ಮಾಡಿಕೊಳ್ಳುತ್ತಿರುವದು ರಸ್ತೆಯ ಅಪಘಾತಗಳಲ್ಲಿ ಪ್ರಾಣ ಹಾನಿ, ಅಂಗಾಗಗಳ ಊನ ಮಾಡಿಕೊಂಡು ಸಮಾಜದಲ್ಲಿ ಒಳ್ಳೆಯ ಪ್ರಜೆಗಳಾಗಿ ಸ್ಮಾರಕವಾಗದೆ ಮಾರಕವಾಗುತ್ತಿರುವದು ಕಳವಳಕಾರಿಯಾಗಿದೆ. ಮಕ್ಕಳನ್ನು ಶಾಲೆ ಕಾಲೇಜುಗಳಿಗೆ ಕಳಿಸುವದಷ್ಟೆ ಪಾಲಕರ ಕಾರ್ಯವಾಗದೆ ಅವರ ಮೇಲೆನಿಗಾ ಇಟ್ಟು ಅವರ ಚಲನವಲನಗಳನ್ನು ಗಮನಿಸಿ ಅವರಿಗೆ ಪಾಲಕರು ಮಾರ್ಗದರ್ಶನ ಮಾಡಬೇಕು ಇಲ್ಲವಾದರೆ ಪ್ರತಿನಿತ್ಯ ಠಾಣೆಗೆ ಬರುವ ಪ್ರಕರಣಗಳಲ್ಲಿ ತಂದೆ ತಾಯಿಯರನ್ನು ಹೊರಹಾಕಿ ಅವರ ವೃದ್ದಾಪ ಜೀವನದಲ್ಲಿ ಮುಳ್ಳಾಗುತಿ-ದ್ದಾರೆ ಅಲ್ಲದೆ ಸಮಾಜಘಾತುಕ ಕೃತ್ಯಗಳಲ್ಲಿ ಭಾಗಿಯಾಗುತ್ತಿರುವದು ಹೆಚ್ಚಾಗುತ್ತಿದೆ ಎಂದರು.

ನ್ಯಾಯವಾದಿ ಎಫ್.ಎಸ್.ಸಿದ್ದನಗೌಡರ ಮಾತನಾಡಿ, ಸರ್ಕಾರ ಎಸ್ಸಿ ಎಸ್ಟಿ ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾಗಿ ಅತಿ ಹೆಚ್ಚಿನ ಪ್ರಾಧಾನ್ಯತೆಯನ್ನು ನೀಡುತಿದ್ದು ಆರ್ಥಿಕ ಸಾಹಯ ಪಡೆದುಕೊಂಡು ತಮ್ಮ ಭವಿಷ್ಯ ಕಟ್ಟಿಕೊಳ್ಳಬೇಕು. ಯಾವ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು. ಶಿಕ್ಷಣವೇ ಸರ್ವ ಸಮಸ್ಯೆಗಳಿಗೆ ಪರಿಹಾರವಾಗಬಲ್ಲದು. ಎಸ್.ಎಸ್. ಎಲ್.ಸಿ. ಪಿಯುಸಿ, ಪದವಿ ಪೂರೈಸಿದ ವಿದ್ಯಾರ್ಥಿಗಳು ತಮ್ಮ ಉನ್ನತ ಶಿಕ್ಷಣದಡಿಗೆ ಗಮನ ಹರಿಸಬೇಕು. ಆದೂ ಸಾಧ್ಯವಾಗದೆ ಇದ್ದಲ್ಲಿ ಸ್ವ ಉದ್ಯೋಗ ಕೈಗೊಳ್ಳಲು ತರಬೇತಿ ಪಡೆದು ಸರ್ಕಾರದ ಸಾಹಯಧನದಲ್ಲಿ ಉದ್ಯಮಿಗಳಾಗಿ ಇತರರಿಗೆ ಉದ್ಯೋಗ ನಿಡುವತ್ತ ಗಮನ ಹರಿಸಬೇಕೆಂದರು.

ಈ ಸಂದರ್ಭದಲ್ಲಿ ದಲಿತ ಕಾಲೋನಿಯ ಜನತೆ ತಮ್ಮ ಸಮಸ್ಯೆಗಳನ್ನು ಹೇಳಿಕೊಂಡು ಅವುಗಳಿಗೆ ಪರಿಹಾರ ಕಂಡುಕೊಂಡರು.

ಘುಂಡಲಿಕ ಇಂಗಳಗಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಮುಖ್ಯಮಂತ್ರಿ ಪ್ರಶಸ್ತಿ ವಿಜೇತ ಸಿಪಿಐಯ್ ಆಯ್.ಎಮ್. ಮಠಪತಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿನಿ ಮಧುಮತಿ ಜುಮೇತ್ರಿ ಅವರನ್ನು ಸತ್ಕರಿಸಲಾಯಿತು.

ಕಾರ್ಯಕ್ರಮದಲ್ಲಿ ಪೋಲಿಸ್ ಸಿಬ್ಬಂದಿಗಳಾದ ಎಫ್.ಎಮ್.ಮದ್ಲಿ, ಸುರೇಶ ಹುಂಬಿ, ಗ್ರಾಪಂ ಉಪಾಧ್ಯಕ್ಷ ಬಸವರಾಜ ಪೆಂಟೇದ, ಗ್ರಾಪಂ ಸದಸ್ಯರಾದ ಅಪ್ಪು ಈಳಿಗೇರ, ಮುಶೆಪ್ಪ ಜಡಿ, ಬಸವ್ವ ಗಾಣಿಗೇರ, ಜಯಶ್ರೀ ಇಂಗಳಗಿ, ಮಡಿವಾಳಪ್ಪ ಕಮತಗಿ, ಮಲ್ಲಿಕಾರ್ಜುನ ಕರಡಿಗುದ್ದಿ, ಸಂಜು ಪಾಟೀಲ, ಸುರೇಶ ಬಾಳೆಕುಂದರಗಿ ವೇದಿಕೆ ಮೇಲಿದ್ದರು.

ಕಾರ್ಯಕ್ರಮದಲ್ಲಿ ನ್ಯಾಯವಾದಿ ಸಂಜು ಜುಮೇತ್ರಿ, ಅಕ್ಷಯ ಗಡ್ಡಿ, ಹಣಮಂತ ಮಲಮೇತ್ರಿ, ಶಂಕರ ಹಿರುನವರ, ಶೋಭಾ ಮಲಮೇತ್ರಿ, ಸುಧಾ ಹಿರುನವರ, ಮನಿಕಂಠ ಮಲಮೇತ್ರಿ ರಾಮಪ್ಪ ಹಿರೂನವರ, ಶಿವಪ್ಪ ಹಿರೂನವರ, ಸುನಂದಾ ಗಡ್ಡಿ ಸೇರಿದಂತೆ ಇನ್ನಿತರು ಇದ್ದರು.

# ಅಂಚೆ ಇಲಾಖೆ ಸೇವೆ ಸಮಾಜ ಕಡೆಯ ವ್ಯಕ್ತಿಗೂ ಲಭಿಸಲಿದೆ : ರಮೇಶ ಮಡಿವಾಳರ



ಗದಗ: ಸಮಾಜದ ಕಡೆಯ ವ್ಯಕ್ತಿಗೂ ವಿವಿಧ ಅಂ-ಚೆಸೇವೆ ಕಲ್ಪಿಸುವ ಸದಾವಕಾಶ ಲಭಿಸಿದೆ ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ರಮೇಶ ಮಡಿವಾಳರ ಅಭಿಪ್ರಾಯಪಟ್ಟರು.

ಭಾರತೀಯ ಅಂಚೆ ಇಲಾಖೆಯ ಆಶ್ರಯದಲ್ಲಿ ಜೆ.ಟಿ.ಕಾಲೇಜ್ ಸಭಾ ಭವನದಲ್ಲಿ ಸೋಮವಾರ ನಡೆದ ಗದಗ ವಿಭಾಗೀಯ ವಿಭಾಗ ಮಟ್ಟದ ಪ್ರಶಸ್ತಿ ವಿತರಣೆ ನೆರವೇರಿಸಿ ಮಾತನಾಡಿ, ಪದವಿ ಸೇರಿದಂತೆ ವಿವಿಧ ಕ್ಷೇತ್ರದ ಜನರನ್ನು ಅಂಚೆ ಜೀವ ವಿಮೆ ಕ್ಷೇತ್ರದ ವ್ಯಾಪ್ತಿಗೆ ತರುವ ಮಹತ್ವ ಸದಾವಕಾಶ ಅಂಚೆ ಇಲಾಖೆಗೆ ಸಿಕ್ಕಿದೆ. ಈ ಯೋಜನೆ ಲಾಭ ಗ್ರಾಹಕರಿಗೆ ತಲುಪಿಸುವ ದಿಸೆಯಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಲು ಮುಂದಾಗಬೇಕು ಎಂದರು.

ಗ್ರಾಹಕರಿಗೆ ತಂತ್ರಜ್ಞಾನದ ಕೆಲವು ಉನ್ನತ ಅನುಕೂಲಗಳು ಮತ್ತು ಸೇವೆ ವಲಯದಲ್ಲಿ ಹೊಸ ನೀತಿ ರೂಪಿಸುವ ಸಲುವಾಗಿ ಕೇಂದ್ರ ಸರ್ಕಾರ ವಿವಿಧ ಮಹತ್ವದ ಯೋಜನೆಗಳನ್ನು ದೇಶದ ಎಲ್ಲೆಡೆ ಪರಿಚಯಿಸಲು ಅಂಚೆ ಇಲಾಖೆ ಬಗೆಗೆ ಒಲವು ತೋರುತ್ತವೆ . ಹಾಗಾಗಿ ಅಂಚೆ ಇಲಾಖೆ ಸಿಬ್ಬಂದಿ ಕೇಂದ್ರ ಸರ್ಕಾರ ಅಂಚೆ ಇಲಾಖೆಯ ಮೂಲಕ ವಿವಿಧ ಸೇವೆಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸುವ ಕೆಲಸದ ಹೊಣೆಗಾ-ರಿಕೆಯನ್ನು ಗ್ರಾಹಕರ ವಿಶ್ವಾಸಾರ್ಹತೆಗೆ ತಕ್ಕಂತೆ ಸೇವೆ ನೀಡಲು ಮುಂದಾಗಬೇಕು ಎಂದರು.

ಪ್ರತಿಯೊಬ್ಬ ನೌಕರರು ನಿಮ್ಮ ಕುಟುಂಬದ ಆರೋಗ್ಯ ಮತ್ತು ಒಳ್ಳೆಯ ಹವ್ಯಾಸ ರೂಢಿಸಿಕೊಳ್ಳಬೇಕು. ಅಂದಾಗ ಮಾತ್ರ ನಮ್ಮ ಇಲಾಖೆ ಸಾಧನಾ ನಾಗಲೋಟ ದೇಶದ ಎಲ್ಲೆಡೆ ಪ್ರಚುರಪಡಿಸಲು ಅತ್ಯಂತ ಸಹಕಾರಿಯಾಗಿದೆ ಎಂದರು. ರೋಣ ಉಪ ವಿಭಾಗ ಅಂಚೆ ನಿರೀಕ್ಷಕ ವೆಂಕಟೇಶರಡ್ಡಿ ಕೊಳ್ಳಿ ಮಾತನಾಡಿ, ರೋಣ ಉಪ ವಿಭಾಗದಪ್ರತಿಯೊಬ್ಬ ಉದ್ಯೋಗಿಗಳು ಪರಸ್ಪರ, ಪ್ರೀತಿ, ವಿಶ್ವಾಸ ಸ್ನೇಹಪರ ಪಾಲ್ಗೊಳ್ಳುವಿಕೆ ಕೆಲಸದಿಂದಾಗಿಗದಗ ವಿಭಾಗ ರಾಷ್ಟ್ರ ಹಾಗೂ ರಾಜ್ಯ , ವಲಯ ಮಟ್ಟದಲ್ಲಿ ಉನ್ನತ ಸ್ಥಾನ ಪಡೆಯಲು ಮತ್ತು ಹೆಸರು ಗಳಿಸಲು ಸಾಧ್ಯವಾಗಿದೆ ಎಂದರು.

ವಿವಿಧ ಕ್ಷೇತ್ರದಲ್ಲಿ ಸಾಧನೆ ತೋರಿದ ಸಾಧಕರ ಪರಿಶ್ರಮ ಅಪಾರವಾಗಿದೆ. ಹಾಗಾಗಿ ಇಲಾಖೆ ಸಿಬ್ಬಂದಿಗೆ ಸನ್ಮಾನಿಸಿ, ಗೌರವ ಹೆಚ್ಚೆಚ್ಚು ಕೆಲಸ ಮಾಡಲು ಪ್ರೇರಣೆ ಆಗಲಿದೆ. ಇನ್ನೂ ಮುಂಬರುವ ದಿನಗಳಲ್ಲಿ ಜನಸ್ನೇಹಿ ಯೋಜನೆಗಳನ್ನು ಗ್ರಾಹಕರಿಗೆ ತಲುಪಿಸುವ ಮೂಲಕ ಗದಗ ವಿಭಾಗೀಯ ಹೆಸರು ಮುಂಬರುವ ದಿನಗಳಲ್ಲಿ ಮುಂಚೂಣಿಯಲ್ಲಿ ಇರಲಿದೆ ಎಂದರು.

ಅಂಚೆ ಸಹಾಯಕ ಬಸವರಾಜ ಸೇಡದ ಮಾತನಾಡಿ, ಇದೇ 23 ರಂದು ಗದಗ ವಿಭಾಗೀಯ ಎಲ್ಲೆಡೆ ಐಟಿ 2.0 ಅನುಷ್ಠಾನಕ್ಕೆ ಬರಲಿದೆ. ಮುಂಬರುವ ದಿನಗಳಲ್ಲಿ ಜನರಿಗೆ ಅತ್ಯಂತ ತ್ವ-ರಿತ ಮತ್ತು ತಂತ್ರಜ್ಞಾನದ ಸಹಾಯದೊಂದಿಗೆ ಗ್ರಾಹಕರ ವಿಶ್ವಾಸಾರ್ಹತೆ ಸೇವೆ ವಿಫಲ ಅವಕಾಶ ದೊರಕಿಸಲು ಮುಂದಾಗಿದೆ. ಈ ಕೆಲಸ ಪತ್ರ ಬಟವಾಟೆ ಸೇವೆ ಕ್ಷೇತ್ರದಲ್ಲಿ ಹೊಸ ಭಾಷ್ಯೆ ಆಗಲಿದೆ ಎಂದರು.

ಗದಗ ವಿಭಾಗೀಯ ಸಹಾಯಕ ಅಂಚೆ ಅಧೀಕ್ಷಕ ಶ್ರೀಕಾಂತ ಜಾದವ ಪ್ರಾಸ್ತವಿಕವಾಗಿ ಮಾತನಾಡಿ, ಅಂಚೆ ಬಟವಾಡೆ ಜೊತೆಗೆ ಉಳಿತಾಯ ಖಾತೆ, ಆರ್.ಡಿ. ಗುಂಪು ವಿಮೆ ಮತ್ತು ವಿವಿಧ ವಿಮಾ ಯೋಜನೆಗಳು ಸೇರಿದಂತೆ ಹಲವು ಬ್ಯಾಂಕಿಂಗ್ ಸೌಲಭ್ಯಗಳನ್ನು ಅಂಚೆ ಇಲಾಖೆ ಜನರ ಮನೆ ಬಾಗಿಲಿಗೆ ತಲುಪಿಸಲಾಗುತ್ತಿದೆ. ಅವುಗಳನ್ನು ಸದ್ಬಳಕೆ ಮುಂದಾಗಬೇಕು ಎಂದರು.

ಗದಗ ವಿಭಾಗೀಯ ಸಹಾಯಕ ಅಂಚೆ ಅಧೀಕ್ಷಕರಾದ ಸುನೀಲಕುಮಾರ, ಪ್ರಧಾನ ಅಂಚೆ ಪಾಲಕರಾದ ಮಂಜುಳಾ.ಎನ್.ದಂಗಿನಹಾಳ ಮತ್ತಿತರರು ಇದ್ದರು. ಮೇಘಾ ಕುಲಕರ್ಣಿ ಪ್ರಾರ್ಥಿಸಿದರು. ಅನೀತಾ ಕುರಿ, ಸಂತೋಷ ಅಳಗುಂಡಿ ನಿರೂಪಿದರು. ಪ್ರಧಾನ ಅಂಚೆ ಉಪ ಅಂಚೆ ಪಾಲಕರಾದ ದೊಡ್ಡಪ್ಪ ಇಟಗಿ ವಂದಿಸಿದರು.

## ನೀಟ್ ಪರೀಕ್ಷೆ ಫಲಿತಾಂಶ



ನಾಗರಬೆಟ್ಟ ಆಕ್ಸಫರ್ಡ್ ಪಾಟೀಲ್ಸ್ ಕಾಲೇಜಿನ ಆಕಾಶಗೆ 604 ಅಂಕ

ಮುದ್ದೇಬಿಹಾಳ : ತಾಲ್ಲೂಕಿನ ನಾಗರಬೆಟ್ಟ ಆಕ್ಸಫರ್ಡ್ ಪಾಟೀಲ್ಸ್ ಪಿಯು ಸೈನ್ಸ್ ಕಾಲೇಜಿನ ವಿದ್ಯಾರ್ಥಿಯೊಬ್ಬರು ನೀಟ್ ಪರೀಕ್ಷೆಯಲ್ಲಿ ಉತ್ತರ ಕರ್ನಾಟಕದಲ್ಲೇ ಅತೀ ಹೆಚ್ಚು ಅಂಕ ಗಳಿಸಿದ ಕೀರ್ತಿಗೆ ಭಾಜನವಾಗಿದ್ದಾರೆ.

ಆಕಾಶ ಜಾಧವಗೆ 604 ಅಂಕ ಬಂದಿದ್ದು ಪ್ರಥಮ,ಇನ್ನುಳಿದ 14 ಜನ ವಿದ್ಯಾರ್ಥಿಗಳು 500ಕ್ಕೂ ಅಧಿಕ ಅಂಕ ಗಳಿಸಿದ್ದಾರೆ.ಅಮೃತ್ ಹಡಗಲಿ(588),ಆದಿತ್ಯಾ ಬಿರಾದಾರ (576),ಶ್ರೇಯಸ್ ಮದ್ದರಕಿ (572),ವಿಶ್ವನಾಥ ಸಜ್ಜನ(569) ,ಸಂಪತ್ತಕುಮಾರ ಹುಗ್ಗಿ(569),ಪ್ರಾಂಜಲ ಕಸಬೇಗೌಡರ(561), ಹೊನ್ನಾಲಿಂಗ ಸಾಲೋಟಗಿ(555), ಸಮಥ-ರ್ಥ ಇಂಗಳೇಶ್ವರ(555),ಸದಾಶಿವ ಹಡಗಲಿ (553), ಸಂಜಯ ನಾಗರಾಳ (547),ವೆಂಕನಗೌಡ ಪಾಟೀಲ(547),ಸಿಂಧು ಪಾಟೀಲ(547),ಸಿದ್ದನಗೌಡ ಏವೂರ(539),ಶರತ್ ಜೋಗಿ(538) ಅಂಕಗಳನ್ನು ಪಡೆದುಕೊಂಡಿದ್ದಾರೆ.

ಈ ಬಾರಿಯೂ ಆಕ್ಸಫರ್ಡ್ ಕಾಲೇಜಿನಿಂದ 170ಕ್ಕೂ ಅಧಿಕ ವಿದ್ಯಾರ್ಥಿಗಳು ಮೆಡಿಕಲ್ ಸೀಟು ಪಡೆದುಕೊಳ್ಳುವುದು ಖಚಿತ ಎಂದು ಸಂಸ್ಥೆಯ ಚೇರಮನ್ ಎಂ. ಎಸ್.ಪಾಟೀಲ್, ಆಡಳಿತಾಧಿಕಾರಿ ಅಮಿತಗೌಡ ಪಾಟೀಲ್,ನಿರ್ದೇಶಕರಾದ ದರ್ಶನಗೌಡ ಪಾಟೀಲ ತಿಳಿಸಿದ್ದಾರೆ.

## ವಸತಿ ನಿಲಯಗಳಿಗೆ ಅರ್ಜಿ ಆಹ್ವಾನ

ಬೆಳಗಾವಿ, : 2025-26 ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿನ ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಗಳ ಹಾಗೂ ಬಡ ಇತರೆ ಹಿಂದೂಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಖಾನಾಪೂರ ತಾಲೂಕಿನ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಸರಕಾರಿ ಮೆಟ್ರಿಕ್ ಪೂರ್ವ (ಬಾಲಕ/ಬಾಲಕಿ) ವಿದ್ಯಾರ್ಥಿಗಳಿಗೆ ವಸತಿ ನಿಲಯಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಮೆಟ್ರಿಕ್ ಪೂರ್ವ ವಿವಿಧ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 05 ರಿಂದ 10ನೇ ತರಗತಿಯ ವರೆಗಿನ ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ವರ್ಗ ಹಾಗೂ ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳು ಆನ್‌ಲೈನ್ **Website : sw.kar.nic.in (HMIS)** ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ತಾಲೂಕಾ ಸಮಾಜ ಕಲ್ಯಾಣ ಇಲಾಖೆ ಅಧಿಕಾ-ರಿಗಳ ಕಛೇರಿ ಅಥವಾ ವಸತಿ ನಿಲಯಗಳ ವಾರ್ಡನ್‌ರನ್ನು ಸಂಪರ್ಕಿಸಬಹುದಾಗಿದೆ ಎಂದು ಖಾನಾಪೂರ ತಾಲೂಕಿನ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು (ಗ್ರೇಡ-2) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

******

# ಹಿರೇಹೊಳಿಗೆ ಬಸವಶ್ರೀ ರಾಜ್ಯ ಪ್ರಶಸ್ತಿ ಪ್ರಧಾನ



ತಾಳಿಕೋಟೆ, ಪಟ್ಟಣದ ಶ್ರೀ ಸಂಗಮೇಶ್ವರ ಪ್ರೌಢ ಶಾಲೆಯ ಶಿಕ್ಷಕ ಬಿ.ಆಯ್.ಹಿರೇಹೊಳಿ ಅವರಿಗೆ ಧಾರವಾಡದ ನಾಟ್ಯಸ್ಪೂರ್ತಿ ಆರ್ಟ್ & ಕಲ್ಚರಲ್ ಅಕಾಡೆಮಿ ವಾರ್ಷಿಕೋತ್ಸವ ಅಂಗವಾಗಿ ಕೊಡಮಾಡಲಾದ ಬಸವಶ್ರೀ ರಾಜ್ಯ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿದೆ.

ದಾರವಾಡದ ಆಲೂರ ವೆಂಕಟ-ರಾವ್ ಭವನದಲ್ಲಿ ನಡೆದ ನಾಟ್ಯಸ್ಪೂರ್ತಿ ಆರ್ಟ್ & ಕಲ್ಚರಲ್ ಅಕಾಡೆಮಿಯ 15ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಈ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿದೆ.

ಈ ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ಮನಸೂರ ರೇವಣಸಿದ್ದೇಶ್ವರ ಮಠದ ಡಾ. ಶ್ರೀ ಬಸವರಾಜ ದೇವರು, ನವಲಗುಂದ ಶಾಸಕ ಎನ್.ಎಚ್. ಕೋನರಡ್ಡಿ, ಧಾರವಾಡ ಗ್ರಾಮೀಣ ಮಾಜಿ ಶಾಸಕಿ ಶ್ರೀಮತಿ ಸೀಮಾ ಅಶೋಕ ಮಸೂತಿ, ಧಾರವಾಡ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕುಮಾರ ಬೆಕ್ಕೇರಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಾಗೂ ಜಾನಪದ ಕಲಾವಿದ ಇಮಾಮಸಾಬ ವಲ್ಲಪ್ಪಣ್ಣವರ, ಹಾಸ್ಯ ಕಲಾವಿದ ಮಲ್ಲಪ್ಪ ಹೊಂಗಲ್ ಹಾಗೂ ಸಂಸ್ಥೆಯ ಅಧ್ಯಕ್ಷರಾದ ಸದಾನಂದ ಬಂಗೆಣ್ಣನವರ ಉಪಸ್ಥಿತರಿದ್ದರು.

## ಅಂತರಾಷ್ಟ್ರೀಯ ಯೋಗ ದಿನಾಚರಣೆ: ಜೂನ್ 20 & 21ರಂದು ವಿವಿಧ ಕಾರ್ಯಕ್ರಮ

ಕೊಪ್ಪಳ ಅಂತರಾಷ್ಟ್ರೀಯ ಯೋಗ ದಿನಾಚರಣೆ ನಿಮಿತ್ತ ಕೊಪ್ಪಳ ಜಿಲ್ಲಾ ಆಯುಷ್ ಇಲಾಖೆ ವತಿಯಿಂದ ಜೂನ್ 20 ಮತ್ತು 21ರಂದು ವಿವಿಧ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಜೂನ್ 21 ರಂದು "11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ-2025" ನ್ನು "ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ" ಎಂಬ ಘೋಷವಾಕ್ಯದೊಂದಿಗೆ ಆಚರಿಸಲು ಆಯುಷ್ ಮಂತ್ರಾಲಯವು ನಿರ್ಧರಿಸಿದ್ದು, ಪ್ರಯುಕ್ತ ಕೊಪ್ಪಳ ಜಿಲ್ಲಾ ಆಯುಷ್ ಇಲಾಖೆ ವತಿಯಿಂದ ಅಂ-ದು ಬೆಳಿಗ್ಗೆ 6.30 ಗಂಟೆಗೆ ನಗರದ ತಾಲೂಕಾ ಕ್ರೀಡಾಂಗಣದಲ್ಲಿ ಯೋಗ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಈ ಕಾರ್ಯಕ್ರಮದ ಪೂರ್ವಭಾವಿಯಾಗಿ ಜೂನ್ 20ರ ಸಾಯಂಕಾಲ 4 ಗಂಟೆಯಿಂದ 6 ಗಂಟೆಯವರೆಗೆ ಯೋಗಜಾಥಾವನ್ನು ಆಯೋಜಿಸಲಾಗಿದ್ದು, ಯೋಗಜಾಥಾವು ಶ್ರೀ ಗವಿಮಠದ ಆವರಣದಿಂದ ಪ್ರಾರಂಭವಾಗಿ ಗಡಿಯಾರ ಕಂಬ, ಅಶೋಕ ಸರ್ಕಲ್ ಮೂಲಕ ತಾಲೂಕಾ ಕ್ರೀಡಾಂಗಣಕ್ಕೆ ಆಗಮಿಸಿ ಮುಕ್ತಾಯವಾಗಲಿದೆ.

ಜೂ. 21ರ ಬೆಳಿಗ್ಗೆ 6.30ಕ್ಕೆ ನಗರದ ತಾಲೂಕಾ ಕ್ರೀಡಾಂಗಣದಲ್ಲಿ ನಡೆಯುವ ಜಿಲ್ಲಾಮಟ್ಟದ ಯೋಗ ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಎಲ್ಲಾ ಇಲಾಖಾಧಿಕಾರಿಗಳು, ಸಿಬ್ಬಂದಿಗಳು, ಸರ್ವ ಸಂಘ ಸಂಸ್ಥೆಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಯಶಸ್ವಿಗೊಳಿಸುವಂತೆ ಕೊಪ್ಪಳ ಜಿಲ್ಲಾ ಆಯುಷ್ ಅಧಿಕಾರಿ ಡಾ. ಪರ್ವತಗೌಡ ಬ. ಹಿರೇಗೌಡರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅವಳಿ ನಗರದಲ್ಲಿ ಸುಗಮ ಸಂಚಾರಕ್ಕಾಗಿ ಇ.ಆರ್.ಟಿ. ಬಸ್ ಸೇವೆ; ಜನಪ್ರತಿನಿಧಿಗಳ ಸಾರ್ವಜನಿಕರ ಅಭಿಪ್ರಾಯಕ್ಕೆ ಮನ್ನಣೆ: ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್



ಧಾರವಾಡ : ದಿನದಿಂದ ದಿನಕ್ಕೆ ಹುಬ್ಬಳ್ಳಿ ಧಾರವಾಡ ಮಹಾನಗರವು ಬೆಳೆಯುತ್ತಿದ್ದು, ಅವಳಿ ನಗರದಲ್ಲಿ ಸಾರ್ವಜನಿಕರ ಸುಗಮ ಸಂಚಾರಕ್ಕಾಗಿ ಹುಬ್ಬಳ್ಳಿ ಧಾರವಾಡ ಕಾರಿಡಾರ್‌ದಲ್ಲಿ ಎಲೆಕ್ಟ್ರಿಕ್ ರ‍್ಯಾಪಿಡ್ ಟ್ರಾನ್ಸಿಟ್-ಇ. ಆರ್.ಟಿ. ಬಸ್ ಸೇವೆ ಆರಂಭಿಸಲು ಜನಪ್ರತಿನಿಧಿಗಳ ಹಾಗೂ ಸಾರ್ವಜನಿಕರ ಅಭಿಪ್ರಾಯಗಳನ್ನು ಪಡೆದುಕೊಂಡು, ಉತ್ತಮವಾದ ಯೋಜನಾ ವರದಿಯನ್ನು ರೂಪಿಸಿ, ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರು ಹೇಳಿದರು.

ಅವರು ಇಂದು ಸಂಜೆ ನಗರದ ಸೃಜನಾ ರಂಗಮಂದಿರದಲ್ಲಿ ಜಿಲ್ಲಾಡಳಿತದಿಂದ ಆಯೋಜಿಸಿದ್ದ ಹುಬ್ಬಳ್ಳಿ-ಧಾರವಾಡ ಕಾರಿಡಾರ್‌ದಲ್ಲಿ ಇ.ಆರ್.ಟಿ. ಸಾರಿಗೆ ವ್ಯವಸ್ಥೆ ಕುರಿತು ಸಾರ್ವಜನಿಕರು ಮತ್ತು ಭಾಗಿದಾರರ ಸಭೆ ಜರುಗಿಸಿ, ಮಾತನಾಡಿದರು.

ಹುಬ್ಬಳ್ಳಿ ಧಾರವಾಡ ಕಾರಿಡಾರ್‌ದಲ್ಲಿ ಎಲೆಕ್ಟ್ರಿಕ್ ರ‍್ಯಾಪಿಡ್ ಟ್ರಾನ್ಸಿಟ್-ಇ. ಆರ್.ಟಿ. ಸಾರಿಗೆ ವ್ಯವಸ್ಥೆಯನ್ನು ಸರ್ಕಾರ ಮತ್ತು ಖಾಸಗಿ (ಪಿಪಿಪಿ ಮಾಡಲ್) ಸಹಭಾಗಿತ್ವದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಎಲೆಕ್ಟ್ರಿಕ್ ರ‍್ಯಾಪಿಡ್ ಟ್ರಾನ್ಸಿಟ್-ಇ. ಆರ್.ಟಿ. ಸಾರಿಗೆ ವ್ಯವಸ್ಥೆಯನ್ನು ಜಾರಿಗೊಳಿಸಲು ವಿಸ್ತೃತ ಯೋಜನಾ ವರದಿ (ಡಿಪಿಆರ್) ಯನ್ನು ಸಿದ್ಧಗೊಳ್ಳಿಸಲಾಗುತ್ತಿದೆ. ಸರ್ಕಾರವು 3 ತಿಂಗಳ ಕಾಲಾವಕಾಶ ನೀಡಿದ್ದು, ಈಗಾಗಲೇ ಒಂದು ತಿಂಗಳ ಅಧ್ಯಯನ ನಡೆಸಲಾಗಿದ್ದು, ಮುಂದಿನ ಎರಡು ತಿಂಗಳಲ್ಲಿ ಅಂತಿಮ ವಿಸ್ತೃತ ಯೋಜನಾ ವರದಿಯನ್ನು ಸರ್ಕಾರಕ್ಕೆ ಸಂಸ್ಥೆಯು ಸಲ್ಲಿಸಲಿದೆ ಎಂದು ಅವರು ಹೇಳಿದರು.

ಸಭೆಯಲ್ಲಿ ವಿಧಾನ ಪರಿಷತ್ತ ಸರ್ಕಾರದ ಮುಖ್ಯ ಸಚೇತಕ ಸಲೀಂ ಅಹ್ಮದ್, ಶಾಸಕರಾದ ಅರವಿಂದ ಬೆಲ್ಲದ, ಮಹೇಶ ಟೆಂಗಿನಕಾಯಿ ಹಾಗೂ ವಿವಿಧ ಪ್ರತಿನಿಧಿಗಳು, ಸಾರ್ವಜನಿಕರು ಮಾತನಾಡಿ, ತಮ್ಮ ಸಲಹೆ, ಸೂಚನೆ ಮತ್ತು ಅಭಿಪ್ರಾಯಗಳನ್ನು ತಿಳಿಸಿ, ಮನವಿಗಳನ್ನು ಸಲ್ಲಿಸಿದರು.

ಜಿಲ್ಲಾಧಿಕಾರಿ ದಿವ್ಯ ಪ್ರಭು, ಜಿಲ್ಲಾ ಪೊಲೀಸ್ ವ-ರಿಷ್ಠಾಧಿಕಾರಿ ಡಾ. ಗೋಪಾಲ ಬ್ಯಾಕೋಡ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಪ್ರಿಯಾಂಗಾ ಎಮ್. ಬಿ.ಆರ್.ಟಿ. ಎಸ್. ವ್ಯವಸ್ಥಾಪಕ ನಿರ್ದೇಶಕಿ ಸಾವಿತ್ರಿ ಕಡಿ, ಉಪಪೊಲೀಸ್ ಆಯುಕ್ತ ರವೀಶ ಸಿ.ಆರ್., ಮಾಜಿ ಶಾಸಕ ಚಂದ್ರಕಾಂತ ಬೆಲ್ಲದ ಸೇ-ರಿದಂತೆ ಇತರರು ಸಭೆಯಲ್ಲಿ ಭಾಗವಹಿಸಿದ್ದರು.

# ಸಂರಕ್ಷಣೆ ಮಾಡುವ ಮೂಲಕ ಆರೋಗ್ಯಕರ ಸಮಾಜ ನಿರ್ಮಿಸಲು ಶ್ರಮಿಸಬೇಕು



ಉಗರಗೋಳ : ಇಂದಿನ ಅಧುನಿಕ ದಿನಗಳಲ್ಲಿ ನಗರೀಕರಣದ ಪ್ರವಾವದಿಂದ ಪರಿಸರ ನಾಶವಾಗುತ್ತಿದೆ. ನೈಸರ್ಗಿಕ ಸಂಕುಲಗಳಿಗೆ ಆಪತ್ತು ಬಂದಿದೆ. ವಿದ್ಯಾರ್ಥಿಗಳು, ರೈತರು, ನಾಗರಿಕರು ಹಾಗೂ ಶಾಲೆಗಳಲ್ಲಿ, ತಮ್ಮ ಮನೆಯ ಅಂಗಳ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಸಸಿ ನೆಡುವ ಮೂಲಕ ಪರಿಸರ ಸಂರಕ್ಷಣೆಯಲ್ಲಿ ತಮ್ಮನ್ನು ತೊಡಗಿಸಿಕೊಳ್ಳಬೇಕು ಎಂದು ತಾಲೂಕಾ ಯೋಜನಾ ಅಧಿಕಾರಿ ಸುಬ್ರಾಯ ನಾಯ್ಕ ಎಂದು ಹೇಳಿದರು.

ಸವದತ್ತಿ ತಾಲೂಕಿನ ಬೆಟಸೂರ ಗ್ರಾಮದಲ್ಲಿ ಶನಿವಾರ ರಂದು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಬಿ.ಸಿ ಟ್ರಸ್ಟ್ ವತಿಯಿಂದ. ಬೆಟಸೂರ ವಲಯದ ನಂದಾದೀಪ ಜ್ಞಾನವಿಕಾಸ ಕೇಂದ್ರದಲ್ಲಿ ಪರಿಸರ ಜಾಗೃತಿ ಮಾಹಿತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಪರಿಸರ ಸಂರಕ್ಷಣೆ ಎಲ್ಲರ ಹೊಣೆ. ಪ್ರತಿಯೊಬ್ಬರು ಪರಿಸರ ಸಂರಕ್ಷಣೆ ಮಾಡುವ ಮೂಲಕ ಆರೋಗ್ಯಕರ ಸಮಾಜ ನಿರ್ಮಿಸಲು ಶ್ರಮಿಸಬೇಕು. ಮನೆಗೊಂದು ಮರ, ಊರಿಗೊಂದು ವನ ಇರಬೇಕೆಂದು ಕರೆ ನೀಡಿದರು.

ಪ್ರತಿಯೋಬ್ಬ ಸದಸ್ಯರಿಗೆ ಗಿಡಗಳನ್ನು ವಿತ-ರಿಸಲಾಯಿತು. ಸಂಪನ್ಮೂಲ ವ್ಯಕ್ತಿಗಳಿಂದ ಪರಿಸರ ಜಾಗೃತಿ ಬಗ್ಗೆ ಮಾಹಿತಿ ಕೊಡಿಸಲಾಯಿತು.

ಗ್ರಾಪಂ ಅಧ್ಯಕ್ಷ ಮಲ್ಲಪ್ಪಾ ಕುರಿ, ಉಗರಗೋಳ ವಲಯ ಮೇಲ್ವಿಚಾರಕಿ ಮಮತಾ ವೈದ್ಯ, ಸಂಗೀತಾ ಮೋಖಾಶಿ, ಶ್ರೀನೀವಾಸ್ ತಿಮ್ಮಾಪೂರ, ನಿರ್ಮಲ ಕಳಸಗೌಡರ, ವಿನೋದ ವೈದ್ಯ, ರಾಜೇಶ್ವರಿ ಗಡೇಕರ, ಕಾವೇರಿ ಹೇಬ್ಬಳ್ಳಿ, ಹಾಗೂ ಗ್ರಾಪಂ ಸದಸ್ಯರು, ಶಾಲಾ ಶಿಕ್ಷಕ ವೃಂದ, ಒಕ್ಕೂಟದ ಅಧ್ಯಕ್ಷ ಸದಸ್ಯರು ಹಾಗೂ ಗ್ರಾಮಸ್ಥರು ಇದ್ದರು.

# ಯೋಗದಿಂದ ರೋಗ ದೂರ: ಪ್ರದೀಪ ಪಟ್ಟಣ



ರಾಮದುರ್ಗ : ಯೋಗ ಬಲ್ಲವನಿಗೆ ರೋಗಗಳು ದೂರಾಗಿ ಸುಂದರವಾದ ಬದುಕನ್ನು ಸಾಗಿಸಬಹುದಾಗಿದ್ದು, ಪತಂಜಲಿ ಋಷಿ ಮುನಿಗಳು ಹಾಕಿಕೊಟ್ಟ ಯೋಗಾಬ್ಯಾಸಗಳನ್ನು ಜನತೆ ದಿನನಿತ್ಯ ಅಳವಡಿಸಿಕೊಳ್ಳಬೇಕೆಂದು ವಿರಕ್ತಮಠ ಟ್ರಸ್ಟ್ ಅಧ್ಯಕ್ಷ ಪ್ರದೀಪಕುಮಾರ ಪಟ್ಟಣ ಹೇಳಿದರು.

ಪಟ್ಟಣದ ಬಸವೇಶ್ವರ ಶಾಲಾ ಆವರಣದಲ್ಲಿ ಮಂಗಳವಾರ ಪತಂಜಲಿ ಯೋಗ ಸಮಿತಿ, ಭಾರತ ಸ್ವಾಭಿಮಾನ ಟ್ರಸ್ಟ್, ಮಹಿಳಾ ಪತಂಜಲಿ, ಯುವ ಭಾರತ, ಕಿಸಾನ್ ಸೇವಾ ಸಮಿತಿ ಹಾಗೂ ಮಹರ್ಷಿ ಪತಂಜಲಿ ಯೋಗ ಪ್ರತಿಷ್ಠಾನ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ಯೋಗ ದಿನಾಚರಣೆ ಪ್ರಯುಕ್ತ ಜೂ. 17 ರಿಂದ ಜೂ. 21ರ ವರೆಗೆ ಪತಂಜಲಿ ಪ್ರಾಣಾಯಾಮ ಹಾಗೂ ಯೋಗ ವಿಜ್ಞಾನ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪತಂಜಲಿ ಯೋಗ ಪ್ರತಿಷ್ಠಾನ ಸಂಸ್ಥೆ ಪ್ರತಿದಿನ ಯೋಗಾಬ್ಯಾಸಗಳನ್ನು ಹಾಗೂ ದ್ಯಾನದ ಪದ್ಧತಿಯನ್ನು ತಿಳಿಸುತ್ತಿದ್ದು, ಜನತೆ ಅದರ ಸದುಪಯೋಗ ಪಡೆದುಕೊಳ್ಳಬೇಕೆಂದು ಹೇಳಿದರು. ಸಮಾರಂಭದಲ್ಲಿ ಪಾಲ್ಗೊಂಡಿದ್ದ ಧನಲಕ್ಷ್ಮೀ ಸಹಕಾರಿ ಸಕ್ಕರೆ ಕಾರ್ಖಾನೆ ಅಧ್ಯಕ್ಷ ಮಲ್ಲಣ್ಣ ಯಾದವಾಡ ಮಾತನಾಡಿ, ಭಾರತೀಯ ಸಂಸ್ಕೃತಿ ಅನಾವರಣಗೊಳಿಸುವ ಯೋಗ ಪದ್ಧತಿಯನ್ನು ಇಂದು ಭಾರತ ಅಷ್ಟೇ ಅಲ್ಲ ವಿಶ್ವದ ಹಲವು ರಾಷ್ಟ್ರಗಳು ಅಪ್ಪಿಕೊಂಡಿವೆ. ಪ್ರಧಾನಿ ಮೋದಿ ಯೋಗವನ್ನು ವಿಶ್ವಕ್ಕೆ ಪರಿಚಯಿಸುವ ಮೂಲಕ ಜೂನ್ 21ರಂದು ವಿಶ್ವ ಯೋಗ ದಿನವನ್ನಾಗಿ ಜಾರಿಗೆ ತಂದಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಹರ್ಷಿ ಪತಂಜಲಿ ಯೋಗ ಪ್ರತಿಷ್ಠಾನದ ಅಧ್ಯಕ್ಷ ಡಾ. ಬಿ.ಎಲ್. ಸಂಕನಗೌಡ್ರ ಮಾತನಾಡಿದರು.

ಈ ಸಂದರ್ಭದಲ್ಲಿ ಯೋಗಗುರು ರೇವಪ್ಪ ಕೋಟೂರ, ಜವಳಿ ವ್ಯಾಪಾರಿ ಶ್ರೀಕಾಂತ ಮಾಳದಕರ, ಮಹರ್ಷಿ ಪತಂಜಲಿ ಯೋಗ ಪ್ರತಿಷ್ಠಾನದ ಉಪಾಧ್ಯಕ್ಷ ರಾಜೇಶ ಬೀಳಗಿ, ಕಾರ್ಯದರ್ಶಿ ಪ್ರವೀಣ ಫತ್ತೇಪೂರ, ಸುಭಾಸ ಸುಳ್ಳದ, ಈರಣ್ಣ ಬೆನಕಟ್ಟಿ, ಡಾ. ಶಿವಲೀಲಾ ಕಂಬಿ, ಗೀತಾ ಗುರುಮಠ ಸೇರಿದಂತೆ ಇತರ-ರಿದ್ದರು. ಎಸ್.ಐ. ಪರಪ್ಪನವರ ಸ್ವಾಗತಿಸಿದರು. ನಾರಾಯಣ ಹಳ್ಳಿಕೇರಿ ಕಾರ್ಯಕ್ರಮ ನಿರೂಪಿಸಿದರು. ಮಂಜುನಾಥ ಎಚ್. ವಂದಿಸಿದರು.

### ಕಾರ್ಗಿಲ್ ವೀರಯೋಧ ಸ್ಮಾರಕ ಸಮೀತಿಯ ನೂತನ ಪದಾಧಿಕಾರಿಗಳ ಆಯ್ಕೆ

# ರಾಷ್ಟ್ರದ ರಕ್ಷಣೆಗೆ ಎಲ್ಲರೂ ಕೈಜೊಡಿಸೋಣ-ರಾಯಚೂರ



ಮುದ್ದೇಬಿಹಾಳ, ರಾಷ್ಟ್ರದ ರಕ್ಷಣೆ ಹಾಗೂ ಭಾರತ ಮಾತೆಯ ಸಂರಕ್ಷಣೆಗಾಗಿ ಎಲ್ಲೂರ ಕೈ ಜೋಡಿಸುವ ಕೆಲವನ್ನು ಮಾಡಬೇಕು ಎಂದು ಸಮಾಜ ಸೇವಕ ಹಾಗೂ ಕಾರ್ಗಿಲ್ ವೀರಯೋಧ ಸ್ಮಾರಕ ಸಮೀತಿಯ ನೂತನ ಖಜಾಂಚಿ ಉದಯ ರಾಯಚೂರ ಅವರು ನುಡಿದರು.

ಸ್ಥಳೀಯ ಪ್ರವಾಸಿ ಮಂದಿರದಲ್ಲಿ ಏರ್ಪಡಿಸಲಾದ ಕಾರ್ಗಿಲ್ ವೀರಯೋಧ ಸ್ಮಾರಕ ಸಮೀತಿಯ ನೂತನ ಪದಾಧಿಕಾ-ರಿಗಳ ಆಯ್ಕೆಯ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದ ಅವರು ದೇಶದಲ್ಲಿ ಮಾದರಿಯಾಗಿರುವಂತಹ ದೇಶಭಕ್ತಿಯ ಕಾರ್ಗಿಲ್ ವೀರಯೋಧರ ಸಮೀತಿ ಎನ್ನುವುದು ಮೊದಲು ರಚನೆಯಾಗಿದ್ದು ನಮ್ಮ ಜಿಲ್ಲೆಯ ಮುದ್ದೇಬಿಹಾಳ ತಾಲೂಕಿನಲ್ಲಿ ದಿ. ವೀರಯೋಧ ದಾವಲಸಾಬ ಕಂಬಾರ ಅವರ ಪ್ರತಿಮೆಯನ್ನು ಸ್ಥಾಪಿಸಿ ಕಾರ್ಗಿಲ್ ಯೋಧ ಎಂಬ ಸ್ಮಾರಕವನ್ನು ಮಾಡಿ ಅವರ ಜವಾಬ್ದಾರಿಯನ್ನು ಹಾಗೂ ನಮ್ಮ ಭಾರತ ದೇಶದಲ್ಲಿ ಯೋಧರು ಮಾಡಿದಂತಹ ಸಾಧನೆಯ ಭಗ್ಗೆ ಎಲ್ಲ ಜನತೆಗೆ ತಿಳಿಸುತ್ತಾ ಸಮೀತಿಯ ರಚನೆಯ ಜವಾಬ್ದಾರಿಗಳನ್ನು ಪ್ರತೀ ವರ್ಷ ಒಬ್ಬೊಬ್ಬರಿಗೆ ನೀಡುತ್ತಾ ಎಲ್ಲರಿಗೂ ಅವಕಾಶವನ್ನು ಕಲ್ಪಿಸಿಕೊಡುತ್ತಾ ಸಾಗಿಬಂದಿದ್ದೇವೆ ನಾವೆಲ್ಲರೂ ಭಾರತ ಮಾತೆಯನ್ನು ಹಾಗೂ ವೀರಯೋಧರನ್ನು ಸ್ಮರಿಸುವಂತಹ ಕೆಲಸವನ್ನು ನಾವೆಲ್ಲರೂ ಮಾಡೋಣ ಎಂದರು.

ಈ ಸಮಯದಲ್ಲಿ ನೂತನ ಪದಾಧಿಕಾ-ರಿಗಳನ್ನು ಆಯ್ಕೆ ಮಾಡಲಾಯಿತು.

ಗೌರವಾಧ್ಯಕ್ಷರನ್ನಾಗಿ ಚಂದ್ರಶೇಖರ ಕಲಾಲ, ಅಧ್ಯಕ್ಷರನ್ನಾಗಿ ಶ್ರೀಕಾಂತ ಹಿರೇಮಠ, ಉಪಾಧ್ಯಕ್ಷರನ್ನಾಗಿ ಶೇಖರ ಢವಳಗಿ, ಪ್ರಧಾನ ಕಾರ್ಯದರ್ಶಿಯನ್ನಾಗಿ ರಾಜಶೇಖರ ಮ್ಯಾಗೇರಿ, ಖಜಾಂಚಿ-ಯನ್ನಾಗಿ ಉದಯ ರಾಯಚೂರ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ಈ ಸಮಯದಲ್ಲಿ ಸದಸ್ಯರಾದ ರಾಜು ಬಳ್ಳೊಳ್ಳಿ, ಮಹಾಂತೇಶ ಬೂದಿಹಾಳಮಠ, ರವೀಂದ್ರ ಬಿರಾದಾರ, ರಾಜಶೇಖರ ಹೊಳಿ, ಸೋಮನಗೌಡ ಬಿರಾದಾರ, ಕಾಶಿನಾಥ ಹುಗ್ಗಿ, ಪುನೀತ ಹಿಪ್ಪರಗಿ, ಸಂಜು ಬಾಗೇವಾಡಿ, ಸಬಿಸಾಬ ಕಂಬಾರ, ಮಂಜುನಾಥ ಹಿರೇಮಠ, ಸಂತೋಷ ಬಾದರಬಂಡಿ, ವಕೀಲರಾದ ರವಿ ನಾಲತವಾಡ, ಹಣಮಂತ ನಲವಡೆ ಮೊದಲಾದವರು ಉಪಸ್ತಿತರಿದ್ದರು.

***

### ಉಚಿತ ಪಠ್ಯ ಪುಸ್ತಕ ವಿತರಣೆ

# ಪುಸ್ತಕದಲ್ಲಿಯ ಜ್ಞಾನ ಮಸ್ತಕಕ್ಕೇರಲಿ-ಪಾಟೀಲ



ತಾಳಿಕೋಟೆ, ಸರ್ಕಾರವು ವಿದ್ಯಾರ್ಥಿಗಳ ಜ್ಞಾನಾರ್ಜನೆಗಾಗಿ ಅನೇಕ ಸೌಲತ್ತುಗಳನ್ನು ಒದಗಿಸುತ್ತಾ ಸಾಗಿದೆ ಇದರ ಸದುಪಯೋಗ ಪ ಡೆ ದು ಕೊ ಳ್ಳು ವ ದ ರೊ ಂ ದಿ ಗೆ ಪುಸ್ತಕದಲ್ಲಿ ಜ್ಞಾನದ ಬಂದು ಮಸ್ತಕಕ್ಕೆ ಏರಿಸಿಕೊಳ್ಳುವದರೊಂದಿಗೆ ಸಾಧನೆಯ ಮೆಟ್ಟಿಲು ಹತ್ತಬೇಕೆಂದು ಶ್ರೀ ಸಂಗಮಾರ್ಯ ವಿದ್ಯಾ ಸಂಸ್ಥೆಯ ಅಧ್ಯಕ್ಷ ಎಚ್.ಎಸ್..ಪಾಟೀಲ(ಬಾವೂರ) ಅವರು ಹೇಳಿದರು.

ಸೋಮವಾರರಂದು ಪಟ್ಟಣದ ಎಸ್.ಎಸ್.ವಿದ್ಯಾ ಸಂಸ್ಥೆಯಡಿಯಲ್ಲಿ ನಡೆಯುತ್ತಿರುವ ಶ್ರೀ ಬ್ರಹ್ಮಲಿಂಗೇಶ್ವರ ಪ್ರಾಥಮಿಕ ಶಾಲೆ ಹಾಗೂ ಶ್ರೀ ಸಂಗಮೇಶ್ವರ ಪ್ರೌಢ ಶಾಲಾ ಮಕ್ಕಳಿಗೆ ಸರ್ಕಾರದಿಂದ ಕೊಡಮಾಡಲಾದ ಉಚಿತ ಪಠ್ಯ ಪುಸ್ತಕಗಳ ವಿತರಣೆಗೆ ಚಾಲನೆ ನೀಡಿ ಮಾತನಾಡುತ್ತಿದ್ದ ಅವರು ವಿದ್ಯಾರ್ಥಿಗಳು ಓದಿನಲ್ಲಿ ಆಸಕ್ತಿಹೊಂದಬೇಕು ಇಂದು ನೀಡಿರುವ ಜ್ಞಾನದ ಹೊತ್ತಿಗೆ ನಿಮ್ಮ ಮುಂದಿನ ಭವಿಷ್ಯ ರೂಪಿಸಲು ನಾಂದಿಯಾಗಲಿದೆ ಶಿಕ್ಷಕರು ಶಾಲೆಯಲ್ಲಿ ಮಾಡುವ ಪಾಠ ಭೋದನೆಯನ್ನು ಮರು ಅಧ್ಯಯನಕ್ಕಾಗಿ ಪಠ್ಯಗಳನ್ನು ಸರ್ಕಾರವು ಸಿದ್ದಪಡಿಸಿ ನೀಡುತ್ತಿದೆ ಸರ್ಕಾರದ ಜೊತೆಗೆ ಕೈಜೋಡಿಸುವಂತಹ ಕೆಲಸ ಎಸ್.ಎಸ್.ವಿದ್ಯಾ ಸಂಸ್ಥೆಯ ವತಿಯಿಂದಲೂ ಕೂಡಾ ಉಚಿತ ನೋಟ ಬುಕ್‌ಗಳನ್ನು ಎಲ್ಲ ವಿದ್ಯಾರ್ಥಿಗಳಿಗೆ ಪ್ರತಿವರ್ಷವೂ ನೀಡುತ್ತಾ ಬಂದಿದೆ ಅದರಂತೆ ಈ ವರ್ಷವೂ ಕೂಡಾ ಈ ಕಾರ್ಯ ನಡೆಯಲಿದೆ ವಿದ್ಯಾರ್ಥಿಗಳು ಓದಿನ ಅಭಿರುಚಿ ಬೆಳೆಸಿಕೊಳ್ಳುವದರೊಂದಿಗೆ ಉತ್ತಮ ಜ್ಞಾನವಂತರಾಗಿ ದೇಶದ ಉತ್ತಮ ಪ್ರಜೆಗಳಾಗಿ ಕಲಿಸಿದ ಶಾಲೆಗೆ ಪಾಲಕರಿಗೆ ಉತ್ತಮ ಹೆಸರು ತರುವಂತಹ ಕಾರ್ಯ ಮಾಡಬೇಕೆಂದರು.

ಇನ್ನೋರ್ವ ಎಸ್.ಎಸ್.ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ಸಚೀನ ಪಾಟೀಲ ಅವರು ಮಾತನಾಡಿ ವಿದ್ಯಾರ್ಥಿಗಳ ಜ್ಞಾನಾರ್ಜನೆಗಾಗಿ ಸರ್ಕಾರವು ನೀಡಿರುವ ಪುಸ್ತಕದ ಸದುಪಯೋಗ ಪಡೆದುಕೊಳ್ಳುವಂತಹ ಕೆಲಸ ವಿದ್ಯಾರ್ಥಿಗಳು ಮಾಡಬೇಕು ಎಸ್.ಎಸ್.ವಿದ್ಯಾ ಸಂಸ್ಥೆಯ ವತಿಯಿಂದ ಸೀಘ್ರದಲ್ಲಿಯೇ ಉಚಿತವಾಗಿ ನೋಟಬುಕ್‌ಗಳನ್ನು ನೀಡುವಂತಹ ಕಾರ್ಯವು ನಡೆಯಲಿದೆ ಸಂಸ್ಥೆಯ ಅಧ್ಯಕ್ಷರಾದ ಎಚ್.ಎಸ್.ಪಾಟೀಲ ಅವರ ಜನ್ಮ ದಿನದ ನಿಮಿತ್ಯವಾಗಿ ವಿದ್ಯಾರ್ಥಿಗಳಿಗೆ ಸಂಸ್ಥೆಯ ವತಿಯಿಂದ ಅನೇಕ ಸೌಲಭ್ಯಗಳನ್ನು ಒದಗಿಸುತ್ತಾ ಬಂದಿದ್ದು ವಿದ್ಯಾರ್ಥಿಗಳು ಸದುಪಯೋಗ ಪಡೆದುಕೊಂಡು ಶಾಲೆಯ ಕೀರ್ತಿ ಹೆಚ್ಚಿಸಬೇಕೆಂದರು.

ಇದೇ ಸಮಯದಲ್ಲಿ ಶ್ರೀ ಬ್ರಹ್ಮಲಿಂಗೇಶ್ವರ ಪ್ರಾಥಮಿಕ ಶಾಲೆಯ 5 ನೇ ತರಗತಿಯಿಂದ 7ನೇ ತರಗತಿಯವರೆಗೆ ಹಾಗೂ ಶ್ರೀ ಸಂಗಮೇಶ್ವರ ಪ್ರೌಢ ಶಾಲೆಯ 8ನೇ ತರಗತಿಯಿಂದ 10 ನೇ ತರಗತಿಯವರೆಗಿನ ಮಕ್ಕಳಿಗೆ ಸರ್ಕಾರದಿಂದ ಕೊಡಮಾಡಲಾದ ಪಠ್ಯ ಪುಸ್ತಕಗಳನ್ನು ವಿತರಿಸಲಾಯಿತು.

ಪ್ರೌಢಶಾಲೆಯ ಶಿಕ್ಷಕ ಎಸ್.ವಿ.ಜಾಮಗೊಂಡಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಆಡಳಿತಾಧಿಕಾರಿ ಕಿರಣಗೌಡ ಪಾಟೀಲ, ಪ್ರೌಢಶಾಲೆಯ ಮುಖ್ಯಸ್ಥ ಅಶೋಕ ಕಟ್ಟಿ, ಪ್ರಾಥಮಿಕ ಶಾಲೆಯ ಮುಖ್ಯಸ್ಥ ಜೆ.ಎಮ್ ಕೊಣ್ಣೂರ, ಸಿಬ್ಬಂದಿಗಳಾದ ಬಿ.ಆಯ್.ಹಿರೇಹೊಳಿ, ಎಸ್.ವಿ. ಜಾಮಗೊಂಡಿ, ಎಸ್.ಸಿ.ಗುಡಗುಂಟಿ, ಎಚ್.ಬಿ.ಪಾಟೀಲ, ಎಮ್.ಎಸ್. ರಾಯಗೊಂಡ,ಯು.ಎಚ್.ಗಟನೂರ,ಎಸ್. ಎಸ್.ಪಾಟೀಲ, ಎಮ್.ಎಸ್.ಬಿರಾದಾರ, ಎಸ್.ಬಿ.ಸಾಸನೂರ ಉಪಸ್ಥಿತರಿದ್ದರು. ಶಿಕ್ಷಕ ಬಿ.ಆಯ್.ಹಿರೇಹೊಳಿ ನಿರೂಪಿಸಿ ವಂದಿಸಿದರು.

## ಅಪರಿಚಿತ ವ್ಯಕ್ತಿ ಶವ ಪತ್ತೆ

ಬೆಳಗಾವಿ, : ಬೆಳಗಾವಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ದೇಸೂರು ರೈಲು ನಿಲ್ದಾಣಗಳ ಮದ್ಯ ಅಪರಿಚಿತ 35-40 ವರ್ಷ ವಯಸ್ಸಿನ ವ್ಯಕ್ತಿಯು ಯಾವುದೋ ಚಲಿಸುವ ರೈಲಿಗೆ ಸಿಕ್ಕು ಗಾಯಗೊಂಡಿದ್ದು ಹೆಚ್ಚಿನ ಚಿಕಿತ್ಸೆಗಾಗಿ ಬೆಳಗಾವಿ ಜಿಲ್ಲಾ ಸರಕಾರಿ ಆಸ್ಪತ್ರೆಗೆ ದಾಖಲಿಸಿದ್ದು ಚಿಕಿತ್ಸೆ ಫಲಿಸದೆ ವ್ಯಕ್ತಿ ಮೃತ ಹೊಂದಿರುತ್ತಾನೆ ಎಂದು ಪ್ರಕರಣ ದಾಖಲಾಗಿರುತ್ತದೆ.

ಅಪರಿಚಿತ 35-40 ವರ್ಷ ವಯಸ್ಸಿನ ವ್ಯಕ್ತಿಯ ಚಹರೆ: 5 ಅಡಿ ಎತ್ತರ, ಸಾದಗೆಂಪು ಮೈ ಬಣ್ಣ, ಮೈಯಿಂದಾ ಸದೃಡ , ಉದ್ದ ಮುಖ, ನೀಟಾದ ಮೂಗೂ, ಕಪ್ಪು ಕೂದಲು, ಮೀಸೆ ದಾಡಿ ಬಿಟ್ಟಿರುತ್ತಾನೆ. ಮೃತನ ಬಲಗೈ ಮೇಲೆ ಖ ಐಠತಜ ಉಠತುಟಿಜಚಿ, ಹೃದಯ ಆಕಾರದ ಹಚ್ಚೆ, 17-07-2000 ಹಚ್ಚೆ, ಮುಂಗೈ ಮೇಲೆ ಹೂವಿನ ಚಿತ್ರ, ಕುತ್ತಿಗೆಯ ಕೆಳಗೆ ಬಲಗಡೆ ಚಿಟ್ಟೆ ( ಃಣಣಜಡಿ ಜಿಟಥಿ ), ಎಡಗಣ್ಣಿನ ಕೆಳಗೆ ಹಚ್ಚೆ ಗುರುತು ಇರುತ್ತದೆ ಮತ್ತು ಕಾಲಿನಲ್ಲಿ ಒಂದು ಕಪ್ಪು ರಬ್ಬರ ಬ್ಯಾಂಡ ಧರಿಸಿರುತ್ತಾನೆ.

ಅಪರಿಚಿತ ವ್ಯಕ್ತಿಯ ವಾರಸುದಾರರ ಸುಳಿವು ಸಿಕ್ಕಲ್ಲಿ ಬೆಳಗಾವಿ ರೈಲ್ವೆ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ: 0831-2405273 ಪಿ.ಎಸ್.ಐ ಮೊಬೈಲ ಸಂಖ್ಯೆ: 9480802127 ಅಥವಾ ರೈಲ್ವೆ ಪೊಲೀಸ ನಿಯಂತ್ರಣ ಕೊಠಡಿ ದೂರವಾಣಿ ಸಂಖ್ಯೆ: 080- 22871291 ಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ರೆಲ್ವೆ ಪೊಲೀಸ್ ಠಾಣೆಯ ತನಿಖಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇ-ಕೆವೈಸಿಗೆ ಜೂನ್ 30 ಕೊನೆಯ ದಿನ

ಬಾಗಲಕೋಟ : ಜಿಲ್ಲೆಯಲ್ಲಿ ತಾಲೂಕುವಾರು ಪಡಿತರ ಚೀಟಿಯಲ್ಲಿನ ಕೆಲವು ಸದ್ಯಸರು ಇ-ಕೆವೈಸಿ ಮಾಡಿಕೊಂಡಿರುವುದಿಲ್ಲ.ಬಾಕಿ ಇರುವ ಸದ್ಯಸರು ಆದಷ್ಟೂ ಬೇಗ ಪಡಿತರ ಚೀಟಿ ಹಾಗೂ ಆಧಾರ ಕಾರ್ಡದೊಂದಿಗೆ ತಮ್ಮ ಸಮೀಪದ ನ್ಯಾಯ ಬೆಲೆ ಅಂಗಡಿಗೆ ಭೇಟಿ ನೀಡಿ ಜೂ 30ರೊಳಗೆ ಆಧಾರ ಇ-ಕೆವೈಸಿ ಮಾಡಿಸಿಕೊಳ್ಳಲು ಜಿಲ್ಲಾಧಿಕಾ-ರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪ್ರಧಾನ ಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗೆ ಅರ್ಜಿ ಆಹ್ವಾನ

ಬೆಳಗಾವಿ, : 2025ನೇ ಸಾಲಿನ ರಾಷ್ಟ್ರೀಯ ಪ್ರಧಾನ ಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 31. 2025 ಕ್ಕೆ ಅನ್ವಯವಾಗುವಂತೆ 05 ವರ್ಷ ಮೇಲ್ಪಟ್ಟ ಹಾಗೂ 18 ವರ್ಷದ ಒಳಗಿನ ಮಕ್ಕಳು ಧೈರ್ಯ ಮತ್ತು ಸಾಹಸದಿಂದ ಇತರರನ್ನು ರಕ್ಷಿಸಿದ ಹಾಗೂ ಕ್ರೀಡೆ, ಸಮಾಜ ಸೇವೆ, ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ ಸಂರಕ್ಷಣೆ, ಕಲೆ ಮತ್ತು ಸಂಸ್ಕೃತಿ ಹಾಗೂ ಇತರೆ ನೂತನ ಅವಿಷ್ಕಾರಗಳನ್ನು ಮಾಡಿ ಉತ್ತಮ ಸಾಧನೆ ಮಾಡಿದ ಮಕ್ಕಳು ಅರ್ಜಿ ಸಲ್ಲಿಸಬಹುದಾಗಿದೆ. ಆನ್‌ಲೈನ್ ಪೋರ್ಟಲ್ **https://awards.gov.in** ಮೂಲಕ ಜುಲೈ 31. 2025ರ ಒಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0831-2474111 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೃಷಿ ಇಲಾಖೆಯಲ್ಲಿ ಸಮಗ್ರ ಬದಲಾವಣೆ : ಸಚಿವ ಎನ್. ಚಲವರಾಯ ಸ್ವಾಮಿ



ಕಾರವಾರ. ರಾಜ್ಯದ ಕೃಷಿ ಇಲಾಖೆಯಲ್ಲಿ ಸಮಗ್ರ ಬದಲಾವಣೆ ತರಲಾಗುತ್ತಿದೆ ಎಂದು ಕೃಷಿ ಸಚಿವ ಎನ್. ಚಲವರಾಯ ಸ್ವಾಮಿ ಹೇಳಿದರು.

ಅವರು ಮಂಗಳವಾರ ಹಳಿಯಾಳದ ಪುರಭವನದಲ್ಲಿ, ಮುಂಗಾರು ಬೀಜ ಬಿತ್ತನೆ ಅಭಿಯಾನಕ್ಕೆ ಚಾಲನೆ ಹಾಗೂ ಕೃಷಿ ಯಂತ್ರೋಪಕರಣ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕೃಷಿ ಇಲಾಖೆಯಲ್ಲಿ ಸಮಗ್ರವಾಗಿ ಬದಲಾವಣೆ ತರಲಾಗುತ್ತಿದ್ದು 1000 ಅಧಿಕಾರಿ ಸಿಬ್ಬಂದಿಗಳ ನೇಮಕಾತಿಗೆ ಸೂಚನೆ ನೀಡಲಾಗಿದ್ದು, ಸದ್ಯದಲ್ಲಿಯೇ ನೋಟಿಫಿಕೇಷನ್ ಹೊರಡಿಸಲಾಗುವುದು ಹಾಗೂ 700 ಮಂದಿಗೆ ಈಗಾಗಲೇ ಮುಂಬಡ್ತಿ ನೀಡಲಾಗಿದೆ ಎಂದರು.

ರಾಜ್ಯದ 224 ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 24 ಸಾವಿರ ಕೃಷಿ ಹೊಂಡ ನಿರ್ಮಿಸುವ ಗುರಿ ಹೊಂದಲಾಗಿದೆ. ಕಳೆದ 2 ವರ್ಷದಲ್ಲಿ ರೈತರಿಗೆ 344 ಕೃಷಿ ಯಂತ್ರೋಪಕರಣಗಳನ್ನು ವಿತ-ರಿಸಲಾಗಿದೆ. ಕಬ್ಬು ಕಟಾವು ಯಂತ್ರಗಳ ಖರೀದಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತ-ರಿಗೆ 50 ಲಕ್ಷ ಹಾಗೂ ಸಾಮಾನ್ಯ ವರ್ಗದ ರೈತ-ರಿಗೆ 40 ಲಕ್ಷ ಸಬ್ಸಿಡಿ ನೀಡಲಾಗುತ್ತಿದೆ. ಸ್ಪಿಂಕ್ಲರ್‌ಗೆ ಶೇ. 90 ರಷ್ಟು ಸಬ್ಸಿಡಿ ನೀಡಲಾಗುತ್ತಿದ್ದು, ಇದರ ಸದುಪಯೋಗವನ್ನು ಎಲ್ಲಾ ರೈತರು ಪಡೆಯಬೇಕು ಎಂದರು.

ಸಮಗ್ರ ಕೃಷಿ ಮಾಡುವ ಅನೇಕ ರೈತರ ಆರ್ಥಿಕವಾಗಿ ಬಲಿಷ್ಠರಾಗಿದ್ದಾರೆ. ಭೂಮಿಯನ್ನು ನಂಬಿ ಸರ್ಕಾರದ ಸವಲತ್ತು ಪಡೆದುಕೊಂಡು ಎಲ್ಲಾ ರೈತರು ಆರ್ಥಿಕವಾಗಿ ಬಲಿಷ್ಠರಾಗಬೇಕು ಎಂದರು.

ರಾಜ್ಯ ಸರ್ಕಾರ ಅಧಿಕಾರಕ್ಕೆ ಜಾರಿಗೆ ತಂದ 5 ಗ್ಯಾರಂಟಿ ಯೋಜನೆಯನ್ನು ಜನರಿಗೆ ನೀಡಿ ಅವರ ಬದುಕನ್ನು ಹಸನು ಮಾಡಲಾಗಿದೆ. ವರ್ಷಕ್ಕೆ 50 ಸಾವಿರ ಕೋಟಿಯಂತೆ 5 ವರ್ಷಕ್ಕೆ 250 ಸಾವಿರ ಕೋಟಿಗಳನ್ನು ಗ್ಯಾರಂಟಿ ಯೋಜನೆ ಗಳಿಗೆ ಮೀಸಲಿಡಲಾಗಿದೆ. ಇದರ ಜೊತೆಗೆ ರಾಜ್ಯದಲ್ಲಿ ಇತರೆ ಅಭಿವೃದ್ಧಿ ಕೆಲಸಗಳು ನಡೆಯುತ್ತಿವೆ ಎಂದರು.

ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಹಾಗೂ ಹಳಿಯಾಳ ಶಾಸಕ ಆರ್. ವಿ. ದೇಶಪಾಂಡೆ ಮಾತನಾಡಿ, ರೈತರು ತಮಗೆ ವಿತರಿಸಿರುವ ಕೃಷಿ ಯಂತ್ರೋಪಕರಣಗಳನ್ನು ಬಳಸಿಕೊಂಡು ಆರ್ಥಿಕ ಸುಧಾರಣೆಯ ಜೊತೆಗೆ ಕೃಷಿ ಉತ್ಪನ್ನಗಳನ್ನು ಹೆಚ್ಚು ಮಾಡಿಕೊಳ್ಳಬೇಕು. ಭತ್ತ ಜೋಳದ ಬೆಳೆಗಳ ಇಳುವರಿ ಕಡಿಮೆಯಾದಂತೆ ಇಲ್ಲಿನ ರೈತರು ಕಬ್ಬು ಬೆಳೆಯಲು ಪ್ರಾರಂಭಿಸಿದರು. ಇದರಿಂದಾಗಿ ಈ ಭಾಗದಲ್ಲಿ ಸಕ್ಕರೆ ಕಾರ್ಖಾನೆಯನ್ನು ತೆರೆಯಲಾಯಿತು. ಸರ್ಕಾರದಿಂದ ನೀಡುವ ಸವಲತ್ತುಗಳನ್ನು ಪಡೆದುಕೊಂಡು ರೈತರು ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕವಾಗಿ ಅಭಿವೃದ್ಧಿಯಾದರೆ ದೇಶದ ಆರ್ಥಿಕ ಅಭಿವೃದ್ಧಿ ಹೊಂದಲು ಸಾಧ್ಯ ಎಂದರು.

ಇದೇ ಸಂದರ್ಭದಲ್ಲಿ 2025-26ನೇ ಸಾಲಿನ ಬೆಳೆ ಸಮೀಕ್ಷೆ ಕರಪತ್ರವನ್ನು ಬಿಡುಗಡೆಗೊಳಿಸಲಾಯಿತು.

ಕೃಷಿ ಇಲಾಖೆ ಆಯುಕ್ತ ವೈ ಎಸ ಪಾಟೀಲ್ , ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ, ಕೃಷಿ ಇಲಾಖೆ ನಿರ್ದೇಶಕ ಡಾ. ಜಿ.ಟಿ ಪುತ್ರ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಪ್ರಕಾಶ ಹಾಲಮ್ಮನವರ, ಹಳಿಯಾಳ ಪುರಸಭೆ ಅಧ್ಯಕ್ಷೆ ಪಾರ್ವತಿ ಅಗಸರ, ಉಪಾಧ್ಯಕ್ಷೆ ಲಕ್ಷ್ಮೀ ವಡ್ಡರ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಶಿವಪ್ರಸಾದ್ ಗಾವಠಕರ್ ಮತ್ತಿತರು ಇದ್ದರು.

## ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆ: ಬೆಳೆವಿಮೆಗಾಗಿ ರೈತರು ನೋಂದಾಯಿಸಿ

ಕೊಪ್ಪಳ : 2025-26ನೇ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ ಬೀಮಾ ಯೋಜನೆಯನ್ನು ಮುಂಗಾರು ಹಂಗಾಮಿನಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆಯಡಿ ರೈತರ ಬೆಳೆವಿಮೆ ನೊಂದಾಯಿಸಿಕೊಳ್ಳುವಂತೆ ಕೊಪ್ಪಳ ಕೃಷಿ ಇಲಾಖೆ ಜಂಟಿ ನಿರ್ದೇಶಕ ಟಿ.ಎಸ್ ರುದ್ರೇಶಪ್ಪ ಅವರು ತಿಳಿಸಿದ್ದಾರೆ.

ನೀರಾವರಿ ಹತ್ತಿ ಮತ್ತು ಮಳೆಯಾಶ್ರಿತ ಹೆಸರು ಬೆಳೆಗಳಿಗೆ ನೋಂದಾಯಿಸಲು ಜುಲೈ 15 ಹಾಗೂ ಇತರೆ ಅಧಿಸೂಚಿತ ಎಲ್ಲಾ ಬೆಳೆಗಳಿಗೆ ನೋಂದಾಯಿಸಲು ಜುಲೈ 31 ಕೊನೆಯ ದಿನವಾಗಿರುತ್ತದೆ. ರೈತರು ಬೆಳೆವಿಮೆ ನೋಂದಾಯಿಸಿ ಬೆಳೆವಿಮೆ ಪರಿಹಾರ ಲಾಭ ಪಡೆಯಬೇಕು. ರೈತರು ಕಡ್ಡಾಯವಾಗಿ ಎಫ್‌ಐಡಿ ಯನ್ನು ಹೊಂದಿರಬೇಕು. ರೈತರು ಬಿತ್ತನೆ ಮಾಡುವ ಬೆಳೆಯನ್ನೆ ನೋಂದಾಯಿಸಬೇಕು ಮತ್ತು ತಮ್ಮ ಬೆಳೆಯನ್ನು ತಾವೇ ಖುದ್ದಾಗಿ ಬೆಳೆ ಸಮೀಕ್ಷೆಯನ್ನು ಮಾಡಬೇಕು. ರೈತರು ತಮ್ಮ ದಾಖಲಾತಿಗಳಾದ ಪಹಣಿ, ಆಧಾರಕಾರ್ಡ ಮತ್ತು ಬ್ಯಾಂಕ್ ಪಾಸ್ ಬುಕ್ ಜರಾಕ್ಸ ಇನ್ನೊಬ್ಬರಿಗೆ ಯಾವುದೇ ಕಾರಣಕ್ಕೂ ನೀಡಬಾರದು. ತಾವೇ ಖುದ್ದಾಗಿ ಬೆಳೆವಿಮೆ ನೋಂದಾಯಿಸಬೇಕು. ಒಂದು ವೇಳೆ ಬೇರೆ ರೈತರ ದಾಖಲಾತಿಗಳನ್ನು ಉಪಯೋಗಿಸಿಕೊಂಡು ಬೆಳೆವಿಮೆ ವಿಮೆ ನೋಂದಾಯಿಸಿದ್ದು, ಕಂಡು ಬಂದರೆ ಅಂತವರ ವಿವರಗಳನ್ನು ಕೂಡಲೇ ಕೃಷಿ ಇಲಾಖೆಗೆ ತಿಳಿಸಲು ಸೂಚಿಸಿದೆ.

ಅಧಿಸೂಚಿತ ಬೆಳೆಗಳ ವಿವರ: ಗ್ರಾಮ ಪಂಚಾಯತಿ ಮಟ್ಟದಲ್ಲಿ ಅಧಿಸೂಚಿತ ಬೆಳೆಗಳ ವಿವರ ಇಂತಿದೆ. ಗಂಗಾವತಿ ತಾಲ್ಲೂಕಿನ ನೀರಾವರಿ ಭತ್ತ, ಕೊಪ್ಪಳ ಮತ್ತು ಕುಷ್ಟಗಿ ತಾಲ್ಲೂಕಿನ ಮಳೆಯಾಶ್ರಿತ ಮುಸಕಿನಜೋಳ ಹಾಗೂ ಸಜ್ಜೆ, ಯಲಬುರ್ಗಾ ತಾಲ್ಲೂಕಿನ ಮಳೆಯಾಶ್ರಿತ ಹೆಸರು & ಮುಸುಕಿನಜೋಳ ಬೆಳೆ ಸೇರಿದೆ.

ಹೋಬಳಿ ಮಟ್ಟದಲ್ಲಿ ಅಧಿಸೂಚಿತ ಬೆಳೆಗಳಾದ ಮಳೆಯಾಶ್ರಿತ ಅಥವಾ ನೀರಾವರಿ ಬೆಳೆಗಳಾದ ಭತ್ತ, ಜೋಳ, ಮುಸಕಿನ ಜೋಳ, ಸಜ್ಜೆ, ಸೂರ್ಯಕಾಂತಿ, ತೊಗರಿ, ನಲೆಗಡಲೆ (ಶೇಂಗಾ), ಹತ್ತಿ, ಈರುಳ್ಳಿ, ಹಾಗೂ ಮಳೆಯಾಶ್ರಿತ ಅಲಸಂದಿ, ನವಣೆ, ಹೆಸರು, ಹುರಳಿ, ಎಳ್ಳು ಬೆಳೆ ಮತ್ತು ಟಮೆಟೊ ಬೆಳೆ ಈ ಯೋಜನೆಯಡಿ ಒಳಗೊಂಡಿದೆ.

ಪ್ರಸಕ್ತ ಸಾಲಿಗೆ ಟಾಟಾ ಎಐಜಿ ಇನ್ಸೂರೇನ್ಸ ಕೋ ಲೀಮಿಟೆಡ್ ಆಯ್ಕೆಯಾಗಿದ್ದು, ರೈತರು ಹೆಚ್ಚಿನ ಮಾಹಿತಿಗಾಗಿ ಇನ್ಸೂರೇನ್ಸ ಕಂಪನಿಯ ಪ್ರತಿನಿಧಿ ಅಥವಾ ಟೋಲ್ ಪ್ರೀ ನಂಬರ-18002093536 ಅಥ-ವಾ ಹತ್ತಿರದ ರೈತ ಸಂಪರ್ಕ ಕೇಂದ್ರ, ಸಾಮಾನ್ಯ ಸೇವಾ ಕೇಂದ್ರ, ಗ್ರಾಮ್ ಒನ್ ಅಥವಾ ಸಂಬಂಧಪಟ್ಟ ಬ್ಯಾಂಕ್ ಶಾಖೆಗೆ ಸಂಪರ್ಕಿಸುವಂತೆ ಜಂಟಿ ಕೃಷಿ ನಿರ್ದೇಶಕರ ಕಛೇರಿಯ ಪ್ರಕಟಣೆ ತಿಳಿಸಿದೆ.

### ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ ಅನುಷ್ಠಾನ ಜಿಲ್ಲೆಯ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಬೆಳೆ ವಿಮೆ ನೋಂದಣಿ ಮಾಡಿಸಲು ಸಲಹೆ

ಹಾವೇರಿ: ಪ್ರಸಕ್ತ 2025-26 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆ ಅನುಷ್ಠಾನಗೊಳಿಸಲು ಜಿಲ್ಲೆಯ ಎಂಟು ತಾಲೂಕುಗಳಲ್ಲಿ ನಾಲ್ಕು ಮುಖ್ಯ ಬೆಳೆಗಳನ್ನು ಗ್ರಾಮ ಪಂಚಾಯತಿ ಮಟ್ಟಕ್ಕೆ ಹಾಗೂ ಉಳಿದ ಬೆಳೆಗಳನ್ನು ಹೋಬಳಿ ಮಟ್ಟದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ತಿಳಿಸಿದ್ದಾರೆ.

ಈ ಯೋಜನೆಯಡಿ ಕೆಳಕಂಡಂತೆ ಬೆಳೆವಾರು ಅಂತಿಮ ದಿನಾಂಕದೊಳಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ರೈತರು ಬೆಳೆ ವಿಮೆ ನೊಂದಣಿ ಮಾಡಿಸಿಕೊಳ್ಳಲು ವಿನಂತಿಸಿಕೊಂಡಿದ್ದಾರೆ.

ಬೆಳೆಗಳ ವಿವರ: ಮುಂಗಾರು ಹಂಗಾಮಿನ ಶೇಂಗಾ (ಮಳೆ ಆಶ್ರಿತ), ಭತ್ತ (ಮಳೆ ಆಶ್ರಿತ), ಭತ್ತ (ನೀರಾವರಿ), ಮುಸುಕಿನ ಜೋಳ(ಮಳೆ ಆಶ್ರಿತ) ಬೆಳೆಗಳಿಗೆ ದಿನಾಂಕ 31-07-2025ರೊಳಗಾಗಿ ಹಾಗೂ ಈರುಳ್ಳಿ (ನೀರಾವರಿ), ಈರುಳ್ಳಿ (ಮಳೆ ಆಶ್ರಿತ), ಎಲೆಕೋಸು-ಓಖಗಳಿಗೆ ದಿನಾಂಕ 15-07-2025 ರೊಳಗಾಗಿ ವಿಮಾ ಕಂತು ತುಂಬಬೇಕು.

ಉದ್ದು (ಮಳೆ ಆಶ್ರಿತ), ಹತ್ತಿ (ನೀರಾವರಿ), ಹತ್ತಿ (ಮಳೆ ಆಶ್ರಿತ), ಅಲಸಂದಿ (ಮಳೆ ಆಶ್ರಿತ), ಹೆಸರು (ಮಳೆ ಆಶ್ರಿತ), ಶೇಂಗಾ (ನೀರಾವರಿ), ಶೇಂಗಾ (ಮಳೆ ಆಶ್ರಿತ), ಮುಸುಕಿನ ಜೋಳ (ನೀರಾವರಿ), ಭತ್ತ (ನೀರಾವರಿ), ಭತ್ತ (ಮಳೆ ಆಶ್ರಿತ), ತೊಗರಿ (ಮಳೆ ಆಶ್ರಿತ), ರಾಗಿ (ಮಳೆ ಆಶ್ರಿತ), ಕೆಂಪು ಮೆಣಸಿನಕಾಯಿ (ನೀರಾವರಿ), ಕೆಂಪು ಮೆಣಸಿನಕಾಯಿ (ಮಳೆ ಆಶ್ರಿತ), ಸಾವೆ (ಮಳೆ ಆಶ್ರಿತ), ಜೋಳ (ನೀರಾವರಿ), ಜೋಳ (ಮಳೆ ಆಶ್ರಿತ), ಸೋಯಾ ಅವರೆ (ಮಳೆ ಆಶ್ರಿತ) ಮತ್ತು ಟೊಮ್ಯಾಟೋ-ಓಖ ಬೆಳೆಗಳಿಗೆ ದಿನಾಂಕ 31-07-2025 ಹಾಗೂ ಸೂರ್ಯಕಾಂತಿ (ಮಳೆ ಆಶ್ರಿತ) ಬೆಳೆಗಳಿಗೆ ದಿನಾಂಕ 16-08-2025 ರೊಳಗಾಗಿ ವಿಮಾ ಕಂತು ತುಂಬಬೇಕು.




ಬೆಳೆ ಸಾಲ ಪಡೆಯದ ರೈತರು ಅರ್ಜಿಯೊಂದಿಗೆ ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಪಹಣಿ, ಕಂದಾಯ ರಶೀದಿ, ಖಾತೆ ಪುಸ್ತಕ, ಪಾಸ್ ಪುಸ್ತಕ ಹಾಗೂ ಆಧಾರಕಾರ್ಡ್ ಸಂಖ್ಯೆನೀಡಿ ಬ್ಯಾಂಕ್, ಸಾಮಾನ್ಯ ಸೇವಾ ಕೇಂದ್ರ **(Common Service Centers),** ಬೆಂಗಳೂರು ಒನ್, ಕರ್ನಾಟಕ ಒನ್ ಹಾಗೂ ಗ್ರಾಮ ಒನ್ ಕೇಂದ್ರಗಳಲ್ಲಿ ನೊಂದಾಯಿಸಬೇಕು. ರೈತ ಬಾಂಧವರು ತಮ್ಮ ಅರ್ಜಿಯಲ್ಲಿ ಯಾವ ಬೆಳೆ, ಮಳೆ ಆಶ್ರಿತವೋ ಅಥವಾ ನಿರಾವರಿಯೋ ಎಂಬುದನ್ನು ಪರಿಶೀಲಿಸಿ ಖಚಿತಪಡಿಸಿಕೊಂಡು ನೊಂದಾಯಿಸಿಕೊಳ್ಳಬೇಕು ಎಂದು ತಿಳಿಸಿದ್ದಾರೆ. ಜಿಲ್ಲೆಯ ರೈತರು ಪ್ರಕೃತಿ ವಿಕೋಪದ ಸಂದರ್ಭದಲ್ಲಿ ಬೆಳೆ ಹಾನಿಯಿಂದ ಉಂಟಾಗುವ ಆರ್ಥಿಕ ನಷ್ಟವನ್ನು ಬೆಳೆ ವಿಮೆಯನ್ನು ಪಡೆಯವುದರ ಮೂಲಕ ಸ್ಥಿರ ಆದಾಯವನ್ನು ಪಡೆಯಬಹುದು. ಆದ್ದರಿಂದ ಜಿಲ್ಲೆಯ ರೈತರು ಈ ಯೋಜನೆಯ ಲಾಭ ಪಡೆಯಲು ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಗ್ರಿಕಲ್ಚರ್ ಇನ್ಸೂರೆನ್ಸ್ ಕಂಪನಿ, ಬೆಂಗಳೂರು ಸಂಸ್ಥೆಯ ಪ್ರತಿನಿಧಿಗಳು, ಶುಲ್ಕರಹಿತ ಸಹಾಯವಾಣಿ 1800 425 0505 ಅಥವಾ ಸಮೀಪದ ಸಹಾಯಕ ಕೃಷಿ ನಿರ್ದೇಶಕರ ಕಚೇರಿ, ಹತ್ತಿರದ ರೈತ ಸಂಪರ್ಕ ಕೇಂದ್ರ ಹಾಗೂ ಬ್ಯಾಂಕ್ ಶಾಖೆಯವರನ್ನು ಸಂಪರ್ಕಿಸಬಹುದೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪತ್ನಿಯ ಶೀಲದ ಮೇಲೆ ಸಂಶಯ : ಕೊಲೆ ಮಾಡಿದ ಆರೋಪಿಗೆ ಶಿಕ್ಷೆ

ಬಾಗಲಕೋಟ : : ಪತ್ನಿಯ ಶೀಲದ ಮೇಲೆ ಸಂಶಯ ಪಟ್ಟು ಕೊಲೆ ಮಾಡಿದ ಅಪರಾಧಕ್ಕೆ ಆರೋಪಿಗೆ ಕಲಂ 302 ಐಪಿಸಿ ಅಡಿ ಜೀವಾವಧಿ ಶಿಕ್ಷೆ ಮತ್ತು 10 ಸಾವಿರ ರೂ.ಗಳ ದಂಡಿ ವಿಧಿಸಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರು ತೀರ್ಪು ನೀಡಿದ್ದಾರೆ.

ನವನಗರದ ವಾಂಬೆ ಕಾಲನಿಯಲ್ಲಿಯ ನಿವಾಸಿ ಯಮನಪ್ಪ ಹಳ್ಳದಮನಿ ಆರೋಪಿಯಾಗಿದ್ದು, ಪತ್ನಿಯ ಶೀಲದ ಮೇಲೆ ಸಂಶಯ ವ್ಯಕ್ತಪಡಿಸಿ ತನ್ನ ಗೆಳೆಯನಾದ ಆರೋಪಿ-2 ಲಕ್ಷ್ಮಣ ದಶರತ ಪೂಜಾರಿಯೊಂದಿಗೆ ಕೂಡಿಕೊಂಡು ತನ್ನ ಪತ್ನಿ ರೂಪಾಳನ್ನು ಕೊಲೆ ಮಾಡಿ ಸುಟ್ಟು ಹಾಕಿರುವ ಅಪರಾಧ ತನಿಖೆಯಿಂದ ಸಿಕ್ಕ ಸಾಕ್ಷಿ ಪುರಾವೆಗಳಿಂದ ದೃಡಪಟ್ಟಿದ್ದಿಂದ ಆರೋಪಿತರ ಮೇಲೆ ನವನಗರದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ತನಿಖೆ ಕೈಗೊಂಡು ಸಾಕ್ಷಾದಾರಗಳನ್ನು ಸಂಗ್ರಹಿಸಿ ಆರೋಪಿಯ ವಿರುದ್ದ ಸಿಪಿಐ ಎಂ.ಎಸ್.ತುಳಸಿಗೇರಿ ನ್ಯಾಯಾಲಯಕ್ಕೆ ಸಲ್ಲಿಸಿದ್ದರು.

ಪ್ರಕಟಣದ ವಿಚಾರಣೆಯನ್ನು ಕೈಗೆತ್ತಿಕೊಂಡ ಬಾಗಲಕೋಟೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ನ್ಯಾಯಾಲಯಕ್ಕೆ ಸಲ್ಲಿಸಿದ ಸಾಕ್ಷಿ ಪುರಾವೆಗಳನ್ನು ಅವಲೋಕಿಸಿ, ಅಭಿಯೋಜನೆಯು ಆರೋಪಿಯಾದ ಯಮನಪ್ಪ ರಾಮಪ್ಪ ಹಳ್ಳದಮನಿ ಮೇಲಿನ ಆಪಾದನೆಯನ್ನು ರುಜುವಾತು ಪಡಿಸುವಲ್ಲಿ ಯಶಸ್ವಿಯಾದ ಹಿನ್ನಲೆಯಲ್ಲಿ ಆರೋಪಿಗೆ ಕಲಂ 302 ಐಪಿಸಿ ಅಡಿ ಜೀವಾವಧಿ ಶಿಕ್ಷೆ ಮತ್ತು 10 ಸಾವಿರ ರೂ.ಗಳ ದಂಡಿ ವಿಧಿಸಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರು ತೀರ್ಪು ನೀಡಿದ್ದಾರೆ.

****

## ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ 823 ನೇ ನಮ್ಮೂರು ನಮ್ಮ ಕೆರೆ" ಪುನಶ್ಚೇತನ ಕಾರ್ಯಕ್ರಮ



ಬೆಳಗಾವಿ: ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭೀವೃದ್ಧಿ ಯೋಜನೆಯ ನಮ್ಮೂರು ನಮ್ಮ ಕೆರೆ ಪುನಶ್ಚೇತನ ಕಾರ್ಯದಿಂದ ಗ್ರಾಮಗಳ ಅಭಿವೃದ್ಧಿಗೆ ಪೂರಕವಾಗಿದೆ ಹಿರಿಯ ನ್ಯಾಯವಾದಿಗಳಾದ ಜಿ.ಆರ್ . ಸೂನೇರ್ ಅವರು ಹೇಳಿದರು.

ತಾಲೂಕಿನ ಅಂಬೇವಾಡಿ ಗ್ರಾ .ಪಂ ಗೋಜಗಾ ಗ್ರಾಮದ ಶ್ರೀ ಮಹಾ ಲಕ್ಮೇಶ್ವರ ಮಂದಿರದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಹಾಗೂ ಸರಕಾರಿ ಕೆರೆ ಅಭಿವೃದ್ಧಿ ಸಮಿತಿ ಗೋಜಗಾ ಸಂಯುಕ್ತ ಆಶ್ರಯದಲ್ಲಿ "823 ನೇ ನಮ್ಮೂರು ನಮ್ಮ ಕೆರೆ" ಕಾರ್ಯಕ್ರಮದಡಿ ಪುನಶ್ಚೇತನಗೊಳಿಸಲಾದ ಕೆರೆ ನಾಮಫಲಕ ಅನಾವರಣ ಮತ್ತು ಕೆರೆ ಹಸ್ತಾಂತರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕೆರೆಗಳು ಇದ್ದರೆ, ಜಲಮೂಲಗಳಲ್ಲಿ ನೀರಿನ ಹರಿವು ಹೆಚ್ಚಾಗಲಿವೆ. ಗ್ರಾಮೀಣ ಪ್ರದೇಶದ ಕೆರೆಗಳು ಪ್ರತಿಯೊಂದು ಊರಿನ ಸಮೃದ್ಧಿಯ ಪ್ರತೀಕವಾಗಿದೆ. ಗ್ರಾಮೀಣ ಜನ ಜೀವನವು ಸಂಪೂರ್ಣವಾಗಿ ಕೆರೆಗಳ ಮೇಲೆಯೆ ಅವಲಂಬಿತವಾಗಿದೆ. ನಾವು ಅವುಗಳನ್ನು ಕಾಪಾಡಿಕೊಂಡು ಹೋಗಬೇಕಿದೆ.

ಅಂತರ್ಜಲದ ಮುಖ್ಯ ಸೆಲೆಯಾಗಿದ್ದ ಈ ಕೆರೆಗಳು ಮಳೆಗಾಲದಲ್ಲಿಯೇ ನೀರು ತುಂಬದ ಮಟ್ಟಕ್ಕೆ ಬಂದಿವೆ. ಕೆರೆಗಳ ಇಂದಿನ ದುಃಸ್ಥಿತಿಗೆ ನೇರವಾಗಿ ಮಾನವನೇ ಹೊಣೆ ಹೊರತು ಬೇರೆ ಯಾರೂ ಅಲ್ಲ. ಹಾಗಾಗಿ ಇಂದು ಹೆಚ್ಚುತ್ತಿರುವ ನೀರಿನ ಬೇಡಿಕೆಗೆ ಕೆರೆಗಳನ್ನು ಪುನಃಶ್ಚೇತನಗೆಣಟಿಜಜಜಿಟಿಜಜಳಿಸದ ಹೊರತು ಬೇರೆ ಯಾವುದೇ ಮಾರ್ಗೋಪಾಯಗಳು ಇಲ್ಲವಾಗಿದೆ. ಹೀಗಾಗಿ ಅಂತರ್ಜಲ ಮಟ್ಟ ಕುಸಿತದ ಗಂಭೀರ ಸಮಸ್ಯೆಯನ್ನು ನಿವಾರಿಸುವ ನಿಟ್ಟಿನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಧರ್ಮಾಧಿಕಾರಿ ಡಾ.ಡಿ. ವೀರೇಂದ್ರ ಹೆಗ್ಗಡೆ ಮತ್ತು ಹೇಮಾವತಿ ವೀ. ಹೆಗ್ಗಡೆ ಅವರು ಶಾಶ್ವತ ಪರಿಹಾರವೆಂಬಂತೆ 2016ರಲ್ಲಿ "ನಮ್ಮೂರು ನಮ್ಮ ಕೆರೆ' ಯೋಜನೆ ಪ್ರಾರಂಭಿಸಿದ್ದು, 823 ನೇ ನಮ್ಮೂರು ನಮ್ಮ ಕೆರೆ ಪುನಶ್ಚೇತನಗೊಳಿಸುವ ಕಾರ್ಯ ಯಶಸ್ವಿಯಾಗಿದೆ. ಗ್ರಾಮಸ್ಥರು ಕೆರೆಯನ್ನು ಸ್ವಚ್ಛವಾಗಿ ನಿಭಾಯಿಸಿಕೊಂಡು ಹೋಗಬೇಕು ಎಂದರು.

ಜಿಲ್ಲಾ ನಿರ್ದೇಶಕರಾದ ಸತೀಶ್ ನಾಯ್ಕ ಮಾತನಾಡಿ, ಕೆರೆ ನಮ್ಮ ಜೀವನಾಡಿ, ಗ್ರಾಮಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭೀವೃದ್ಧಿ ಯೋಜನೆಯ ಕೆರೆಯನ್ನು ಪುನಶ್ಚೇತನಗೊಳಿಸಲಾಗಿದೆ. ಮಹಿಳೆಯರ ಅಭಿವೃದ್ದಿಗಾಗಿ ಹಲವಾರು ಯೋಜನೆಗಳಿಗೆ ಇದೆ ಅವುಗಳನ್ನು ಸದುಪಯೋಗ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಹಿರಿಯ ನ್ಯಾಯವಾದಿಗಳಾದ ಜಿ.ಆರ್ . ಸೂನೇರ್, ತಾಪಂ ಇಓ ಯಶವಂತ ಅವರು ಕೆರೆ ಆವರಣದಲ್ಲಿ ಸಸಿ ನೇಡುವ ಮೂಲಕ ಕೆರೆಯ ಹಸ್ತಾಂತರ ಕಾರ್ಯವನ್ನು ನೇರವೇರಿಸಿದರು.

ಈ ಸಂದರ್ಭದಲ್ಲಿ ಕೆರೆ ಸಮಿತಿಯ ಅಧ್ಯಕ್ಷರು ಶಿವಾಜಿ ಯಾಳಗೆ, ಪಿಡಿಓ ಚಿದಾನಂದ, ಅಧ್ಯಕ್ಷೇ ಲಕ್ಷ್ಮಿ ಯಳಗುಕರ್ , ಚೇತನ್ ಪಾಟೀಲ್ , ರಾಜಶ್ರೀ , ದಯಾಶೀಲ, ಜಿಲ್ಲಾ ನಿರ್ದೇಶಕರಾದ ಸತೀಶ್ ನಾಯ್ಕ, ನಿಂಗರಾಜ್ ,ಕೆರೆ ಸಮಿತಿಯ ಸರ್ವ ಸದಸ್ಯರು, ಕೃಷಿ ಮೇಲ್ವಿಚಾರಕ ನಾಗರಾಜ್, ವಲಯದ ಎಲ್ಲಾ ಸೇವಾ ಪ್ರತಿನಿಧಿಗಳು, ಸ್ವಸಹಾಯ ಸಂಘಗಳ ಸದಸ್ಯರೂ ಗ್ರಾಮಪಂಚಾಯಿತಿ ಸರ್ವ ಸದಸ್ಯರು ಇತರರು ಇದ್ದರು. ಯೋಜನಾಧಿಕಾರಿಗಳು ಸ್ವಾಗತಿಸಿದರು. ವಲಯದ ಮೇಲ್ವಿಚಾರಕಿ ಸಂಗೀತಾ ನಿರೂಪಿಸಿ, ವಂದಿಸಿದರು.

## ಜಿಟಿಟಿಸಿ ತರಬೇತಿಗೆ ಪ್ರವೇಶ

ಬಾಗಲಕೋಟ : : ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ ಇಲಾಖೆ ಹೆಸರಿನಲ್ಲಿ ಕಾರ್ಯನಿರ್ವಹಿಸುತ್ತಿರುವ **fnn1 (GTTC)** ಕೇಂದ್ರಗಳಲ್ಲಿ ಹತ್ತನೇ ತರಗತಿ ಉತ್ತೀರ್ಣ ಅಥವಾ ಅನುತ್ತೀರ್ಣ ಯುವಕರಿಗೆ ಟೂಲರೂಮ್ ಮಶಿನಿಸ್ಟ್ ತಾಂತ್ರಿಕ ತರಬೇತಿಗೆ ಪ್ರವೇಶ ಆರಂಭವಾಗಿದೆ. ತರಬೇತಿಯಲ್ಲಿ ಟರ್ನರ್,ಮಿಲ್ಲರ್,ಗ್ಲೆಂಡರ್,ಸಿ-ಎನ್ಸಿ,ಕ್ಯಾಡ್-ಕ್ಯಾಮ್,ಟೂಲ್ & ಡೈ ಮೇಕಿಂ-ಗ್ ನ ಜೊತೆಗೆ ಅಟೋಕ್ಯಾಡ್,ಭಾಷಾ ಮತ್ತು ಉದ್ಯೋಗ ಕೌಶಲ್ಯ ತರಬೇತಿಗಳು ಲಬ್ಯವಿದ್ದು. ಕೈಗಾರಿಕಾ ಅನುಭವ ಹೊಂದಿದ ಶಿಕ್ಷಕರಿಂದ ಪಾಠ ಮಾಡಲಾಗುತ್ತದೆ.ತರಬೇತಿ ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ವಿಮಾನ,ಅಟೊಮೊಬೈಲ್ ಹಾಗೂ ಟೂಲಿಂಗ್ ಕ್ಷೇತ್ರಗಳಲ್ಲಿ ಉದ್ಯೋಗಾವಕಾಶ ದೊರೆಯಲಿದೆ.ಆಸಕ್ತರು ಜುಲೈ 1ರೊಳಗೆ ಅರ್ಜಿ ಸಲ್ಲಿಸಬೇಕು.ಹೆಚ್ಚನ ಮಾಹಿತಿಗಾಗಿ ಹುಬ್ಬಳಿ 8183860552 / 9902101010 ಅಥ-ವಾ ನರಗುಂದ 8088536896 ಕೇಂದ್ರಗಳಲ್ಲಿ ಸಂಪರ್ಕಿಸಬಹುದು ಎಂದು ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅತಿಸಾರ ಭೇದಿ ನಿಯಂತ್ರಣ ಕಾರ್ಯಕ್ರಮ: ಸಮನ್ವಯ ಸಮಿತಿ ಸಭೆ

# ಅಧಿಕಾರಿಗಳು ಸಮನ್ವಯತೆ ಸಾಧಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿ: ನಲಿನ್

ಕೊಪ್ಪಳ : ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಆರೋಗ್ಯ ಇಲಾಖೆಯ ಅಧಿಕಾರಿಗಳ ಜೊತೆ ಸಮನ್ವಯತೆ ಸಾಧಿಸಿ 5 ವರ್ಷದೊಳಗಿನ ಮಕ್ಕಳಲ್ಲಿ ಕಂಡು ಬರುವ ಅತಿಸಾರ ಭೇದಿ ನಿಯಂತ್ರಣ ಮಾಡುವ ಬಗ್ಗೆ ಕ್ರಮ ಕೈಗೊಳ್ಳಲು ಸಹಕರಿಸುವಂತೆ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು ಸೂಚಿಸಿದರು.

ಜೂನ್ 13 ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಅತಿಸಾರ ಭೇದಿ ನಿಯಂತ್ರಣ ಕಾರ್ಯಕ್ರಮದ ಕುರಿತ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆರೋಗ್ಯ ಇಲಾಖೆಯ ಎಲ್ಲಾ ತಾಲೂಕಾ ಆಸ್ಪತ್ರೆಗಳಲ್ಲಿ, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮತ್ತು ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಒಆರ್‌ಎಸ್ ಕಾರ್ನರ್ ಪ್ರಾರಂಭಿಸಿ ಚಿಕಿತ್ಸೆ ನೀಡಬೇಕು ಹಾಗೂ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು ಮತ್ತು ಆಶಾ ಕಾರ್ಯಕರ್ತೆಯರು ಮನೆ ಮನೆಗೆ ಭೇಟಿ ನೀಡಿ 5 ವರ್ಷದೊಳಗಿನ ಮಕ್ಕಳಿರುವ ಮನೆಗಳಿಗೆ ಒಆರ್‌ಎಸ್ ಪ್ಯಾಕೆಟ್ ಮತ್ತು ಝಿಂಕ್ ಮಾತ್ರೆಯನ್ನು ವಿತರಣೆ ಮಾಡಬೇಕು. ಅಂಗನವಾಡಿ ಕೇಂದ್ರ ಮತ್ತು ಶಾಲೆಗಳಲ್ಲಿ ಮಕ್ಕಳಿಗೆ ಅತಿಸಾರ



ಭೇದಿ ಉಂಟಾಗದಂತೆ ಕೈತೊಳೆಯುವ ವಿಧಾನಗಳ ಬಗ್ಗೆ ಹಾಗೂ ವೈಯಕ್ತಿಕ ಸ್ವಚ್ಛತೆ ಬಗ್ಗೆ ಆರೋಗ್ಯ ಶಿಕ್ಷಣ ನೀಡಬೇಕು. ಅತಿಸಾರ ಭೇದಿ ನಿಯಂತ್ರಿಸಲು ವಿವಿಧ ಇಲಾಖೆಗಳಾದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ವತಿಯಿಂದ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರಿಗೆ ಹಾಗೂ ಸಹಾಯಕರಿಗೆ ಇದರ ಬಗ್ಗೆ ಮಾಹಿತಿ ನೀಡುವಂತೆ ಹಾಗೂ ಮಕ್ಕಳಿಗೆ ಕೈತೊಳೆಯುವ ವಿಧಾನಗಳ ಬಗ್ಗೆ ಅರಿವು ಮೂಡಿಸುವಂತೆ ಕ್ರಮ ಕೈಗೊಳ್ಳಬೇಕು ಎಂದು ಅವರು ಹೇಳಿದರು.

ಅದೇ ರೀತಿ ಶಿಕ್ಷಣ ಇಲಾಖೆಯಿಂದ ಎಲ್ಲಾ ಶಾಲೆಗಳಲ್ಲಿ ಪ್ರಾರ್ಥನಾ ಸಮಯದಲ್ಲಿ ಕೈತೊಳೆಯುವ ವಿಧಾನಗಳ ಬಗ್ಗೆ ಘೋಷಣೆ ಕೂಗುವಂತೆ ಕ್ರಮ ಕೈಗೊಳ್ಳಬೇಕು. ಪಂಚಾಯತ್ ರಾಜ್ ಇಲಾಖೆಯಿಂದ ಗ್ರಾಮದ ಎಲ್ಲಾ ಕುಡಿಯುವ ನೀರಿನ ಟ್ಯಾಂಕ್‌ಗಳನ್ನು ಸ್ವಚ್ಛವಾಗಿ ತೊಳೆದು ಶುದ್ಧೀಕರಣ ಮಾಡಿಸಬೇಕು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಈ ಕಾರ್ಯಕ್ರಮದ ಬಗ್ಗೆ ಹೆಚ್ಚು ಹೆಚ್ಚು ಪ್ರಚಾರ ಮಾಡಿಸಬೇಕು ಎಂದು ತಿಳಿಸಿದ ಅವರು, ಈ ರೀತಿಯಾಗಿ ವಿವಿಧ ಇಲಾಖೆಗಳು ಸಮನ್ವಯ ಸಾಧಿಸಿ 0–5 ವರ್ಷದ ಮಕ್ಕಳಿಗೆ ಅತಿಸಾರ ಭೇದಿ ಉಂಟಾಗದಂತೆ ಕ್ರಮವಹಿಸಲು ಸೂಚಿಸಿದರು.

ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೇಯ ಅವರು ಮಾತನಾಡಿ, ಎಲ್ಲ ಇಲಾಖೆಗಳು ಪರಸ್ಪರ ಸಹಕಾರದೊಂದಿಗೆ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಸೂಚಿಸಿದರು.

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳಾದ ಡಾ॥ ಪ್ರಕಾಶ ವಿ. ಇವರು ಮಾತನಾಡಿ, ಅತಿಸಾರ ಭೇದಿಯಿಂದ 5 ವರ್ಷದೊಳಗಿನ ಮಕ್ಕಳ ಮರಣವನ್ನು ನಿಯಂತ್ರಿಸಲು ಪ್ರತಿ ವರ್ಷ ಈ ಕಾರ್ಯಕ್ರಮವನ್ನು ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಆಚರಿಸಲಾಗುತ್ತದೆ ಎಂದು ಸಭೆಗೆ ವಿವರಿಸಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ॥ ಲಿಂಗರಾಜು ಟಿ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ॥ ರವೀಂದ್ರನಾಥ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳಾದ ಡಾ॥ ನಂದಕುಮಾರ, ಜಿಲ್ಲಾ ಕ್ಷಯರೋಗ ನಿರ್ಮೂಲನ ಅಧಿಕಾರಿಗಳಾದ ಡಾ॥ ಶಶಿಧರ್, ಜಿಲ್ಲಾ ಕುಷ್ಠರೋಗ ನಿರ್ಮೂಲನ ಅಧಿಕಾರಿಗಳಾದ ಡಾ॥ ಪ್ರಾಕಾಶ ಹೆಚ್, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿಗಳಾದ ಡಾ॥ ಕುಮಾರಸ್ವಾಮಿ, ತಾಲೂಕಾ ಆರೋಗ್ಯಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಶಿಕ್ಷಣ ಇಲಾಖೆಯ ಅಧಿಕಾರಿಗಳು, ಕೊಪ್ಪಳ ವೈದ್ಯಕೀಯ ಮಹಾ ವಿದ್ಯಾಲಯದ ಹಿರಿಯ ತಜ್ಞ ವೈದ್ಯರು, ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳು ಹಾಗೂ ವಿವಿಧ ಇಲಾಖೆಯ ತಾಲೂಕ ಮಟ್ಟದ ಅಧಿಕಾರಿಗಳು, ವೈದ್ಯಾಧಿಕಾರಿಗಳು ಮತ್ತು ಇತರೆ ಸಿಬ್ಬಂದಿಗಳು ಹಾಜರಿದ್ದರು.

## ತಾಲೂಕಿನಾದ್ಯಂತ ಚುರುಕುಗೊಂಡ ಬಿತ್ತನೆ ಕಾರ್ಯ, ಬೀಜ-ಗೊಬ್ಬರ ಖರೀದಿಗೆ ಮುಂದಾದ ರೈತ ಸಮುದಾಯ -ಗೌಡಪ್ಪಗೌಡ ಪಾಟೀಲ



ರಾಮದುರ್ಗ : ಈ ಬಾರಿ ಮುಂಗಾರು ಮಳೆ ಅವಧಿಗೂ ಮುನ್ನ ಪ್ರಾರಂಭಗೊಂಡಿದ್ದು, ಒಣಬೇಸಾಯ ಪ್ರದೇಶದ ರೈತರು ಹೆಸರು ಬಿತ್ತನೆ ಕಾರ್ಯ ಮುಗಿಸುವ ಹಂತದಲ್ಲಿದ್ದಾರೆ. ತಾಲೂಕಿನ ಬಹುತೇಕ ಭೂ ಪ್ರದೇಶಗಲ್ಲಿ ಬಿತ್ತನೆ ಕಾರ್ಯ ಚುಟುಕುಗೊಂಡಿದೆ.

ಮುಂಗಾರು ಮಳೆ ಈ ಬಾರಿ ಅವಧಿಗೂ ಮುನ್ನ ಪ್ರಾರಂಭಗೊಂಡ ಪ್ರಯುಕ್ತ ರೈತರ ಮೊಗದಲ್ಲಿ ಮಂದಹಾಸ ಮೂಡಿದ್ದು, ಇತ್ತ ಬೀಜ–ರಸಗೊಬ್ಬರ ಖರೀದಿಗಾಗಿ ರೈತರು, ಸಮೀಪದ ರೈತ ಸಂಪರ್ಕ ಕೇಂದ್ರಗಳು ಸೇರಿದಂತೆ ಬೀಜ–ಗೊಬ್ಬರ ವಿತರಕರ ಅಂಗಡಿಗಳಿಗೆ ಮುಗಿ ಬಿದ್ದಿದ್ದಾರೆ.

**ಮುಂಗಾರು ಹಂಗಾಮಿನಲ್ಲಿ ಸಕಾಲಕ್ಕೆ ಮಳೆಯಾಗಿದ್ದು, ಬಿತ್ತನೆ ಕಾರ್ಯ ಪ್ರಾರಂಭಿಸಿದ್ದೇವೆ. ಮಳೆರಾಯ ಬಿತ್ತನೆಯ ನಂತರವೂ ಕೃಪೆ ತೋರಿದಲ್ಲಿ ಮಾತ್ರ ರೈತರ ನಿರೀಕ್ಷೆಯಂತೆ ಫಸಲು ದೊರೆಯಲು ಸಾಧ್ಯವಾಗುತ್ತದೆ.**
**-ಸಿದ್ದಪ್ಪ ಮಕ್ಕನ್ನವರ, ಕರಡಿಗುಡ್ಡ ಗ್ರಾಮದ ರೈತ.**

**ವಾಡಿಕೆಗಿಂತ ಅಧಿಕ ಮಳೆ:**
ತಾಲೂಕಿನಲ್ಲಿ ಜೂನ್ ಮಧ್ಯದ ವೇಳೆಗೆ ಸುಮಾರು 133 ಮಿ.ಮೀ ಮಳೆಯಾಗಬೇಕಿತ್ತು. ಜೂನ್–16ರ ವೇಳೆಗೆ ಈಗಾಗಲೇ ವಿವಿಧ ಹೋಬಳಿಗಳಲ್ಲಿ ಸರಾಸರಿ 247 ಮಿ.ಮೀ ಮಳೆಯಾಗಿದ್ದು, ವಾಡಿಕೆಗಿಂತ ತಾಲೂಕಿನಾದ್ಯಂತ ಅಧಿಕ ಮಳೆಯಾಗಿದೆ ಎಂದು ಮಳೆ ಮಾಪನ ಕೇಂದ್ರದ ನಿರ್ವಹಣಾ ಅಧಿಕಾರಿಗಳು ತಿಳಿಸಿದ್ದಾರೆ. ತಾಲೂಕಿನ ಮುದಕವಿ ಹೋಬಳಿಯಲ್ಲಿ ಮಳೆ ಪ್ರಮಾಣ ಕಡಿಮೆಯಾಗಿದ್ದು, ರೈತರು ಬಿತ್ತನೆ ಕಾರ್ಯ ಸಂಪೂರ್ಣವಾಗಿ ಪ್ರಾರಂಭಿಸಿಲ್ಲ. ಈ ಭಾಗದ ರೈತರು ಮಳೆರಾಯಣ ಕೃಪೆಗಾಗಿ ಕಾಯುತ್ತಿದ್ದು, ಮುದಕವಿ ಹೋಬಳಿಯ ಗ್ರಾಮಗಳಲ್ಲಿ ಬಿತ್ತನೆ ಕಾರ್ಯ ಮಂದ ಗತಿಯಲ್ಲಿ ಸಾಗುತ್ತಿದೆ.

ತಾಲೂಕಿನಲ್ಲಿ ರೈತರು ಬಿತ್ತನೆ ಕಾರ್ಯದಲ್ಲಿ ನಿರತರಾಗಿದ್ದು, ರೈತರಿಗೆ ಬಿತ್ತನೆ ಬೀಜಗಳನ್ನು ಬೇಡಿಕೆ ತಕ್ಕಂತೆ ದಾಸ್ತಾನು ಮಾಡಿಕೊಳ್ಳಲಾಗಿದೆ. ರಿಯಾಯತಿ ದರದಲ್ಲಿ ಬೀಜ ವಿತರಣೆ ಮಾಡಲಾಗುತ್ತಿದೆ. ಡಿಎಪಿ ಗೊಬ್ಬರ ಲಭ್ಯತೆ ಕಡಿಮೆ ಇದ್ದು, ಡಿಎಪಿ ಬದಲಾಗಿ ಕಾಂಪ್ಲೇಕ್ಸ್ ಗೊಬ್ಬರವನ್ನು ಬಳಕೆ ಮಾಡುವಂತೆ ರೈತರಿಗೆ ಕೃಷಿ ಇಲಾಖೆಯಿಂದ ತಿಳುವಳಿಕೆ ನೀಡಲಾಗುತ್ತಿದೆ. ತಾಲೂಕಿನಲ್ಲಿ ರೈತರಿಗೆ ಬೀಜ–ಗೊಬ್ಬರದ ಕೊರತೆ ಉಂಟಾಗದಂತೆ ನೋಡಿಕೊಳ್ಳಲಾಗುವುದು.
**–ಎಸ್.ಎಫ್. ಬೆಳವಟಗಿ ಸಹಾಯಕ ಕೃಷಿ ನಿರ್ದೇಶಕರು ರಾಮದುರ್ಗ**

**ಬಿತ್ತನೆ ಪ್ರಮಾಣಃ** ತಾಲೂಕಿನಾದ್ಯಂತ ಈಗಾಗಲೇ ಹೆಸರು–18375 ಹೆಕ್ಟರ್, ಮೆಕ್ಕಜೋಳ–8515 ಹೆಕ್ಟರ್, ಸಜ್ಜೆ–3170 ಹೆಕ್ಟರ್, ಹತ್ತಿ–1404 ಹೆಕ್ಟರ್, ಸೂರ್ಯಕಾಂತಿ–382 ಹೆಕ್ಟರ್, ಕಬ್ಬು–2790 ಹೆಕ್ಟರ್ ಬಿತ್ತನೆಯಾಗಿದ್ದು, ತಾಲೂಕಿನಲ್ಲಿ ಬಿತ್ತನೆಯಾಗಬೇಕಿದ್ದ ಸುಮಾರು 63379 ಹೆಕ್ಟರ್ ಭೂ ಪ್ರದೇಶದ ಪೈಕಿ ಈಗಾಗಲೇ 46457 ಹೆಕ್ಟರ್ ಭೂ ಪ್ರದೇಶ ಬಿತ್ತನೆಯಾಗಿದೆ. ಇನ್ನುಳಿದ ಭೂ ಪ್ರದೇಶದ ರೈತರು, ಮಳೆ ಪ್ರಮಾಣ ಸೇರಿದಂತೆ ವಿವಿಧ ಕಾರಣಗಳಿಗಾಗಿ ಬಿತ್ತನೆಗಾಗಿ ಕಾಯುತ್ತಿದ್ದಾರೆ.

## ವಿಕಲಚೇತನ ವ್ಯಕ್ತಿಗಳ ಆರೈಕೆದಾರರಿಗೆ ಪ್ರೋತ್ಸಾಹ ಧನ : ಅರ್ಜಿ ಆಹ್ವಾನ

ವಿಜಯಪುರ : ಪಾರ್ಕಿನ್ಸನ್,ಆಟಿಸಂ, ಬೌದ್ಧಿಕ ವಿಕಲತೆ ಸೇರಿದಂತೆ ಬಹುವಿಧ ಅಂಗವಿಕಲತೆ (ಶ್ರವಣ ಮತ್ತು ದೃಷ್ಟಿ ನ್ಯೂನ್ಯತೆ) ಕಾಯಿಲೆಯಿಂದ ಬಳಲುತ್ತಿರುವ ವಿಕಲಚೇತನ ವ್ಯಕ್ತಿಗಳ ಆರೈಕೆದಾರರಿಗೆ ಪ್ರತಿ ಮಾಹೆ ರೂ.1,000/– ಪ್ರೋತ್ಸಾಹ ಧನ ನೀಡುವ ಯೋಜನೆಯಡಿ ಅರ್ಜಿ ಆಹ್ವಾನಿಸಲಾಗಿದೆ. 2025–6ನೇ ಸಾಲಿಗೆ ಈ ಯೋಜನೆಯಡಿ ಅರ್ಜಿ ಸಲ್ಲಿಸ ಬಯಸುವವರು ಅರ್ಜಿಯೊಂದಿಗೆ ಈ ಯೋಜನೆಗೆ ವಿಶಿಷ್ಟ ಗುರುತಿನ ಚೀಟಿ, ವಾಸಸ್ಥಳ ದೃಡೀಕರಣ ಪ್ರಮಾಣ ಪತ್ರ, ವಿಕಲಚೇತನರ ಹಾಗೂ ಆರೈಕೆದಾರರ ಆಧಾರ್ ಕಾರ್ಡ್, ಜಂಟಿ ಭಾವಚಿತ್ರ, ಆರೈಕೆದಾರರ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ, ಆರೈಕೆ ಪಡೆಯುವವರು ಹಾಗೂ ಆರೈಕೆದಾರರು ಪರಸ್ಪರ ಒಪ್ಪಿರುವ ಬಗ್ಗೆ,ಉತ್ತಮ ಆರೈಕೆ ಒದಗಿಸುವ ಬಗ್ಗೆ ಲಿಖಿತ ಪ್ರಮಾಣ ಪತ್ರ ಸಲ್ಲಿಸುವುದು. ಅರ್ಜಿ ಸಲ್ಲಿಸಲು ಜೂನ್ 30 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಸಂಯೋಜಕರಾದ ಶ್ರೀಮತಿ ಪ್ರತಿಭಾ ಮೊ:9606151149, ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರಾದ ವಿಜಯಪುರಕ್ಕೆ ಸಂಬಂಧಿಸಿದಂತೆ ರವಿ ರಾಠೋಡ ಮೊ:9035553337, ಇಂಡಿ ಪರಶುರಾಮ ಭೋಸಲೆ ಮೊ:9972441464, ಸಿಂದಗಿ ಮುತ್ತುರಾಜ ಸಾತಿಹಾಳ ಮೊ:9980019635, ಮುದ್ದೇಬಿಹಾಳ ಎಸ್.ಕೆ.ಘಾಟಿ ಮೊ:9740682979 ಹಾಗೂ ಬಸವನ ಬಾಗೇವಾಡಿಗೆ ಸಂಬಂಧಿಸಿದಂತೆ ಶಿವಲೀಲಾ ಬಿರಾದಾರ ಮೊ:8722135660 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಆಸ್ಪತ್ರೆಯಲ್ಲಿ ಡೇ ಕೇರ್ ಕಿಮೋಥೆರಪಿ ಕೇಂದ್ರ ಉದ್ಘಾಟಿಸಿದ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್.




ಧಾರವಾಡ : ಧಾರವಾಡ ಜಿಲ್ಲಾ ಆಸ್ಪತ್ರೆಯಲ್ಲಿ ಡೇ ಕೇರ್ ಕಿಮೋಥೆರಪಿ ಕೇಂದ್ರವನ್ನು ನಿನ್ನೆ (ಜೂನ್ 16) ರಂದು ಸಂಜೆ ಕಾರ್ಮಿಕ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಹಾಗೂ ಜಿಲ್ಲಾಧಿಕಾರಿ ದಿವ್ಯಾ ಪ್ರಭು ಮತ್ತು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಉದ್ಘಾಟಿಸಿದರು.

ನಂತರ ಅವರು ಮಾತನಾಡಿ, ಧಾರವಾಡ ಜಿಲ್ಲಾ ಆಸ್ಪತ್ರೆಯಲ್ಲಿ ಡೇ ಕೇರ್ ಕಿಮೋಥೆರಪಿ ಕೇಂದ್ರವನ್ನು ಎ.ಬಿ.ಎ.ಆರ್.ಕೆ ಯೋಜನೆ ಅಡಿಯಲ್ಲಿ **HCG Hospital, Hubballi** ಯೊಂದಿಗೆ ಒಡಂಬಡಿಕೆಯೊಂದಿಗೆ ಪ್ರತಿಯೊಂದು ರೋಗಿಗಳಿಗೆ 1 ನೇ ಸೈಕಲ್ ಚಿಕಿತ್ಸೆಯನ್ನು ಮಾಡಿಕೊಂಡವರಿಗೆ ಮುಂದಿನ ಸೈಕಲ್‌ನ್ನು ಒಜಿಜುಭಿಚಿಟ ಔಟಿಛಿಂಟಂರ್ಗಿಣ ಅವರ ಅಭಿಪ್ರಾಯ ಹಾಗೂ ಸಲಹೆಯಂತೆ ಚಿಕಿತ್ಸೆಗೆ ಪ್ರತಿ ಬುಧವಾರ ಕ್ಯಾನ್ಸರ್ ರೋಗದ ತಜ್ಞವೈದ್ಯರಿಂದ ರೋಗಿಗಳನ್ನು ಜಿಲ್ಲಾ ಆಸ್ಪತ್ರೆಯಲ್ಲಿಯೇ ಪರೀಕ್ಷಿಸಲಾಗುವುದು ಇದರಿಂದ 2024–2025 ನೇ ಸಾಲಿನ 242 ರೋಗಿಗಳನ್ನು ಕ್ಯಾನ್ಸರ್ ಚಿಕಿತ್ಸೆಗೆ ಕಳುಹಿಸಲಾಗಿದೆ. ಇಲ್ಲಿ ಚಿಕಿತ್ಸೆ ಸಿಗುವುದರಿಂದ ದೂರದ ಊರಿನಿಂದ ಪರದಾಡುವ ಸಾರ್ವಜನಿಕರಿಗೆ ಅನುಕೂಲವಾಗುವುದು. ಇದರ ಸದುಪಯೋಗವನ್ನು ಪಡೆದುಕೊಳ್ಳಲು ವಿನಂತಿಸಿದರು.

ಕಾರ್ಯಕ್ರಮದಲ್ಲಿ ಆಸ್ಪತ್ರೆಯ ಮುಖ್ಯಸ್ಥ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಸಂಗಪ್ಪ. ಎನ್. ಗಾಬಿ, ಸ್ಥಳೀಯ ವೈದ್ಯಾಧಿಕಾರಿ ಡಾ. ಗಿರಿಜಾತಾಯಿ ಜಿ.ಹೆಚ್, ಹಿರಿಯ ತಜ್ಞವೈದ್ಯರುಗಳಾದ ಡಾ. ಮಯೂರ ಕದಂ ಮತ್ತು ಡಾ. ಎಸ್.ಎಮ್. ಸಾಂಬ್ರಾಣಿ, ಶುಶ್ರೂಷಾ ಅಧೀಕ್ಷಕ ವಿಜಯಕುಮಾರ ಮಳಗಿ, ಕಛೇರಿ ಅಧೀಕ್ಷಕ ವಾಯ್. ಹೆಚ್. ಬನಸೋಡೆ ಹಾಗೂ ಇನ್ನುಳಿದ ಸಿಬ್ಬಂದಿಗಳು ಹಾಜರಿದ್ದರು.

## ಧಾರವಾಡದ ಕೆನರಾ ಬ್ಯಾಂಕ್ ವಿರುದ್ಧ ಸುಳ್ಳು ದೂರು ದಾಖಲಿಸಿದ ಗ್ರಾಹಕನಿಗೆ ರೂ.10,000 ದಂಡ

ಧಾರವಾಡ : ಧಾರವಾಡದ ಶ್ರೀನಗರದ ನಿವಾಸಿ ನಿಂಗನಗೌಡ ಪಾಟೀಲರವರು ಧಾರವಾಡದ ಕೆಯುಡಿಯ ಕೆನರಾ ಬ್ಯಾಂಕ್‌ನಲ್ಲಿ 2016 ಇಸವಿಯಿಂದ ಉಳಿತಾಯ ಖಾತೆ ಹೊಂದಿದ್ದರು. 2024 ರ ಫೆಬ್ರುವರಿ ತಿಂಗಳಿನಿಂದ ಸದರಿ ಕೆನರಾ ಬ್ಯಾಂಕನವರು ತನ್ನ ಉಳಿತಾಯ ಖಾತೆಯನ್ನು ಬ್ಲಾಕ್ ಮಾಡಿದ್ದಾರೆ. ತಾನು ನಿವೃತ್ತ ನೌಕರನಿರುವುದರಿಂದ ತನ್ನ ಪಿಂಚಣಿ ಜಮಾವಾಣೆ ಹಾಗೂ ಹಣ ವಾಪಸ್ಸು ಪಡೆಯಲು ಎದುರುದಾರ ಕೆನರಾ ಬ್ಯಾಂಕನವರು ಅನುಮತಿಸುತ್ತಿಲ್ಲ. ಅದರಿಂದ ತನ್ನ ದೈನಂದಿನ ವ್ಯವಹಾರ ಮಾಡಲು ತೊಂದರೆಯಾಗಿದೆ. ಕಾರಣ ಎದುರುದಾರ ಕೆನರಾ ಬ್ಯಾಂಕಿನವರ ಅಂತಹ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಹೇಳಿ ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಯೋಗಕ್ಕೆ ದಿ:05/03/2025 ರಂದು ದೂರನ್ನು ಸಲ್ಲಿಸಿದ್ದರು.

2025 ನೇ ಇಸವಿಯಲ್ಲಿ ದೂರುದಾರರ ಪಿಂಚಣಿ ಹಣ ಪ್ರತಿ ತಿಂಗಳು ಜಮಾ ಆಗುತ್ತಿದೆ. ಆ ಹಣವನ್ನು ನಿಯಮಿತವಾಗಿ ಅವರು ಬ್ಯಾಂಕಿನ ತಮ್ಮ ಖಾತೆಯಿಂದ ಪಡೆಯುತ್ತಿದ್ದಾರೆ. ಹೀಗಾಗಿ ದೂರುದಾರ ಉಳಿತಾಯ ಖಾತೆಯನ್ನು ತಾವು ಬ್ಲಾಕ್ ಮಾಡಿಲ್ಲ. ಕಾರಣ ತಮ್ಮ ಖರ್ಚು ಸಮೇತ ಈ ದೂರನ್ನು ವಜಾ ಮಾಡುವಂತೆ ಕೆನರಾ ಬ್ಯಾಂಕಿನವರು ಕೋರಿಕೊಂಡಿದ್ದರು.

ಉಭಯತರ ಕೋರಿಕೆಯನ್ನು ಹಾಗೂ ಅವರು ಹಾಜರುಪಡಿಸಿದ ದಾಖಲೆ ಪತ್ರಗಳನ್ನು ಆಯೋಗ ಪರಿಶೀಲಿಸಿದೆ. ದೂರುದಾರರ ಉಳಿತಾಯ ಖಾತೆಯ ಅಕೌಂಟ್ ಸ್ಟೇಟಮೆಂಟ್ ಪರಿಶೀಲಿಸಿದಾಗ 2024 ಹಾಗೂ 2025 ನೇ ಇಸವಿಯಲ್ಲಿ ಪ್ರತಿ ತಿಂಗಳು ದೂರುದಾರರ ಖಾತೆಗೆ ಅವರ ಪಿಂಚಣಿ ಹಣ ಜಮಾ ಆಗುತ್ತಿದೆ. ಆ ರೀತಿ ಜಮೆಗೊಂಡ ಹಣವನ್ನು ದೂರುದಾರರು ನಿಯಮಿತವಾಗಿ ಬ್ಯಾಂಕ್ ಖಾತೆಯಿಂದ ಪಡೆದುಕೊಳ್ಳುತ್ತಿದ್ದಾರೆ. ಇದನ್ನು ಗಮನಿಸಿದಾಗ ದೂರುದಾರ ಉಳಿತಾಯ ಖಾತೆ ಚಾಲ್ತಿಯಲ್ಲಿರುತ್ತದೆ. ತನ್ನ ಖಾತೆಯನ್ನು ಎದುರುದಾರ ಬ್ಯಾಂಕಿನವರು ಬ್ಲಾಕ್ ಮಾಡಿದ್ದಾರೆ ಮತ್ತು ತನಗೆ ಖಾತೆಯ ಹಣವನ್ನು ನೀಡುತ್ತಿಲ್ಲ ಅನ್ನುವ ಸಂಗತಿಯನ್ನು ಸಿದ್ಧಪಡಿಸಲು ದೂರುದಾರ ವಿಫಲರಾಗಿದ್ದಾರೆ ಅಂತಾ ಆಯೋಗ ಅಭಿಪ್ರಾಯಪಟ್ಟು ತೀರ್ಪು ನೀಡಿದೆ. ವಿನಾಕಾರಣ ಎದುರುದಾರ ಕೆನರಾ ಬ್ಯಾಂಕಿನ ಮೇಲೆ ಸುಳ್ಳು ಪ್ರಕರಣ ದಾಖಲಿಸಿದ್ದಾರೆ.

ಆದ್ದರಿಂದ ಎದುರುದಾರ ಕೆನರಾ ಬ್ಯಾಂಕಿನವರಿಗೆ ದೂರುದಾರ ದಂಡದ ರೂಪದಲ್ಲಿ ರೂ.10,000 ಕೊಡುವಂತೆ ಆಯೋಗ ಆದೇಶಿಸಿದೆ.

## ನೀಟ್ ಯುಜಿ 2025 : ಧಾರವಾಡ ದೈವಿಕ್ ಅಂಬಾಟಿ AIR 513, ಹುಬ್ಬಳ್ಳಿಯ ದಕ್ಷ್ ಎಸ್‌ಆರ್ AIR 318 ರ್ಯಾಂಕ್ ಗಳಿಸಿ ಸಾಧನೆ




ಹುಬ್ಬಳ್ಳಿ: ನೀಟ್ ಯುಜಿ 2025 ಪರೀಕ್ಷೆಯಲ್ಲಿ ಪರೀಕ್ಷಾ ಪೂರ್ವಸಿದ್ಧತಾ ಸೇವೆಗಳಲ್ಲಿ ರಾಷ್ಟ್ರಮಟ್ಟದಲ್ಲಿ ಗುರುತಿಸಿಕೊಂಡಿರುವ ಆಕಾಶ್ ಎಜುಕೇಷನಲ್ ಸರ್ವಿಸಸ್ ಲಿಮಿಟೆಡ್ **(AESL)**,ನ ವಿದ್ಯಾರ್ಥಿಗಳಾದ ಧಾರವಾಡದ ದೈವಿಕ್ ಅಂಬಾಟಿ ಂIಖ 513 ಮತ್ತು ಹುಬ್ಬಳ್ಳಿಯ ದಕ್ಷ್ ಎಸ್‌ಆರ್ **AIR** 318 ರ್ಯಾಂಕನೊಂದಿಗೆ ಉತ್ತಮ ಸಾಧನೆ ಮಾಡಿದ್ದಾರೆ ಎಂದು ಸಂಸ್ಥೆ ಘೋಷಿಸಿದೆ.

ಈ ಅಸಾಧಾರಣ ಸಾಧನೆಯು ವಿದ್ಯಾರ್ಥಿಗಳ ಬದ್ಧತೆ, ಶೈಕ್ಷಣಿಕ ಶಿಸ್ತು ಮತ್ತು ಎಇಎಸ್‌ಎಲ್ ಒದಗಿಸಿದ ಅತ್ಯುತ್ತಮ ತರಬೇತಿ ಮತ್ತು ಮಾರ್ಗದರ್ಶನದ ಫಲಿತಾಂಶವಾಗಿದೆ. ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಶನಿವಾರ ಫಲಿತಾಂಶಗಳನ್ನು (ಎನ್‌ಟಿಎ) ಘೋಷಿಸಿದೆ.

ವಿಶ್ವದ ಅತ್ಯಂತ ಸವಾಲಿನ ವೈದ್ಯಕೀಯ ಪ್ರವೇಶ ಪರೀಕ್ಷೆಗಳಲ್ಲಿ ಒಂದಾದ ನೀಟ್ ಅನ್ನು ಎದುರಿಸಲು ವಿಶೇಷವಾಗಿ ವಿನ್ಯಾಸಗೊಳಿಸಲಾದ ಎಇಎಸ್‌ಎಲ್ ನ ತರಗತಿ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಭಾಗವಹಿಸಿದ್ದರು. ವಿದ್ಯಾರ್ಥಿಗಳು ತಮ್ಮ ಯಶಸ್ಸಿಗೆ ಎಇಎಸ್‌ಎಲ್ ನ ಅತ್ಯುನ್ನತ ಶೈಕ್ಷಣಿಕ ಅಡಿಪಾಯ, ಅವರ ಪರಿಕಲ್ಪನಾ ಸ್ಪಷ್ಟತೆ ಮತ್ತು ಸ್ಥಿರ ಮತ್ತು ಶಿಸ್ತಿನ ಅಧ್ಯಯನ ದಿನಚರಿ ಕಾರಣ ಎಂದು ತಿಳಿಸಿದ್ದಾರೆ.

ಎಇಎಸ್‌ಎಲ್ ನ ಮುಖ್ಯ ಶೈಕ್ಷಣಿಕ ಮತ್ತು ವ್ಯವಹಾರ ಮುಖ್ಯಸ್ಥರಾದ ಧೀರಜ್ ಕುಮಾರ್ ಮಿಶ್ರಾ ಅವರು ಸಾಧಕರನ್ನು ಅಭಿನಂದಿಸಿ ಮಾತನಾಡಿ,ನೀಟ್ ಯುಜಿ 2025 ರಲ್ಲಿ ನಮ್ಮ ವಿದ್ಯಾರ್ಥಿಗಳ ಅದ್ಭುತ ಪ್ರದರ್ಶನದ ಬಗ್ಗೆ ನಮಗೆ ಅಪಾರ ಹೆಮ್ಮೆ ಇದೆ. ವಿದ್ಯಾರ್ಥಿಗಳ ಕಠಿಣ ಪರಿಶ್ರಮವನ್ನು ಮಾತ್ರವಲ್ಲದೆ ಅವರ ಪೋಷಕರ ಬೆಂಬಲ ಮತ್ತು ನಮ್ಮ ಶೈಕ್ಷಣಿಕ ತಂಡದ ಬದ್ಧ ಪ್ರಯತ್ನಗಳನ್ನು ಸಹ ಪ್ರದರ್ಶಿಸುತ್ತವೆ. ಅವರ ವೈದ್ಯಕೀಯ ವೃತ್ತಿಜೀವನದಲ್ಲಿ ನಿರಂತರ ಯಶಸ್ಸನ್ನು ಬಯಸುತ್ತೇವೆ ಎಂದರು.

ಭಾರತದ ಸರ್ಕಾರಿ ಮತ್ತು ಖಾಸಗಿ ಸಂಸ್ಥೆಗಳಲ್ಲಿ ಪದವಿಪೂರ್ವ ವೈದ್ಯಕೀಯ **(MBBS)**, ದಂತ ವೈದ್ಯಕೀಯ **(BDS)** ಮತ್ತು ಆಯುಷ್ **(BAMS, BUMS, BHMS,** ಇತ್ಯಾದಿ) ಕೋರ್ಸ್‌ಗಳನ್ನು ಮುಂದುವರಿಸಲು ಬಯಸುವ ವಿದ್ಯಾರ್ಥಿಗಳಿಗೆ ಮತ್ತು ವಿದೇಶದಲ್ಲಿ ಪ್ರಾಥಮಿಕ ವೈದ್ಯಕೀಯ ಅರ್ಹತೆಯನ್ನು ಪಡೆಯಲು ಬಯಸುವವರಿಗೆ ಅರ್ಹತಾ ಪರೀಕ್ಷೆಯಾಗಿ ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯು ಓಇಇಖ ಅನ್ನು ವಾರ್ಷಿಕವಾಗಿ ನಡೆಸುತ್ತದೆ.

ಪತ್ರಿಕಾಗೋಷ್ಠಿಯಲ್ಲಿ ಸಹಾಯಕ ನಿರ್ದೇಶಕ ಡಿ.ರವಿಕುಮಾರ್, ಏರಿಯಾ ಸೇಲ್ಸ್ ಹೆಡ್ ಅನಿಲ್ ಕುಮಾರ್ ಎಚ್. ಆರ್. , ಅಕಾಡೆಮಿಕ್ ಎಂಜಿನಿಯರಿಂಗ್ ಟಿ.ವೆಂಕಟೇಶ್ವರಲು, ಅಕಾಡಮಿಕ್ ಹೆಡ್ ಫೌಂಡೇಶನರ್ ವಿ.ಎಲ್.ಲಿಂಗಾರೆಡ್ಡಿ, ಬ್ರ್ಯಾಂಚ್ ಹೆಡ್ ವಿಜಯ ಮಹಾಂತೇಶ ಇದ್ದರು

****

## ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರ ಜಿಲ್ಲಾ ಪ್ರವಾಸ

ವಿಜಯಪುರ :ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್. ಆರ್.ಪಾಟೀಲ (ಬ್ಯಾಡಗಿ) ಅವರು, ಜೂನ್ 19 ರಿಂದ 21ರವರೆಗೆ ವಿಜಯಪುರ ಜಿಲ್ಲಾ ಪ್ರವಾಸ ಕೈಗೊಂಡು ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

ಜೂನ್ 19ರಂದು ರಾತ್ರಿ 8 ಗಂಟೆಗೆ ವಿಜಯಪುರಕ್ಕೆ ಆಗಮಿಸಿ, ವಿಜಯಪುರದಲ್ಲಿ ವಾಸ್ತವ್ಯ ಮಾಡಲಿದ್ದಾರೆ.

ಜೂನ್ 20ರಂದು ಬೆಳಿಗ್ಗೆ 10–30ಕ್ಕೆ ಜಿಲ್ಲಾ ಪಂಚಾಯತಿಯ ಸಭಾಂಗಣದಲ್ಲಿ ವಿಜಯಪುರ ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿ, ಅಂದು ವಾಸ್ತವ್ಯ ಮಾಡುವರು.

ಜೂನ್ 21ರ ಬೆಳಿಗ್ಗೆ 8:30ಕ್ಕೆ ಇಂಡಿ ತಾಲೂಕಿನ ಬಬಲಾದಿ ಗ್ರಾಮಕ್ಕೆ ಭೇಟಿ ನೀಡಿ, ಶಕ್ತಿ ಯೋಜನೆಯಡಿ ಸ್ವಾವಲಂಬಿಗಳಾಗಿರುವ ಬಬಲಾದಿ ಗ್ರಾಮದ ಒಡಲ ಧ್ವನಿ ಮಹಿಳಾ ಸಂಘದ ಸದಸ್ಯರೊಂದಿಗೆ ಚರ್ಚೆ–ಸಂವಾದ ನಡೆಸಲಿದ್ದಾರೆ.

ಅಂದು ಬೆಳಿಗ್ಗೆ 10ಕ್ಕೆ ಚಡಚಣ ತಾಲೂಕಿನ ಶಿರಾಡೋಣ ಗ್ರಾಮಕ್ಕೆ ತೆರಳಿ, ಗೃಹಲಕ್ಷ್ಮಿ ಯೋಜನೆ ಹಣ ಸಂಗ್ರಹಣೆ ಮೂಲಕ ಮನೆ ನಿರ್ಮಾಣ ಮಾಡಿಕೊಂಡ ಫಲಾನುಭವಿಗಳ ಮನೆ ವೀಕ್ಷಣೆ, ಗ್ಯಾರಂಟಿ ಯೋಜನೆಗಳ ಕುರಿತು ಶಿರಾಡೋಣ ಹಾಗೂ ಸುತ್ತ–ಮುತ್ತಲಿನ ಗ್ರಾಮಸ್ಥರೊಂದಿಗೆ ಚರ್ಚೆ–ಸಂವಾದ ನಡೆಸಲಿದ್ದಾರೆ. ಅದೇ ದಿನ ಮಧ್ಯಾಹ್ನ 12 ಗಂಟೆಗೆ ಶಿರಾಡೋಣದಿಂದ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಹೊಳಿಹೂಸೂರ ಗ್ರಾಮದ ಹಳೆಯ ಗ್ರಾಮದೇವಿ ದೇವಸ್ಥಾನದ ಅಭಿವೃದ್ಧಿಗಾಗಿ ಮುಜರಾಯಿ ಇಲಾಖೆಯ ವತಿಯಿಂದ 20 ಲಕ್ಷ ರೂಪಾಯಿಗಳ ಅನುದಾನದ ಕಾಮಗಾರಿ ಪೂಜಾ ಕಾರ್ಯಕ್ರಮವನ್ನು ಚನ್ನಮ್ಮನ ಕಿತ್ತೂರಿನ ಶಾಸಕರು ಬಾಬಾಸಾಹೇಬ ಪಾಟೀಲರವರು ನೆರವೇರಿಸಿದರು.

ಈ ಸಂದರ್ಭದಲ್ಲಿ ಹೊಳಿಹೂಸುರ ಗ್ರಾಮದ ಗುರು ಹಿರಿಯರು, ಪಕ್ಷದ ಮುಖಂಡರು ಕಾರ್ಯಕರ್ತರು ಉಪಸ್ಥಿತರಿದ್ದರು.






**ಧಾರವಾಡ ತೋಟಗಾರಿಕೆ ಇಲಾಖೆ ಹಾಗೂ ಪಾ.ಕೋ, ಸಂ. ಮತ್ತು ವಿ.ಕೇಂದ್ರ ಕುಂಬಾಪುರ ಫಾರ್ಮ್ ಸಹಯೋಗದಲ್ಲಿ ನಿನ್ನೆ (ಜೂ.16) ರಂದು ಮಾವು ಬೆಳೆಯ ಕುರಿತು ತರಬೇತಿ ಕಾರ್ಯಕ್ರಮವನ್ನು, ತೋಟಗಾರಿಕೆ ವಿಶ್ವವಿದ್ಯಾಲಯದ ಕುಲಪತಿಗಳು, ಸಹ ಸಂಶೋಧನಾ ನಿರ್ದೇಶಕರು, ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಹಾಗೂ ಮಾವು ಬೆಳೆಗಾರರು ಉದ್ಘಾಟಿಸಿದರು.**

## ಗ್ರಾಮೀಣ ಭಾಗದ ಮಕ್ಕಳಿಗೆ ಉನ್ನತ ಶಿಕ್ಷಣ ಸೇವೆ ಸಿಗುವಂತಾಗಬೇಕು



ಬೈಲಹೊಂಗಲ: ಗ್ರಾಮೀಣ ಭಾಗದ ಮಕ್ಕಳಿಗೆ ಉನ್ನತ ಶಿಕ್ಷಣ ಸೇವೆ ಸಿಗುವಂತಾಗಬೇಕು ಎಂದು ಶಾಖಾ ಮೂರುಸಾವಿರಮಠದ ಪ್ರಭು ನೀಲಕಂಠ ಸ್ವಾಮಿಜಿ ಹೇಳಿದರು.

ಅವರು ತಾಲೂಕಿನ ಸಂಪಗಾಂವ ಗ್ರಾಮದಲ್ಲಿ ಶ್ರೀಶೈಲ ಬೆಣ್ಣಿ ಸತ್ಕಾರ ಹಾಗೂ ಶ್ರೀಗಳು ಗ್ಲೋಬಲ್ ಅಚಿವರ್ಸ ಪ್ರಶಸ್ತಿ ಪಡೆದ ನಿಮಿತ್ತವಾಗಿ, ಗ್ರಾಮಸ್ಥರಿಂದ ಸನ್ಮಾನ ಸ್ವೀಕರಿಸಿ ಮಾತನಾಡಿ, ಗ್ರಾಮದಲ್ಲಿ ಯಾರಾದರೂ 2 ಎಕರೆ ಜಮೀನು ಕೊಡಲು ಮುಂದು ಬಂದರೆ ಅದನ್ನು ಯೋಗ್ಯ ಬೆಲೆಗೆ ಕೊಟ್ಟು ಖರೀದಿಸಿ, ಶೈಕ್ಷಣಿಕ ಜಾಗೃತಿಗಾಗಿ ಒಂದು ಶಿಕ್ಷಣ ಸಂಸ್ಥೆಯನ್ನು ಕಟ್ಟಿ ಗ್ರಾಮೀಣ ಭಾಗದ ಮಕ್ಕಳು ಉನ್ನತ ಶಿಕ್ಷಣ ಪಡೆದುಕೊಂಡು ಸರಕಾರಿ ಇಲಾಖೆಗಳಲ್ಲಿ, ದೊಡ್ಡ ದೊಡ್ಡ ಕಂಪನಿಗಳಲ್ಲಿ ಸೇವೆಸಲ್ಲಿಸಿ ಆದರ್ಶ ವ್ಯಕ್ತಿಗಳಾಗಿ ಜೀವನ ನಡೆಸುವಂತೆ ಮಾಡೋಣವೆಂದರು.

ಕಟಾಪುರಿಮಠದ ಚೆನ್ನವೀರ ಸ್ವಾಮಿಜಿ, ತಿಗಡಿ ವೀರಕ್ತಮಠದ ಶಿವಾನಂದ ಸ್ವಾಮೀಜಿ, ಸಿದ್ಧಾಶ್ರಮದ ಶಿವಾನಂದ ಸ್ವಾಮಿಜಿ ಸಾನಿಧ್ಯ ವಹಿಸಿದ್ದರು.

ಆರ್ ಇ ಎಸ್ ಶಿಕ್ಷಣ ಸಂಸ್ಥೆಯ ಚೇರಮನ್ ಶಂಕರೆಪ್ಪ ಸಿದ್ನಾಳ ಅಧ್ಯಕ್ಷತೆ ವಹಿಸಿದ್ದರು.

# ತಂದೆಯ ಅಗಲಿಕೆಯ ನೋವಿನಲ್ಲೂ ಪರೀಕ್ಷೆ ಬರೆದಿದ್ದ ವಿದ್ಯಾರ್ಥಿನಿ ಶಬಾನಾ; ಕುಟುಂಬಕ್ಕೆ ಆಶ್ರಯ ಮನೆ ಕಲ್ಪಿಸುತ್ತಿರುವ ಶಾಸಕರು; ವಿದ್ಯಾಭ್ಯಾಸ ಮುಂದುವರಿಸಲು ಪ್ರೋತ್ಸಾಹಿಸಿ, ನೆರವು ನೀಡುತ್ತಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು

ಧಾರವಾಡ : ತಂದೆ ಸಾವಿನ ದುಃಖದ ನಡುವೆಯೂ ನವಲಗುಂದ ಪಟ್ಟಣದ ಸರ್ಕಾರಿ ಉರ್ದು ಪ್ರೌಢಶಾಲೆ ವಿದ್ಯಾರ್ಥಿನಿ ಶಬಾನಾ ನೂರ್‌ಹಸನ್ ಪಟಾಸು ಅವರು ಕಳೆದ ಮಾರ್ಚ ತಿಂಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಹಾಜರಾಗಿ ನಂತರ ಪ್ರಕಟಗೊಂಡ ಫಲಿತಾಂಶದಲ್ಲಿ ಶೇ. 70 ಅಂಕ ಪಡೆದು ಎಸ್‌ಎಸ್‌ಎಲ್‌ಸಿ ಪಾಸಾಗಿದ್ದಳು.

ಸದಾಕಾಲ ಬಡವರು, ಹಿಂದುಳಿದವರು, ಮಹಿಳೆ, ಮಕ್ಕಳ ಬಗ್ಗೆ ಅತೀವ ಕಾಳಜಿ, ಕಳಕಳಿ ತೋರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು, ಪರೀಕ್ಷೆ ದಿನದಂದೆ ತಂದೆ ನಿಧನರಾದರೂ ನೋವಿನಲ್ಲೂ ಅಂದಿನ ಪರೀಕ್ಷೆಗೆ ಗೈರುಹಾಜರಾಗದೆ ಪರೀಕ್ಷೆ ಬರೆದು ಇತರರಿಗೆ ಮಾದರಿಯಾಗಿರುವ ನವಲಗುಂದದ ಶಬಾನಾಳ ಮನೆ ಬಾಗಿಲಿಗೆ ಹೋಗಿ, ಅವಳನ್ನು ಬೆನ್ನು ತಟ್ಟಿ ಪ್ರೋತ್ಸಾಹಿಸಿದ್ದಾರೆ.

ಒಂದೇ ದಿನದಲ್ಲಿ ಅವಳ ತಾಯಿಗೆ ವಿಧವಾ ವೇತನ, ರಾಷ್ಟ್ರೀಯ ಕೌಟುಂಬಿಕ ನೆರವು ಯೋಜನೆಯಡಿ ಪರಿಹಾರ ನೀಡಿ, ಧೈರ್ಯ ತುಂಬಿದ್ದರು.

ಈ ವಿದ್ಯಾರ್ಥಿನಿ ಸೋಮವಾರ ಧಾರವಾಡ ಜಿಲ್ಲಾ ಪಂಚಾಯತಗೆ ಆಗಮಿಸಿ, ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್, ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕರಾದ ಸಲೀಂ ಅಹ್ಮದ್, ಶಾಸಕ ಎನ್.ಎಚ್. ಕೋನರಡ್ಡಿ, ಜಿಲ್ಲಾಧಿಕಾರಿ ದಿವ್ಯ ಪ್ರಭು, ಉಪ ವಿಭಾಗಧಿಕಾರಿ ಶಾಲಂ ಹುಸೇನ್, ಡಿಡಿಪಿಐ ಕೆಳದಿಮಠ ಅವರನ್ನು ಭೇಟಿ ಮಾಡಿ ಸಿಹಿ ತಿನಿಸು ನೀಡಿ, ಕೃತಜ್ಞತೆ ಸಲ್ಲಿಸಿದಳು. ಶಬಾನಾ ತಂದೆ ನೂರ್‌ಹಸನ್ ಪಟಾಸು ಹೊಟ್ಟೆನೋವಿನಿಂದ ಅಸ್ವಸ್ಥರಾಗಿದ್ದರು. ಮತ್ತು ಅವರನ್ನು ಆಸ್ಪತ್ರೆಗೆ



ಕರೆದೊಯ್ಯುವಷ್ಟರಲ್ಲಿ ಮೃತಪಟ್ಟಿದ್ದರು. ಪರೀಕ್ಷೆ ದಿನದಂದೇ ಬೆಳಿಗ್ಗೆ ತಂದೆ ಮೃತಪಟ್ಟಿದ್ದರೂ, ಶಬಾನಾ ಅಂದಿನ ಪರೀಕ್ಷೆ ಬರೆದು, ನಂತರ ತಂದೆಯ ಅಂತ್ಯ ಸಂಸ್ಕಾರದಲ್ಲಿ ಭಾಗವಹಿಸಿದ್ದಳು. ಕಳೆದ ಮಾರ್ಚ 26 ರಂದು ಜಿಲ್ಲಾಧಿಕಾರಿಗಳು ಶಾಸಕರು ಹಾಗೂ ನವಲಗುಂದ ತಹಶೀಲ್ದಾರ, ಪುರಸಭೆ ಮುಖ್ಯಾಧಿಕಾರಿ ಶಬಾನಾ ಮನೆಗೆ ಭೇಟಿ ಮಾಡಿ, ಪರೀಕ್ಷೆ ಬರೆದ ವಿದ್ಯಾರ್ಥಿನಿಗೆ ಧೈರ್ಯ ತುಂಬಿದ್ದರು.

ಜಿಲ್ಲಾಧಿಕಾರಿಗಳು ಮನೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಸ್ವಂತ ಮನೆಯಿಲ್ಲದೆ ಬಾಡಿಗೆ ಮನೆಯಲ್ಲಿ ವಾಸವಿರುವುದನ್ನು ಗಮನಿಸಿದ ಶಾಸಕರು ಆಶ್ರಯ ಕಾಲನಿಯಲ್ಲಿ ಮನೆ ನಿರ್ಮಿಸಿಕೊಡುವ ಹಾಗೂ ಜಿಲ್ಲಾಧಿಕಾರಿಗಳು ವಿದ್ಯಾರ್ಥಿನಿಯ ಇಚ್ಛೆಯಂತೆ ಮುಂದಿನ ವಿದ್ಯಾಭ್ಯಾಸ ಕಲ್ಪಿಸಿಕೊಡುವುದು ಭರವಸೆ ನೀಡಿದ್ದರು.

ಸದ್ಯ ಶಾಸಕ ಎನ್.ಎಚ್.ಕೋನರಡ್ಡಿ ಅವರು ಪುರಸಭೆಯಿಂದ ನೀಡುತ್ತಿರುವ ಆಶ್ರಯ ನಿವೇಶನ ಮಂಜೂರಿ ಮಾಡಿ ಫಲಾನುಭವಿ ಪಾಲಿನ ಒಂದು ಲಕ್ಷ ಹಣವನ್ನು ಸರಕಾರಕ್ಕೆ ತುಂಬಿ ಮನೆ ಕೆಲಸ ನಿರ್ಮಾಣ ಮಾಡುತ್ತಿದ್ದು, ಇನ್ನೆರಡು ತಿಂಗಳಲ್ಲಿ ಸಂಪೂರ್ಣ ಮನೆ ನಿರ್ಮಾಣ ಮಾಡಿ ಶಬಾನಾ ಅವರಿಗೆ ಮನೆ ಹಸ್ತಾಂತರ ಮಾಡಲಿದ್ದಾರೆ.

ಜಿಲ್ಲಾಧಿಕಾರಿಗಳು ಈಗಾಗಲೇ ತಾಯಿಗೆ ವಿಧವಾ ವೇತನ, ರಾಷ್ಟ್ರೀಯ ಕೌಟುಂಬಿಕ ನೆರವು, ಮಕ್ಕಳ ರಕ್ಷಣಾ ಘಟಕದಿಂದ ಏಕಪೋಷಕರ ಯೋಜನೆಯಡಿ ಶಿಷ್ಯ ವೇತನ ಹಾಗೂ ಶಬಾನಾ ಅವರ ತಾಯಿಗೆ ಮಾನಸಿಕ ಕಾಯಿಲೆಯಿಂದ ಗುಣಮುಖರಾಗುವ ಔಷದಿಯನ್ನು ವೈದ್ಯರ ಮೂಲಕ ಕೊಡಿಸುತ್ತಿದ್ದಾರೆ.

ಕುಟುಂಬದಲ್ಲಿ ತಾಯಿ ಮಾನಸಿಕ ಅಸ್ವಸ್ಥೆ. ತಂದೆ ಇಲ್ಲ. ತಾಯಿಯ ಸಹೋದರ ಈ ಕುಟುಂಬದ ಪಾಲಕ. ಶಬಾನಾ ಸೇರಿ 4 ಜನ ಹೆಣ್ಣುಮಕ್ಕಳು. ಮನೆಗೆ ಶಬಾನಾ ಹಿರಿಯ ಮಗಳು. ಈ ವಿದ್ಯಾರ್ಥಿನಿಗೆ ಅನುಕೂಲವಾಗುವಂತೆ ಅವರ ಕುಟುಂಬಕ್ಕೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಪಶು ಪಾಲನಾ ಇಲಾಖೆಯಿಂದ ಸ್ವಯಂ ಉದ್ಯೋಗ ಯೋಜನೆಯಡಿ, 40 ಕೋಳಿ ಮರಿಯನ್ನು ನೀಡಿದ್ದು, ಜೀವನೋಪಾಯ ನಡೆಯುತ್ತಿದೆ.

ನಿನ್ನೆ ಜಿಲ್ಲಾಧಿಕಾರಿಗಳನ್ನು ತನ್ನ ಕುಟುಂಬದೊಂದಿಗೆ ಭೇಟಿ ಮಾಡಿದ ಶಬಾನಾ, ಈಗ ಪಿಯುಸಿ ಓದಲು ಇಚ್ಛಿಸಿ, ಕಾಲೇಜು ಅಡ್ಮೀಶನ್ ಫೀ, ಹಾಸ್ಟೆಲ್ ಸೌಲಭ್ಯಕ್ಕಾಗಿ ವಿನಂತಿಸಿದ್ದಾಳೆ. ಜಿಲ್ಲಾಧಿಕಾರಿಗಳು ಎಲ್ಲವನ್ನು ಕಲ್ಪಿಸಿ ಅವಳ ಓದಿಗೆ ನೇರವಾಗುವ ಭರವಸೆ ನೀಡಿದ್ದಾರೆ. ಮತ್ತು ಅವಳ ಸಹೋದರಿಯರ ಓದಿಗೆ ಅಗತ್ಯ ಸೌಲಭ್ಯ, ಸಹಾಯ ನೀಡುವದಾಗಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ನವಲಗುಂದ ತಹಶೀಲ್ದಾರ ಸುಧೀರ ಸಾಹುಕಾರ, ಪುರಸಭೆ ಮುಖ್ಯಾಧಿಕಾರಿ ಎಸ್.ಪಿ.ಪೂಜಾರ, ಕ್ಷೇತ್ರಶಿಕ್ಷಣಾಧಿಕಾರಿ ಎಸ್.ಬಿ.ಮಲ್ಲಾಡ, ವಾರ್ತಾ ಇಲಾಖೆಯ ಡಾ.ಎಸ್.ಎಂ.ಹಿರೇಮಠ ಹಾಗೂ ಇತರರು ಉಪಸ್ಥಿತರಿದ್ದರು.

# ವಿಶ್ವ ಹಿರಿಯರ ದೌರ್ಜನ್ಯ ತಡೆ ಜಾಗೃತಿ ದಿನಾಚಾರಣೆ ಕಾರ್ಯಕ್ರಮ



ಬೈಲಹೊಂಗಲ– ಸಮಾಜದಲ್ಲಿ ಅನ್ಯಾಯಕ್ಕೆ ಒಳಗಾದವರಿಗೆ ನ್ಯಾಯ ಒದಗಿಸುವ ಸಮಾನ ಹಕ್ಕು ಕಾಯ್ದೆ ಭಾರತದ ಸಂವಿದಾನದಲ್ಲಿದ್ದು ನೊಂದವರು ಕಾನೂನು ಸೇವೆಗಳ ಪ್ರಾಧಿಕಾರದಿಂದ ಪರಿಹಾರ ಪಡೆಯಬಹುದಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ರವಿ ಚವ್ಹಾಣ ಹೇಳಿದರು.

ಅವರು ತಾಲೂಕು ಕಾನೂನು ಸೇವಾ ಸಮೀತಿ, ತಾಲೂಕಾ ವಕೀಲರ ಸಂಘ, ತಹಶೀಲ್ದಾರ ಕಛೇರಿ ಬೈಲಹೊಂಗಲ, ಪೋಲಿಸ್ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಇಲಾಖೆ ಇವುಗಳ ಸಂಯುಕ್ತ ಆಶ್ರಯದಲ್ಲಿ ಸೋಮವಾರ ತಾ.ಪಂ.ಕಛೇರಿಯಲ್ಲಿ ಹಮ್ಮಿಕೊಂಡ ವಿಶ್ವ ಹಿರಿಯರ ದೌರ್ಜನ್ಯ ತಡೆ ಜಾಗೃತಿ ದಿನಾಚಾರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸಂಸ್ಕೃತಿ–ಸಂಸ್ಕಾರಕ್ಕೆ ಹೆಸರಾದ ನಮ್ಮ ದೇಶದಲ್ಲಿ ಪಾಲಕರ, ಹಿರಿಯರನ್ನು ಮಕ್ಕಳು ನಿರ್ಲಕ್ಷಿಸದೇ ಸದಾ ಗೌರವದಿಂದ ಕಾಣಬೇಕು. ಕುಟುಂಬ ವ್ಯವಸ್ಥೆಯಲ್ಲಿ ಹಿರಿಯ ನಾಗರಿಕರು ಆಕಸ್ಮಾತ ದೌರ್ಜನ್ಯಕ್ಕೆ ಈಡಾದರೆ ಕಾನೂನಿನ ಸಹಾಯ, ಸಲಹೆ ಪಡಯಬೇಕೆಂದರು.

ಹಿರಿಯ ನ್ಯಾಯವಾದಿ ಎಂ.ಎಂ.ಸೊಪ್ಪಿನ ಉಪನ್ಯಾಸಕರಾಗಿ ಆಗಮಿಸಿ ಮಾತನಾಡಿ, ಪ್ರತಿಯೊಬ್ಬರ ಕುಟುಂಬದಲ್ಲಿ ನೆಮ್ಮದಿ ಕಾಣಬೇಕಾದರೆ ಹಿರಿಯರ ಪಾತ್ರ ಅಗತ್ಯವಾಗಿದೆ. ಯಾವದೇ ಕಾರಣಕ್ಕೂ ಅವರನ್ನು ವ್ಯವಸ್ಥೆಯಿಂದ ವಂಚಿತರನ್ನಾಗಿಸದೇ ಹಿರಿಯ ಜೀವಿಗಳ ಬದುಕನ್ನು ಸುವ್ಯಸ್ಥಿತವಾಗಿಡಬೇಕು. ತಮ್ಮ ಜೀವವನ್ನೇ ತೇಯ್ದು ಸಾಧನೆಗೆ ಪ್ರೇರಣೆ ನೀಡಿದ ಜನ್ಮದಾತರು ಯಾವತ್ತೂ ಕಣ್ಣೀರು ಹಾಕದಂತೆ ಜಾಗೃತಿ ವಹಿಸಬೇಕೆಂದು ಯುವಕರಿಗೆ ಸಲಹೆ ನೀಡಿದರು.

ಮುಖ್ಯ ಅತಿಥಿಗಳಾಗಿ ಪ್ರಧಾನಿ ದಿವಾಣಿ ನ್ಯಾಯಾಧೀಶೆ ರೋಹಿಣಿ ಬಸಾಪೂರ, ಹೆಚ್ಚುವರಿ ದಿವಾಣಿ ನ್ಯಾಯಾಧೀಶ ಬಸವರಾಜ ನಾಯಕ, ತಹಶೀಲದಾರ ಹಣಮಂತ ಶಿರಹಟ್ಟಿ, ಸಿಪಿಐ ಪ್ರಮೋದ ಯಲಿಗಾರ, ನ್ಯಾಯವಾದಿಗಳ ಸಂಘದ ಅಧ್ಯಕ್ಷ ಎಂ.ಆರ್.ಮೆಳವಂಕಿ, ಉಪಾಧ್ಯಕ್ಷ ಎ.ಎಂ.ಸಿದ್ರಾಮನಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಅರುಣಕುಮಾರ ಎಸ್.ಬಿ. ಅಪರ್ ಸರಕಾರಿ ವಕೀಲ ಆರ್.ಎಸ್.ಕೋಲಕಾರ ಮುಂತಾದವರು ಉಪಸ್ಥಿತ–ರಿದ್ದರು.

ತಾ.ಪಂ.ಕಾರ್ಯನಿರ್ವಾಹಕಾಧಿಕಾರಿ ಮಹೇಶ ಹೂಲಿ ಸಭೆಯ ಅಧ್ಯಕ್ಷತೆ ವಹಿಸಿದ್ದರು.

ಶಿಶು ಅಭಿವೃದ್ಧಿ ಯೋಜನಾಧಿಕಾರಿ ಕಛೇ–ರಿಯ ಮೇಲ್ವಚಾರಕಿ ಶಿಲ್ಪಾ ಗಂಗೋಳ ಸ್ವಾಗತಿಸಿ, ನಿರೂಪಿಸಿದರು. ಉಮೇಶಕುಮಾರ ಕಾರಜೋಳ ವಂದಿಸಿದರು. ಅಂಗನವಾಡಿ ಕಾರ್ಯಕರ್ತರು, ಅಪಾರ ಸಂಖ್ಯೆಯಲ್ಲಿ ಹಿರಿಯ ನಾಗರಿಕರು, ಮಾಜಿ ಸೈನಿಕರು, ಸಾರ್ವಜನಿಕರು ಪಾಲ್ಗೊಂಡಿದ್ದರು.

## ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

ಧಾರವಾಡ : ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜೂನ್ 27, 2025 ರಂದು ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿ, ಜುಲೈ 02, 2025 ರಂದು ಡಾ. ಫ.ಗು.ಹಳಕಟ್ಟಿ ಅವರ ಜನ್ಮದಿನ–ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆಯನ್ನು ಆಯೋಜಿಸುವ ಹಿನ್ನಲೆಯಲ್ಲಿ ಪೂರ್ವಭಾವಿ ಸಭೆಯನ್ನು ಜಿಲ್ಲಾಧಿಕಾರಿಗಳ ಕಚೇರಿ ನೂತನ ಸಭಾಂಗಣದಲ್ಲಿ ಜೂನ್ 18 ರಂದು ಬೆಳಿಗ್ಗೆ 11 ಗಂಟೆಗೆ ಆಯೋಜಿಸಲಾಗಿದೆ.

ಸದರಿ ಸಭೆಗೆ ಜಿಲ್ಲಾ ಮಟ್ಟದ ಅಧಿಕಾ–ರಿಗಳು ಮತ್ತು ಸಮಾಜದ ಮುಖಂಡರು ಭಾಗವಹಿಸಿ ಸಲಹೆ, ಸೂಚನೆ ನೀಡಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

**ಧಾರವಾಡ ರಂಗಾಯಣ;**

**ಆಸಕ್ತ ಕಲಾವಿಧರಿಂದ ಅರ್ಜಿ ಆಹ್ವಾನ**

ಧಾರವಾಡ : ಧಾರವಾಡ ರಂಗಾಯಣಕ್ಕೆ ತಾತ್ಕಾಲಿಕವಾಗಿ ಪ್ರಸ್ತುತ ನೇಮಕವಾಗುವ ದಿನಾಂಕದಿಂದ ಒಂದು ವರ್ಷದ ಅವಧಿಗೆ 3 ಜನ ತಂತ್ರಜ್ಞರ ಹಾಗೂ 12 ಜನ ಕಲಾವಿದರನ್ನು ನೇಮಕ ಮಾಡಿಕೊಂಡು ರೆಪರ್ಟರಿ ಪ್ರಾರಂಭಿಸಲು ಆಸಕ್ತ ಕಲಾವಿದ–ರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಕಲಾವಿದರು ಸ್ವವಿವರದೊಂದಿಗೆ ಜೂನ್ 30, 2025 ರೊಳಗಾಗಿ ಆಡಳಿತಾಧಿಕಾರಿಗಳು ರಂಗಾಯಣ ಪಂ.ಬಸವರಾಜ ಬಯಲು ರಂಗಮಂದಿರ, ಕಾಲೇಜುರಸ್ತೆ, ಧಾರವಾಡ–580001 ವಿಳಾಸಕ್ಕೆ ಮುದ್ದಾಂ, ಅಂಚೆ ಮೂಲಕ ಅಥವಾ ಇಮೇಲ್ **dharwadrangayana@gmail.com** ಮೂಲಕ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0836–2441706 ಗೆ ಸಂಪರ್ಕಿಸ ಬಹುದು ಎಂದು ರಂಗಾಯಣ ಆಡಳಿತಾಧಿಕಾ–ರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ; ಸ್ಪರ್ಧಾತ್ಮಕ ಪರೀಕ್ಷೆ ತರಬೇತಿಗಾಗಿ ಆಸಕ್ತರಿಂದ ಅರ್ಜಿ ಆಹ್ವಾನ

ಧಾರವಾಡ : ಧಾರವಾಡ ಜಿಲ್ಲೆಯ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಅಲ್ಪಸಂಖ್ಯಾತ ಸಮುದಾಯದ ಅಭ್ಯರ್ಥಿಗಳಿಗೆ ಐಎಎಸ್, ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಮುಖ್ಯ ಪರೀಕ್ಷಾ ಪೂರ್ವ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಜೂನ್ 21, 2025 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0836–2971590 ಗೆ ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಲ ಪುರಸ್ಕಾರ; ಅರ್ಜಿ ಆಹ್ವಾನ

ಧಾರವಾಡ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯದಿಂದ 2025 ನೇ ಸಾಲಿನ ರಾಷ್ಟ್ರೀಯ ಪ್ರಧಾನ ಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗಾಗಿ ರಾಷ್ಟ್ರವ್ಯಂತ ಅರ್ಜಿ ಆಹ್ವಾನಿಸಲಾಗಿದೆ.

ಧಾರವಾಡ ಜಿಲ್ಲೆಯಲ್ಲಿ ಧೈರ್ಯ ಮತ್ತು ಸಾಹಸದಿಂದ ಇತರರನ್ನು ರಕ್ಷಿಸಿದ ಹಾಗೂ ಕ್ರೀಡೆ, ಸಮಾಜ ಸೇವೆ, ತಂತ್ರಜ್ಞಾನ, ಕಲೆ, ಸಂಸ್ಕೃತಿ, ಪರಿಸರ ಸಂರಕ್ಷಣೆ, ಮತ್ತು ನೂತನ ಆವಿಷ್ಕಾರಗಳನ್ನು ಮಾಡಿ ಉತ್ತಮ ಸಾಹಸ ಮಾಡಿದಂತಹ 05 ವರ್ಷ ಮೇಲ್ಪಟ್ಟ 18 ವರ್ಷದೊಳಗಿನ ಮಕ್ಕಳು ಜುಲೈ 31, 2025 ರೊಳಗಾಗಿ ಆನ್‌ಲೈನ್ ವೆಬ್‌ಸೈಟ್ https://awards.gov.in ಮೂಲಕ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ **National Awards portal** ನ್ನು ಬೇಟಿನಿಡಬಹುದು ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ -ನ್ಯಾಯಾಧೀಶ ಹರೀಶ



ವಿಜಯಪುರ : ಸ್ವಚ್ಛ ಹಾಗೂ ಸುಂದರ ಪರಿಸರ ನಿರ್ಮಾಣದ ಹೊಣೆ ನಮ್ಮೆಲ್ಲರದ್ದಾಗಿದ್ದು ಆರೋಗ್ಯಯುತ ಜೀವನಕ್ಕಾಗಿ ಪರಿಸರ ಸಂರಕ್ಷಣೆಗೆ ಎಲ್ಲರೂ ಕೈಜೋಡಿಸಬೇಕು ಎಂದು ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾದೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರಾದ ಹರೀಶ.ಎ ಅವರು ಹೇಳಿದರು.

ಮಂಗಳವಾರ ನಗರದ ಜಿಲ್ಲಾ ಪಂಚಾಯತಿ ರಸ್ತೆಯಲ್ಲಿರುವ ಗಾಂಧಿ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಾಲಾ ಶಿಕ್ಷಣ ಇಲಾಖೆ, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್, ಜಿಲ್ಲಾ ನ್ಯಾಯವಾದಿಗಳ ಸಂಘ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಇವರ ಸಹಯೋಗದಲ್ಲಿ ನಡೆದ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವುದು ಎಂಬ ಘೋಷವಾಕ್ಯದಡಿ ನಡೆದ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಉತ್ತಮ ಪರಿಸರ ಕಾಪಾಡಿಕೊಳ್ಳುವ ಮೂಲಕ ನಮ್ಮ ಮುಂದಿನ ಪೀಳಿಗೆಗೆ ಬಹುದೊಡ್ಡ ಕೊಡುಗೆಯನ್ನು ನೀಡಬೇಕಾಗಿದೆ. ಪರಿಸರ ಸ್ನೇಹಿ ಅಭ್ಯಾಸ ರೂಢಿಗತಗೊಳಿಸಿಕೊಳ್ಳಿ, ಪರಿಸರ ಸಂರಕ್ಷಣೆ ಮೂಲಕ ಆರೋಗ್ಯಕರ ಹಾಗೂ ಸುಸ್ಥಿರ ಭವಿಷ್ಯವನ್ನು ಗಟ್ಟಿಗೊಳಿಸಿಕೊಳ್ಳೋಣ ಎಂದು ಅವರು ಹೇಳಿದರು.

ಜಿಲ್ಲಾಧಿಕಾರಿ ಜಿಲ್ಲಾಧಿಕಾರಿ ಟಿ. ಭೂಬಾಲನ್ ಅವರು ಮಾತನಾಡಿ, ನಮ್ಮ ಪೂರ್ವಜರು ಆರೋಗ್ಯಯುತ ಜೀವನ ನಮಗೆ ಮಾದರಿಯಾಗಿದೆ. ಅಂದಿನ ಸ್ವಚ್ಛಂದ ಪರಿಸರ ಇಂದು ನಾವು ಕಾಣುತ್ತಿಲ್ಲ, ಪ್ಲಾಸ್ಟಿಕ್ ಅನ್ನುವುದು ಈಚೆಗೆ ಬಂದು ವಸ್ತು ಇದನ್ನು ಇಂದು ನಾವೆಲ್ಲರೂ ಹೇರಳವಾಗಿ ಬಳಸುತ್ತಿರುವುದರಿಂದ ಪರಿಸರದಲ್ಲಿ ಸಾಕಷ್ಟು ಹಾನಿಗಳಾಗುತ್ತಿವೆ. ಪ್ಲಾಸ್ಟಿಕ್ ಬಳಕೆ ಮಾಡದೇ ಪರಿಸರ ರಕ್ಷಣೆಗೆ ಮುಂದಾಗಬೇಕು. ಪರಿಸರ ಸ್ನೇಹಿ ವಸ್ತುಗಳ ಬಳಸಲು ಆದ್ಯತೆ ನೀಡೋಣ. ಐತಿಹಾಸಿಕ ನಗರದ ಸ್ವಚ್ಚತೆಗೆ ಸಾರ್ವಜನಿಕರು ಸಹಕಾರ ನೀಡಬೇಕು. ಎಲ್ಲೆಂದರಲ್ಲಿ ಕಸ ಎಸೆಯುವುದನ್ನು ಮಾಡದೇ ಆರೋಗ್ಯಯತ ಜೀವನ ನಡೆಸಲು ಪರಿಸರ ಕಾಪಾಡಿಕೊಳ್ಳಲು ಸಹಕರಿಸಬೇಕು. ಶಾಲಾ–ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಪರಿಸರದ ಮಹತ್ವದ ಕುರಿತು ಅನೇಕ ಕಾರ್ಯಚಟುವಟಿಕೆಗಳನ್ನು ಆಯೋಜಿಸಿ ಅವರಲ್ಲಿ ಪರಿಸರದ ಮಹತ್ವದ ಕುರಿತು ಜಾಗೃತಿ ಮೂಡಿಸಬೇಕು. ವಿದ್ಯಾರ್ಥಿಗಳು ತಮ್ಮ ನೆರಹೊರೆಯವರಿಗೆ ಈ ಬಗ್ಗೆ ತಿಳುವಳಿಕೆ ನೀಡಬೇಕು ಎಂದು ಅವರು ಹೇಳಿದರು.

ಕರ್ನಾಟಕ ರಾಜ್ಯ ಜಲ ಬಿರಾದಾರಿ ಅಧ್ಯಕ್ಷರಾದ ಪೀಟರ್ ಅಲೇಕ್ಸಾಂಡರ್ ಅವರು ಪರಿಸರ ಮಹತ್ವದ ಕುರಿತಾಗಿ ಉಪನ್ಯಾಸ ನೀಡಿದರು.

ಕಾರ್ಯಕ್ರಮಕ್ಕೆ ಮುಂಚೆ ಮಹಾನಗರ ಪಾಲಿಕೆ ಆವರಣದಿಂದ ಗಾಂಧಿ ಭವನದವರೆಗೆ ಪರಿಸರ ಜಾಥಾ ನಡೆಸಲಾಯಿತು. ಇದೇ ಸಂದರ್ಭದಲ್ಲಿ ಪರಿಸರದ ಮಹತ್ವ ಮತ್ತು ಸಂರಕ್ಷಣೆ ಕು–ರಿತು ಶಾಲಾ ಕಾಲೇಜಿನ ವಿದ್ಯಾಥಿಗಳಿಗೆ ಆಯೋಜಿಸಲಾದ ಚಿತ್ರಕಲೆ, ಪ್ರಬಂಧ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದವರಿಗೆ ಸಸಿ, ಬಟ್ಟೆ ಚೀಲಗಳ ವಿತರಣೆಯೊಂದಿಗೆ ಪ್ರಮಾಣ ಪತ್ರ ನೀಡಲಾಯಿತು.

ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾದೀಶರಾದ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಅರವಿಂದ ಎಸ್. ಹಾಗರಗಿ, ಜಿಲ್ಲಾ ನ್ಯಾಯವಾದಿ ಸಂಘದ ಅಧ್ಯಕ್ಷರಾದ ಡಿ.ಜಿ ಬಿರಾದಾರ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಕಾರಿಗಳಾದ ವಿವೇಕ, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್‌ನ ವಿದ್ಯಾವತಿ ಅಂಕಲಗಿ, ಪ್ರೇಮಾನಂದ ಬಿರಾದಾರ ಸೇರಿದಂತ್ಸ್ತಲಾ ಕಾಲೇಜಿನ ವಿದಾರ್ಥಿಗಳು,ಸೌರ್ಜನಿಕರು ಉಪಸ್ಥಿತರಿದ್ದರು.

# ದೈನಂದಿನ ಜೀವನದಲ್ಲಿ ಯೋಗ ಅಳವಡಿಸಿಕೊಳ್ಳಿ : ವಿದ್ಯಾವತಿ ಅಥಣಿ



ವಿಜಯಪುರ : ಯೋಗವು ದೇಹವನ್ನು ನಿರೋಗಿಯನ್ನಾಗಿ ಮಾಡಿ, ದೈಹಿಕ ಹಾಗೂ ಮಾನಸಿಕ ದೃಢತೆಯನ್ನು ಬಲಪಡಿಸುವ ಒಂದು ಸಾಧನವಾಗಿದೆ, ಆದ್ದ–ರಿಂದ ದೈನಂದಿನ ಜೀವನದಲ್ಲಿ ಯೋಗ ಅಳವಡಿಸಿಕೊಳ್ಳೋಣ ಎಂದು ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ. ವಿದ್ಯಾವತಿ ಎಮ್ ಅಥಣಿ ಅವರು ಹೇಳಿದರು.

ಜೂನ್ 21ರಂದು ನಡೆಯಲಿರುವ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಹಿನ್ನಲೆಯಲ್ಲಿ ನಗರದ ಜಿಲ್ಲಾ ಕೇಂದ್ರ ಕಾರಾಗೃಹದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಯೋಗ ಧನುಷ್ ಮತ್ತು ಹಸಿರು ಯೋಗ (ಹರಿತ ಯೋಗ) ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸದೃಢ ಹಾಗೂ ಉತ್ತಮ ಆರೋಗ್ಯಕ್ಕಾಗಿ ಯೋಗವನ್ನು ಎಲ್ಲರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಒತ್ತಡದ ಜೀವನದಲ್ಲಿ ಮಾನಸಿಕವಾಗಿ ನೆಮ್ಮದಿ ಕಾಣಬಹುದಾಗಿದೆ ಎಂದು ಅವರು ತಿಳಿಸಿದರು.

ದಿನನಿತ್ಯ ಯೋಗ ರೂಢಿಸಿಕೊಳ್ಳುವುದ–ರಿಂದ ಮನುಷ್ಯ ನಿರೋಗಿಯಾಗಿ ಜೀವನ ನಡೆಸಲು ಸಹಾಯಕವಾಗುತ್ತದೆ. ಈ ವರ್ಷದ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಘೋಷ ವಾಕ್ಯ ಯೋಗ ಫಾರ್ ಒನ್ ಹೇಲ್ತ್ ಒನ್ ಅರ್ಥ್ ಎಂದರೆ ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ ಎಂಬುದಾಗಿದೆ ಎಂದು ಹೇಳಿದರು. ಹರಿತಯೋಗ ಅಥವಾ ಹಸಿರು ಯೋಗದ ಬಗ್ಗೆ ವಿವರಿಸಿದ ಅವರು, ಪ್ರಕೃತಿಯಲ್ಲಿ ಗಿಡಮರಗಳಿಗೆ ಬಹಳ ಮಹತ್ವವಿದೆ. ಆದ–್ದರಿಂದ ಸಸಿಗಳನ್ನು ನೆಡುವುದರ ಮೂಲಕ ಸುಂದರ ಪರಿಸರ ನಿರ್ಮಾಣ ಮಾಡೋಣ ಎಂದು ಹೇಳಿದರು.


ಈ ಸಂದರ್ಭದಲ್ಲಿ ಕಾರಾಗೃಹದ ಅಧೀಕ್ಷಕರಾದ ಬಿ.ಎಂ.ಕೊಟ್ರೇಶ್, ಸಹಾಯಕ ಅಧೀಕ್ಷಕರಾದ ಅಭಿಜಿತ್ ಜಯಕ್ಕನವರ, ಜೈಲರ್ ಗೋಪಾಲಕೃಷ್ಣ ಕುಲಕರ್ಣಿ, ಆಯುಷ್ಯ ಇಲಾಖೆಯ ಆಡಳಿತಾಧಿಕಾರಿ ಸಂಜೀವ ಎಂ. ಕುಲಕರ್ಣಿ, ವೈದ್ಯಾಧಿಕಾ–ರಿಗಳಾದ ಮಹೇಶ ನಾವದಗಿ ಹಾಗೂ ಕಾರಾಗೃಹದ ಅಧಿಕಾರಿ, ಸಿಬ್ಬಂದಿ ಉಪಸ್ಥಿತರಿದ್ದರು.

# ಇಲೆಕ್ಟ್ರಿಕಲ್ ಮೋಟಾರ್ ರಿವೈಡಿಂಗ್ ತರಬೇತಿಗೆ ಅರ್ಜಿ ಆಹ್ವಾನ

ಹಾವೇರಿ: ದೇವಗಿರಿ ಬ್ಯಾಂಕ್ ಆಫ್ ಬರೋಡಾ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ ವಿಬ್‌ಸೆಟಿಯಲ್ಲಿ ಹಾವೇರಿ ಜಿಲ್ಲೆಯ ನಿರುದ್ಯೋಗಿ ಯುವಕರಿಗೆ ಜುಲೈ 05 ರಿಂದ ಆಗಸ್ಟ್ 08ರವರೆಗೆ 31 ದಿನಗಳ ಉಚಿತ ಎಲೆಕ್ಟ್ರಿಕಲ್ ಮೋಟಾರ್ ರಿವೈಡಿಂಗ್ ತರಬೇತಿ ಆಯೋಜಿಸಲಾಗಿದೆ.

ಜಿಲ್ಲೆಯ 18 ರಿಂದ 45 ವರ್ಷದೊಳಗಿನ ಅಭ್ಯರ್ಥಿಗಳು ಈ ತರಬೇತಿ ಸದುಪಯೋಗ ಪಡೆದುಕೊಳ್ಳಬೇಕು. ಜಿಲ್ಲೆಯ ಗ್ರಾಮೀಣ ಭಾಗದ ಹಾಗೂ ರೇಷನ್ ಕಾರ್ಡ್ ಹೊಂದಿದವರಿಗೆ ಮಾತ್ರ ತರಬೇತಿಗೆ ಅವಕಾಶವಿದೆ ಎಂದು ಸಂಸ್ಥೆಯ ನಿರ್ದೇಶಕರು ತಿಳಿಸಿದ್ದಾರೆ

ಆಸಕ್ತರು ದಿನಾಂಕ 28–06–2025ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು, ಬ್ಯಾಂಕ ಆಫ್ ಬರೋಡಾ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ ವಿಬ್‌ಸೆಟಿ, ಡಿ.ಸಿ ಆಫೀಸ್ ಕಟ್ಟಡದ ಹಿಂಭಾಗ, ದೇವಗಿರಿ– ಹಾವೇರಿ ಮೊ. 8660219375 ಸಂಪರ್ಕಿಸಲು ಕೋರಲಾಗಿದೆ.



ಇತ್ತೀಚೆಗೆ ಮೈಸೂರು ಅರಮನೆ ಮೈದಾನದಲ್ಲಿ ಜರುಗಿದ ರಾಷ್ಟ್ರ ಮಟ್ಟದ ಕುಸ್ತಿ ಪಂದ್ಯಾವಳಿಯಲ್ಲಿ ಬೈಲಹೊಂಗಲ ತಾಲೂಕಿನ ದೊಡವಾಡ ಗ್ರಾಮದ ಮಾಜಿ ಖ್ಯಾತ ಪೈಲ್ವಾನ ಮುದಕಪ್ಪ ತುಪ್ಪದರವರನ್ನು ಮೈಸೂರು ಮಹಾರಾಜ ಸಂಸದ ಯದುವೀರ್ ಒಡೆಯರ್‌ರವರು ಬೆಳ್ಳಿ ಗದೆ ನೀಡಿ ಸನ್ಮಾನಿಸಿ ಗೌರವಿಸಿದರು. ಸಾಂಪ್ರದಾಯಿಕ ಕುಸ್ತಿ ಕ್ರೀಡೆಗೆ ಮುದಕಪ್ಪ ತುಪ್ಪದರವರ ಕೊಡುಗೆಯನ್ನು ಅವರು ಇದೇ ವೇಳೆ ಶ್ಲಾಘಿಸಿದ್ದಾರೆ.

# 11 ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

ಗದಗ : ಭಾರತ ಸರ್ಕಾರ, ಕರ್ನಾಟಕ ಸರ್ಕಾರ, ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ನಗರಸಭೆ ಗದಗ ಬೆಟಗೇರಿ ಇವರುಗಳ ಸಂಯುಕ್ತ ಆಶ್ರಯದಲ್ಲಿ 11 ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಉದ್ಘಾಟನಾ ಸಮಾರಂಭವನ್ನು " ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ" ಎಂಬ ಘೋಷವಾಕ್ಯದೊಂದಿಗೆ ಜೂನ್ 21 ರಂದು ಬೆಳಿಗ್ಗೆ 6.30 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರಾದ ದಿನೇಶ ಗುಂಡೂರಾವ್ ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ ,ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರುಗಳಾದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ,ಪ್ರದೀಪ ಶೆಟ್ಟರ್ , ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕರಾದ ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಬಿ.ಅಸೂಟಿ ಅವರುಗಳು ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಆಯುಷ್ ನಿರ್ದೇಶನಾಲಯದ ಆಯುಕ್ತರಾದ ವಿಪಿನ್ ಸಿಂಗ್ ಆಗಮಿಸುವರು.

ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿ.ಪಂ.ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ , ಜಿಲ್ಲಾ ಆಯುಷ್ ಅಧಿಕಾರಿ ಡಾ. ಜಯಪಾಲಸಿಂಗ್ ಪಿ ಸಮೋರೇಕರ್ ಸರ್ವರಿಗೂ ಸ್ವಾಗತ ಕೋರಿದ್ದಾರೆ.

ಸಾಮೂಹಿಕ ಯೋಗ ನಡಿಗೆ : 11 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಜೂನ್ 19 ರಂದು ಗುರುವಾರ ಬೆಳಿಗ್ಗೆ 9 ಗಂಟೆಗೆ ನಗರದ ಮುನ್ಸಿಪಲ್ ಆವರಣದಿಂದ ಸಾಮೂಹಿಕ ಯೋಗ ನಡಿಗೆಯನ್ನು ಹಮ್ಮಿಕೊಳ್ಳಲಾಗಿದೆ.

***

# ಪುಣ್ಯಕ್ಷೇತ್ರ ಶ್ರೀ ಬದ್ರಿನಾಥ ದೇವಾಲಯಕ್ಕೆ ಈರಣ್ಣ ಕಡಾಡಿ ತಮ್ಮ ಧರ್ಮಪತ್ನಿಯೊಂದಿಗೆ ವಿಶೇಷ ಪೂಜೆ


ಮೂಡಲಗಿ: ಉತ್ತರಾಖಂಡದ ಬದ್ರಿನಾಥ, ಗುಜರಾತನ ದ್ವಾರಕಾನಾಥ, ಒರಿಸ್ಸಾದ ಪುರಿ ಜಗನ್ನಾಥ, ತಮಿಳುನಾಡ ರಾಮೇಶ್ವರಂ ಈ ನಾಲ್ಕು ಮಂದಿರುಗಳು ಭಾರತೀಯರ ಚಾರ್ ಧಾಮ್ ಯಾತ್ರಾ ಸ್ಥಳಗಳಾಗಿ ಪ್ರಖ್ಯಾತಿ ಹೊಂದಿವೆ. ಅವುಗಳಲ್ಲಿ ಉತ್ತರಾಖಂಡ ರಾಜ್ಯದ ಹಿಮಾಲಯದ ಮಡಿಲಲ್ಲಿ ನೆಲೆಗೊಂಡಿರುವ ಹಿಂದೂಗಳ ಪವಿತ್ರ ಯಾತ್ರಾ ಸ್ಥಳವಾಗಿರುವ, ಭಗವಾನ್ ಮಹಾವಿಷ್ಣುವಿನ ನಾಲ್ಕನೇ ನಿವಾಸ ಎಂದು ಕರೆಯಲ್ಪಡುವ ವಿಶ್ವಪ್ರಸಿದ್ಧ ಪುಣ್ಯಕ್ಷೇತ್ರ ಶ್ರೀ ಬದ್ರಿನಾಥ ದೇವಾಲಯಕ್ಕೆ ಮಂಗಳವಾರ ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ತಮ್ಮ ಧರ್ಮಪತ್ನಿಯೊಂದಿಗೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿ ನಾಡಿನ ಸರ್ವ ಜನರಿಗೂ ಒಳಿತಾಗಲಿ ಎಂದು ಪ್ರಾರ್ಥಿಸಿದರು.



ಬದ್ರಿನಾಥ ಯಾತ್ರೆ ಗಿರಿ ಪ್ರದೇಶಗಳ ಅತ್ಯಂತ ಕಡಿದಾದ ರಸ್ತೆಯಲ್ಲಿ ಕಷ್ಟದಾಯಕ ಪ್ರಯಾಣವಾಗಿದ್ದರೂ ಕೂಡಾ ಆಗಾಗ ಭೂಕುಸಿತಗಳು ಸಂಭವಿಸಿ ರಸ್ತೆ ಮಾರ್ಗಗಳು ನಿರ್ಬಂಧಿತವಾಗಬಹುದು ಮತ್ತು ಹೆಲಿಕ್ಯಾಪ್ಟರ್ ಮೂಲಕ ಪ್ರಯಾಣಿಸುವಾಗ ಹವಾಮಾನ ವೈಪ–ರೀತ್ಯದಿಂದಾಗಿ ಅನೇಕ ಅವಘಡಗಳು ಕೂಡಾ ಸಂಭವಿಸುತ್ತವೆ. ಆದರೂ ಕೂಡ ಭಾರತೀಯ ಜನರು ತಮ್ಮ ನಂಬಿಕೆ ಶ್ರದ್ದೆಯ ಮೂಲಕ ಬದ್ರಿನಾಥ ದೇವಾಲಯಕ್ಕೆ ಭೇಟಿ ಕೊಡುವುದು ಹೆಚ್ಚಾಗುತ್ತಲಿದೆ. ಇದು ನಮ್ಮ ಜನ ದೇವರುಗಳ ಮೇಲೆ ಇಟ್ಟಿರುವ ನಂಬಿಕೆ ಶ್ರದ್ಧಾ ಭಕ್ತಿಯ ಸಂಕೇತವಾಗಿದೆ.

ಬದ್ರಿನಾಥ ದೇವಸ್ಥಾನಕ್ಕೆ ಮಂಗಳವಾರ ಭೇಟಿ ಕೊಡುವ ಮೂಲಕ ನಾಡಿನ ಜನತೆಗೆ ಒಳತಾಗಲಿ ಎಂದು ಪ್ರಾರ್ಥಿಸುವ ಸದವಕಾಶ ನನ್ನದಾಗಿತ್ತು ಎಂದು ಸಂಸದ ಈರಣ್ಣ ಕಡಾಡಿ ಅವರು ತಮ್ಮ ಪ್ರವಾಸದ ಸಂತಸವನ್ನು ಹಂಚಿಕೊಂಡಿದ್ದಾರೆ.

# ಮಹಾಲಿಂಗಪುರ ತಾಲ್ಲೂಕು ರಚನೆಗಾಗಿ ಡಿಸಿಯಿಂದ ಕಂದಾಯ ಇಲಾಖೆಗೆ ಪ್ರಸ್ತಾವನೆ



ಮಹಾಲಿಂಗಪುರ: ಪಟ್ಟಣವನ್ನು ತಾಲ್ಲೂಕು ಕೇಂದ್ರವಾಗಿ ಘೋಷಿಸಲು ಒತ್ತಾಯಿಸಿ ಮಹಾಲಿಂಗಪುರದಲ್ಲಿ ನಡೆಯುತ್ತಿರುವ ಹೋರಾಟ ಮಂಗಳವಾರ 1163 ದಿನ ಪೂರೈಸಿದೆ.

ಪಟ್ಟಣದ ಜಿಎಲ್‌ಬಿಸಿ ಅತಿಥಿ ಗೃಹದಲ್ಲಿ ತಾಲೂಕು ಹೋರಾಟಗಾರರ ಸಭೆ ಜರುಗಿತು. ಹೋರಾಟ ಸಮಿತಿ ಅಧ್ಯಕ್ಷ ಸಂಗಪ್ಪ ಹಲ್ಲಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಕಳೆದ ತಿಂಗಳು 25 ರಂದು ಬಾಗಲಕೋಟೆ ಡಿಸಿ ಅವರು ತಾಲ್ಲೂಕು ರಚನೆಗಾಗಿ ಕಂದಾಯ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ್ದಾರೆ. ತಾಲೂಕು ಹೋರಾಟ 4ನೇ ವರ್ಷಕ್ಕೆ ಕಾಲಿಟ್ಟಿದ್ದು, ಹೋರಾಟ ಸಮಿತಿಯ ಬೇಡಿಕೆ ಈಗ ಅಧಿಕೃತವಾಗಿ ಸರಕಾರಕ್ಕೆ ತಲುಪಿದೆ ಎಂದರು.

ಜಿಪಂ ಮಾಜಿ ಅಧ್ಯಕ್ಷ ಮಹಾಂತೇಶ ಹಿಟ್ಟಿನಮಠ, ಗಂಗಾಧರ ಮೇಟಿ, ವಿರೇಶ ಆಸಂಗಿ, ನ್ಯಾಯವಾದಿ ಎಂ.ಎಸ್.ಮನ್ನಯ್ಯನವರಮಠ, ಶಿವಲಿಂಗ ಟಿರ್ಕಿ, ಶೇಖರ ಅಂಗಡಿ, ಬಂದು ಪಕಾಲಿ ಹೋರಾಟದ ಮುಂದಿನ ರೂಪರೇಖೆಗಳ ಕುರಿತು ಮಾತನಾಡಿದರು. ಸಂಬಂಧಿಸಿದ ಸಚಿವರು ಸೇರಿದಂತೆ ಸರಕಾರದ ಮೇಲೆ ಒತ್ತಡ ಹಾಕಲು ಎಲ್ಲಾ ಗ್ರಾಮಗಳ ಸಾರ್ವಜನಿಕರು, ಮುಖಂಡರು, ಜನಪ್ರತಿನಿಧಿಗಳು ಹೋರಾಟಕ್ಕೆ ಬೆಂಬಲ ಸೂಚಿಸಲು ವಿನಂತಿಸಿದರು.

ಇದೇ ಜೂನ್ 22 ರಂದು 16 ಗ್ರಾಮಗಳ ಗ್ರಾಪಂ ಸದಸ್ಯರು, ಪುರಸಭೆ ಸದಸ್ಯರು, ವಿವಿಧ ಪಕ್ಷಗಳ ರಾಜಕೀಯ ಮುಖಂಡರ ಸಭೆ ಕರೆದು ಹೋರಾಟ ತೀವ್ರಗೊಳಿಸುವ ಕುರಿತು ನಿರ್ಣಯ ಕೈಗೊಳ್ಳಲು ತಿರ್ಮಾನಿಸಲಾಯಿತು. ಮಹಾಲಿಂಗಪ್ಪ ಅವರಾದಿ, ದುಂಡಪ್ಪ ಇಟ್ನಾಳ, ಸಿದ್ದು ಶಿರೋಳ, ರಫೀಕ್ ಮಾಲದಾರ, ಈಶ್ವರ ಮುರಗೋಡ, ನಿಂಗಪ್ಪ ಬಾಳಿಕಾಯಿ, ದುಂಡಪ್ಪ ಜಾಧವ, ಭೀಮಸಿ ಸಸಾಲಟ್ಟಿ, ಹಣಮಂತ ಜಮಾದಾರ, ವೀರಭದ್ರ ಮುಗಳ್ಯಾಳ, ಪರಸು ಕೊಣ್ಣೂರ, ಬಸವರಾಜ ಚನ್ನಾಳ, ದುಂಡಪ್ಪ ಚನ್ನಾಳ, ಚನ್ನಪ್ಪ ಚನ್ನಾಳ, ಮಹಾಲಿಂಗ ನಾಯಕ, ಆನಂದ ಬಿರಾನಿ, ನ್ಯಾಯವಾದಿಗಳಾದ ಎಂ.ಬಿ.ಬಡಿಗೇರ, ಶಿವಾನಂದ ಉಳ್ಳಾಗಡ್ಡಿ, ಎಂ.ಕೆ.ಸಂಗನ್ನವರ, ಜಕಾತಿಮಠ ಇದ್ದರು.

# ಯರಗಟ್ಟಿ ತಾಲೂಕಿನ ಪ್ರತಿ ಹಳ್ಳಿ ಹಳ್ಳಿಯಲ್ಲಿ ಕರವೇ ಸಂಘಟನೆ ಮಾಡಿ : ಬೆಳಗಾವಿ ಜಿಲ್ಲಾಧ್ಯಕ್ಷ ದೀಪಕ್ ಗುಡುನಟ್ಟಿ ಕರೆ



ಯರಗಟ್ಟಿ : ಪಟ್ಟಣಕ್ಕೆ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಬೆಳಗಾವಿ ಜಿಲ್ಲಾ ಘಟಕದ ಅಧ್ಯಕ್ಷರ ನೇತೃತ್ವದಲ್ಲಿ ತಾಲೂಕಾ ಪದಾಧಿಕಾರಿಗಳು ಭೇಟಿ ಮಾಡಿ ಸಭೆ ನಡೆಸಿದರು.

ಸಭೆ ಉದ್ದೇಶಿಸಿ ಮಾತನಾಡಿದ ಬೆಳಗಾವಿ ಜಿಲ್ಲಾ ಅಧ್ಯಕ್ಷ ದೀಪಕ್ ಗುಡಗನಟ್ಟಿ ಕರವೇ ಸಂಘಟನೆ ಮಾಡಲು ಒತ್ತು ನೀಡಿ ಮತ್ತು ಬರುವ ದಿನಮಾನಗಳಲ್ಲಿ ಯರಗಟ್ಟಿ ತಾಲೂಕಿನ ಪ್ರತಿಯೊಂದು ಹಳ್ಳಿಗಳಲ್ಲಿ ಘಟಕ ಪ್ರಾರಂಭ ಮಾಡುವ ಮುಖೇನ ಸಂಘಟನೆ ಮಾಡಬೇಕು ಎಂದು ಯರಗಟ್ಟಿ ತಾಲೂಕು ಮಟ್ಟದ ಕಾರ್ಯಕಾರಣಿ ಸಭೆಯಲ್ಲಿ ತಾಲೂಕು ಪದಾಧಿಕಾರಿಗಳಿಗೆ ಸೂಚನೆ ನೀಡಿದರು.

ಈ ವೇಳೆ ರಾಜ್ಯ ಸಂಚಾಲಕರಾದ ಸುರೇಶ ಗೌವಣ್ಣವರ, ಜಿಲ್ಲಾ ಪ್ರದಾನ ಕಾರ್ಯದರ್ಶಿ ದಶರಥ ಬನೋಸಿ, ಜಿಲ್ಲಾ ಸಂಚಾಲಕರಾದ ಬಾಳು ಜಡಗಿ, ಹೊಳೆಪ್ಪ ಸುಲದಾಳ, ರಾಜು ನಾಸೀಪುಡಿ, ತಾಲೂಕು ಅಧ್ಯಕ್ಷ ರಫೀಕ್ ಡಿ ಕೆ, ಮಂಜು ಬಾವಿಹಾಳ, ಫಾರೂಕ್ ಅತ್ತಾರ, ಫೀರೋಜ ಖಾದ್ರಿ, ವಿಠ್ಠಲ ಹಾರುಗೊಪ್ಪ, ರಫೀಕ್ ಮುಂಬೈ, ಫೀರಸಾಬ ತಶೀಲ್ದಾರ, ಈರಣ್ಣ ಹುಲೂರ ಸೇರಿದಂತೆ ಅನೇಕ ಕರವೇ ಕಾರ್ಯಕರ್ತರು ಇದ್ದರು

***

# ಬ್ಯಾಂಕು ವ್ಯವಸ್ಥಾಪಕರ ಸಭೆ



ಬಸವನಬಾಗೇವಾಡಿ, : ಬಸವನಬಾಗೇವಾಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರುವ ರಾಷ್ಟ್ರೀಕೃತ ಬ್ಯಾಂಕು ಸೇರಿದಂತೆ ಎಲ್ಲ ಬ್ಯಾಂಕುಗಳಲ್ಲಿ ಕಡ್ಡಾಯವಾಗಿ ಉತ್ತಮ ಗುಣಮಟ್ಟದ ಸಿಸಿ ಕ್ಯಾಮೆರಾ ಅಳವಡಿಸುವದು ಸೇರಿದಂತೆ ಮುಂಜಾಗ್ರತಾ ಸುರಕ್ಷಿತ ಕ್ರಮಗಳನ್ನು ಅಳವಡಿಸಿಕೊಳ್ಳಬೇಕೆಂದು ಬಸವನಬಾಗೇವಾಡಿ ಪೊಲೀಸ್ ಠಾಣೆಯ ಪಿಐ ಗುರುಶಾಂತ ದಾಶ್ಯಾಳ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆಯ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಬಸವನಬಾಗೇವಾಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರುವ ರಾಷ್ಟ್ರೀಕೃತ ಬ್ಯಾಂಕು ಸೇ-ರಿದಂತೆ ವಿವಿಧ ಬ್ಯಾಂಕುಗಳ ವ್ಯವಸ್ಥಾಪಕರ ಸಭೆಯಲ್ಲಿ ಮಾತನಾಡಿದ ಅವರು, ಬ್ಯಾಂಕುಗಳಲ್ಲಿ ಹಗಲು-ರಾತ್ರಿ ಪಾಳಿಯಲ್ಲಿ ಆಯುಧ ಸಹಿತ ಸೆಕ್ಯೂರಿಟಿ ಗಾರ್ಡ್ ನೇಮಕ ಮಾಡಿಕೊಳ್ಳುವದು. ಬ್ಯಾಂಕಿನ ಎಟಿಎಂಗಳಲ್ಲಿ ಸೈರನ್ ಅಲಾರಾಂ ಅಳವಡಿಸುವದು. ಬ್ಯಾಂಕಿನ ಲಾಕರ್‌ಗಳ ಸುಕ್ಷರತಾ ಕ್ರಮಗಳನ್ನು ಬ್ಯಾಂಕಿನ ವ್ಯವಸ್ಥಾಪಕರು ಕೈಗೊಳ್ಳಬೇಕು. ಬ್ಯಾಂಕಿನಲ್ಲಿ ಯಾರಾದರೂ ಅನುಮಾನಸ್ಪಾದ ವ್ಯಕ್ತಿಗಳು ಓಡಾಟ ಮಾಡುವದು ಕಂಡುಬಂದರೆ ತಕ್ಷಣವೇ ಪೊಲೀಸ್ ಇಲಾಖೆಗೆ ಮಾಹಿತಿ ನೀಡಿದರೆ ಮುಂದೆ ಆಗುವ ಅನಾಹುತಗಳನ್ನು ತಪ್ಪಿಸಲು ಸಾಧ್ಯವಾಗುತ್ತದೆ. ಬ್ಯಾಂಕಿನ ಸುರಕ್ಷತೆಗಾಗಿ ವ್ಯವಸ್ಥಾಪಕರು ತಮ್ಮ ಸಿಬ್ಬಂದಿಗಳಿಗೆ ಸೂಕ್ತ ಸೂಚನೆಗಳನ್ನು ನೀಡುವ ಮೂಲಕ ಬ್ಯಾಂಕು ಸುರಕ್ಷಿತವಾಗಿ ಇರುವಂತೆ ಮಾಡುವ ಜೊತೆಗೆ ಗ್ರಾಹಕರಿಗೆ ಉತ್ತಮ ಸೇವೆ ನೀಡುವಂತಾಗಬೇಕೆಂದರು.

ಎಲ್ಲ ಗ್ರಾಹಕರಿಗೆ ಸೈಬರ್ ವಂಚನೆಗಳ ಕುರಿತಾದ ಜಾಗೃತಿ ಮೂಡಿಸುವ ಫಲಕಗಳನ್ನು ಬ್ಯಾಂಕಿನಲ್ಲಿ ಅಳವಡಿಸಬೇಕು. ಬ್ಯಾಂಕಿನಲ್ಲಿ ಅನಗತ್ಯ ವ್ಯಕ್ತಿಗಳು ಬರದಂತೆ ಹಾಗೂ ಗ್ರಾಹಕರ ಗಮನ ಬೇರೆಡೆ ಸೆಳೆದು ಹಣ ಲಪಟಾಯಿಸುವಂತಹವರ ಬಗ್ಗೆ ಸೆಕ್ಯುರಿಟಿ ಗಾರ್ಡ್‌ಗಳು ಗಮನ ಹರಿಸುವಂತೆ ಸೂಚಿಸಬೇಕು. ಬ್ಯಾಂಕಿನಲ್ಲಿ ಯಾವುದೇ ನವೀಕರಣ, ರಿಪೇರಿ, ಯಾವುದೇ ಹೊಸ ಸಾಧನಗಳ ಅಳವಡಿಕೆ ಕಾಲಕ್ಕೆ ತಾತ್ಕಲಿಕವಾಗಿ ಬರುವ ಕೆಲಸಗಾರರ ಆದ-ಾರ ಕಾರ್ಡ್,ಮೊಬೈಲ್ ಸಂಖ್ಯೆ ಸೇರಿದಂತೆ ಅವರ ಸಂಪೂರ್ಣ ವಿವರಗಳನ್ನು ಪಡೆದುಕೊಳ್ಳಬೇಕು. ಜನಸಂದಣಿ ವಿರಳವಿರುವ ಸ್ಥಳದಲ್ಲಿರುವ ಎಟಿಎಂಗಳಿಗೆ ಕಡ್ಡಾಯವಾಗಿ ಸೆಕ್ಯೂರಿಟಿ ಗಾರ್ಡ್‌ಗಳನ್ನು ನೇಮಕ ಮಾಡಿಕೊಳ್ಳಬೇಕು. ಸಂಬಂಧ ಪಟ್ಟ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆಯನ್ನು ಸಾರ್ವಜನಿಕರಿಗೆ ಕಾಣುವಂತೆ ಹಾಕಬೇಕೆಂದರು.

ಸಭೆಯಲ್ಲಿ ಎಸ್‌ಬಿಐ, ಕೆನರಾ, ಎಚ್‌ಡಿಎಫ್‌ಸಿ, ಡಿಸಿಸಿ, ಐಡಿಎಫ್‌ಸಿ, ಕರ್ನಾಟಕ ಗ್ರಾಮೀಣ ಬ್ಯಾಂಕ್,ಬಸವೇಶ್ವರ ಅರ್ಬನ್ ಬ್ಯಾಂಕ್ ವ್ಯವಸ್ಥಾಪಕರು, ಹೂವಿನಹಿಪ್ಪರಗಿ ಕೆನರಾ ಬ್ಯಾಂಕು, ಠಾಣೆಯ ವ್ಯಾಪ್ತಿಯಲಿರುವ ವಿವಿಧ ಪಿಕೆಪಿಎಸ್ ಬ್ಯಾಂಕಿನ ಸಿಇಓಗಳು ಭಾಗವಹಿಸಿದ್ದರು.

## ಪರಮಾನಂದಗೆ ಪ್ರಶಸ್ತಿ

ಮಹಾಲಿಂಗಪುರ: ಸಮೀಪದ ರನ್ನಬೆಳಗಲಿ ಪಟ್ಟಣ ನಿವಾಸಿ, ಕನ್ನಡಪರ ಸಂಘಟನೆಯ ರೂವಾರಿ, ಚಲನಚಿತ್ರ ಸಹನಟ ಮತ್ತು ಸಮಾಜ ಸೇವಕನಾಗಿ ಗುರುತಿಸಿಕೊಂಡು ಬೆಂಗಳೂರಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಪರಮಾನಂದ ಬಸಪ್ಪ ಸನ್ನಟ್ಟಿ ಅವರ ಸೇವೆಯನ್ನು ಗುರುತಿಸಿ ಇಂಡಿಯನ್ ಐಕಾನ್ ಅವಾರ್ಡ್ ನೀಡಿ ಗೌರವಿಸಲಾಗಿದೆ. ಬೆಂಗಳೂರಿನ ಓರಿಯೆಂಟಲ್ ಫೌಂಡೇಶನ್ ವತಿಯಿಂದ ಸಮಾಜ ಸೇವೆಗೆ ನೀಡಲಾಗುವ ಇಂಡಿಂ-ಯನ್ ಐಕಾನ್ ಅವಾರ್ಡ್ ಎಂಬ ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಸಮಾರಂಭ ಇತ್ತೀಚೆಗೆ ಚಾಮರಾಜಪೇಟೆಯ ಕನ್ನಡ ಸಾಹಿತ್ಯ ಪರಿಷತ್‌ನ ಕೃಷ್ಣರಾಜ ಪರಿಷತ್ ಮಂದಿರದಲ್ಲಿ ಜರುಗಿತು. ಓರಿಯೆಂಟಲ್ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷ ರವಿಕುಮಾರ ಹಾಗೂ ಗಣ್ಯರು ಇದ್ದರು.



## ಜೂ.26 ರಂದು ಜಿ.ಪಂ. ಸಾಮಾನ್ಯ ಸಭೆ

ಕಾರವಾರ. : ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿ ಅವರ ಅಧ್ಯಕ್ಷತೆಯಲ್ಲಿ ಜೂ.26 ರಂದು ಬೆಳಗ್ಗೆ 10.30 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಭವನದಲ್ಲಿ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆ ನಡೆಯಲಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಈಶ್ವರ ಕುಮಾರ್ ಕಾಂದೂ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಣೆಯಾದವರ ಬಗ್ಗೆ

ಕಾರವಾರ, : ದಿನೇಶ ಕೋಟಿ ಯತ್ತಿನಹಳ್ಳಿ( 27 ವರ್ಷ) ಸಾ// ಜೀವನ ನಗರ ಬಿಣಗಾ , ಕಾರವಾರ ಈತನು ಜೂ.13 ರಂದು 12.30 ಗಂಟೆಗೆ ಮನೆಯಲ್ಲಿ ಯಾರಿಗೂ ಹೇಳದೆ ಹೋಗಿದ್ದು ನಂತರ ಅಣ್ಣನಿಗೆ ತನ್ನ ಮೊಬೈಲ್ ಮೂಲಕ ಮೇಸೆಜ್ ಮಾಡಿ ತಾನು ಹುಬ್ಬಳ್ಳಿಯಲ್ಲಿ ಇರುವುದಾಗಿ ತಿಳಿಸಿದ್ದು, ನಂತರ ಬಿಣಗಾಕ್ಕೆ ಬರುವುದಾಗಿ ಮೇಸೆಜ್ ಮಾಡಿದ್ದು, ಈವರೆಗೆ ಮರಳಿ ಮನೆಗೂ ಬಾರದೇ ಸಂಬಂಧಿಕರ ಮನೆಗೂ ಹೋಗದೆ ಎಲ್ಲಿಯೋ ಹೋಗಿ ಕಾಣೆಯಾಗಿದ್ದಾನೆ.

ಈ ವ್ಯಕ್ತಿಯ ಬಗ್ಗೆ ಮಾಹಿತಿ ಇದ್ದಲ್ಲಿ ಕಾರವಾರ ಗ್ರಾಮೀಣ ಪೊಲೀಸ್ ಠಾಣೆಯ ದೂ.ಸಂ.08382-222443, ಸಂಪರ್ಕಿಸುವಂತೆ ಕಾರವಾರ ಗ್ರಾಮೀಣ ಪೊಲೀಸ್ ಠಾಣೆಯ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪುರುಷ ಕಾಣೆ-ಪತ್ತೆಗೆ ಮನವಿ

ಹಾವೇರಿ ಮೂಲತಃ ವಿಜಯನಗರ ನಿವಾಸಿಯಾದ 40 ವರ್ಷದ ವಿರೇಂದ್ರ ಮಲ್ಲಿಕಾರ್ಜುನಪ್ಪ ದಲಾಲಿ ಈತನು ಅಕ್ಕಿಆಲೂರ ಗ್ರಾಮದಿಂದ 20 ಜೂನ್ 2013 ರಂದು ಮನೆಯಿಂದ ಹೋದವನು ಕಾಣೆಯಾಗಿರುವುದಾಗಿ ಹಾವೇರಿ ಶಹರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ.

ಕಾಣೆಯಾದ ವ್ಯಕ್ತಿಯ 5.2 ಅಡಿ ಎತ್ತರ, ತೆಳ್ಳನೆಯ ಮೈಕಟ್ಟು, ದುಂಡು ಮುಖ, ಸಾದಗಪ್ಪು ಮೈಬಣ್ಣ, ನೀಟಾದಮೂಗು ಹೊಂದಿದ್ದು, ಗುಲಾಬಿ ಬಣ್ಣದ ಅಂಗಡಿ, ಕಪ್ಪು ಪ್ಯಾಂಟ, ಕಾಲಲ್ಲಿ ಪ್ಲಾಸ್ಟಿಕ್ ಚಪ್ಪಲಿ ಧರಿಸಿದ್ದಾನೆ. ಕನ್ನಡ ಮಾತನಾಡಲು ಹಾಗೂ ಓದಲು ಬರುತ್ತದೆ.

ಈ ವ್ಯಕ್ತಿಯ ಗುರುತು ಪತ್ತೆಯಾದಲ್ಲಿ ಹಾವೇರಿ ಶಹರ ಠಾಣೆ ದೂ.08375-232333, ಮೊ.9480804545, ಹಾವೇರಿ ಕಂಟ್ರೋಲ್ ರೂಂ.08375-237368 ಹಾಗೂ ಪೊಲೀಸ್ ಅಧೀಕ್ಷಕರ ಕಚೇರಿ ದೂ.08375-232800 ಸಂಪರ್ಕಿಸಬೇಕೆಂದು ಹಾವೇರಿ ಶಹರ ಪೊಲೀಸ್ ಠಾಣೆ ಆರಕ್ಷಕ ಉಪ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ವಿದ್ಯುತ್ ವ್ಯತ್ಯಯ

ಹಾವೇರಿ: ಬಸವನಕಟ್ಟಿ 110ಕೆ.ವ್ಹಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾಮಗಾರಿ ಇರುವುದರಿಂದ ಜೂನ್ 19ರ ಗುರುವಾರ ಬಸವನಕಟ್ಟಿ 110ಕೆ.ವ್ಹಿ ವಿದ್ಯುತ್ ವಿತರಣಾಕೇಂದ್ರದಿಂದ ಹೊರಡುವ ಎಲ್ಲಾ 11 ಕೆವಿ ಫೀಡರ್‌ಗಳಲ್ಲಿ ಬೆಳಿಗ್ಗೆ 10 ರಿಂದ ಸಾಯಂಕಾಲ 6ಗಂಟೆ ವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಈ ವಿದ್ಯುತ್ ವಿತರಣಾಕೇಂದ್ರದ ವ್ಯಾಪ್ತಿಗೆ ಬರುವ ಬಸವನಕಟ್ಟಿ, ಸೋಮನಕಟ್ಟಿ, ಮಾಚಾಪುರ, ಬೂದಗಟ್ಟಿ, ಕನವಳ್ಳಿ, ಹನುಮನಹಳ್ಳಿ, ಕಾಟೇನಹಳ್ಳಿ, ಅಗಡಿ, ತಿಮ್ಮೇನಹಳ್ಳಿ,ಮಾಳಾಪುರ,ಗಾಂಧಿಪುರ, ಜಾನಕೊಪ್ಪ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸಹಕರಿಸಬೇಕು ಎಂದು ಹೆಸ್ಕಾಂ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿ.ಎಡ್ ಪರೀಕ್ಷೆ: ಪರೀಕ್ಷಾ ಕೇಂದ್ರಕ್ಕೆ ಪ್ರೊ.ಬಿ.ಕೆ.ರವಿ ಭೇಟಿ

ಕೊಪ್ಪಳ : ನಗರದ ಶ್ರೀ ಗವಿಸಿದ್ದೇಶ್ವರ ಶಿಕ್ಷಣ ಮಹಾವಿದ್ಯಾಲಯದಲ್ಲಿ ನಡೆಯುತ್ತಿರುವ ಬಿ.ಎಡ್ ವಿದ್ಯಾರ್ಥಿಗಳ ಪರೀಕ್ಷೆ ಹಿನ್ನೆಲೆಯಲ್ಲಿ ಕೊಪ್ಪಳ ವಿಶ್ವ ವಿದ್ಯಾಲಯದ ಕುಲಪತಿ ಪ್ರೊ.ಬಿ.ಕೆ.ರವಿ ಅವರು ಮಂಗಳವಾರ ಪರೀಕ್ಷಾ ಕೇಂದ್ರಕ್ಕೆ ದಿಢೀರ್ ಭೇಟಿ ನೀಡಿದರು.

ನಂತರ ವಿದ್ಯಾರ್ಥಿಗಳ ಪರೀಕ್ಷಾ ಕೇಂದ್ರ ಕೊಠಡಿಗಳಿಗೆ ತೆರಳಿ ವಿದ್ಯಾರ್ಥಿಗಳು ಬರೆಯುತ್ತಿರುವ ಪರೀಕ್ಷೆಯ ಪ್ರಶ್ನೆ ಹಾಗೂ ಉತ್ತರ ಪತ್ರಿಕೆಗಳನ್ನು ಪರಿಶೀಲಿಸಿದರು.

# ಶಿವಮೊಗ್ಗ ಮಾದರಿಯಲ್ಲಿ ರಾಜ್ಯಮಟ್ಟದ ಸಮಾವೇಶ:ಶ್ರೀಕಾಂತ



ಜಮಖಂಡಿ: ನಾಗರಿಕರ ವಿವಿಧ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ನಾಗರಿಕರಲ್ಲಿ ಅರಿವು, ಜಾಗೃತಿ ಮೂಡಿಸಲು ನಿಟ್ಟಿನಲ್ಲಿ ಸ್ಥಳೀಯ ನಾಗ-ರಿಕ ಹಿತರಕ್ಷಣಾ ವೇದಿಕೆ ರಾಜ್ಯಮಟ್ಟದ ಸಮಾವೇಶವನ್ನು ನಗರದಲ್ಲಿ ಹಮ್ಮಿಕೊಳ್ಳುವ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಸಂಘದ ಅಧ್ಯಕ್ಷ ಶ್ರೀಕಾಂತ ಮರೆಗುದ್ದಿ ಹೇಳಿದರು.


ನಗರದ ಖಾಸಗಿ ಹೋಟೆಲ್ ಸಭಾಭವನದಲ್ಲಿ ನಡೆದ ಜಮಖಂಡಿ ನಾಗರಿಕ ಹಿತರಕ್ಷಣಾ ಸಂಘದ 21ನೇ ವಾರ್ಷಿಕ ಸರ್ವಸಧಾರಣ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಶಿವಮೊಗ್ಗದಲ್ಲಿ ನಡೆದ ನಾಗರಿಕ ಹಿತರಕ್ಷಣಾ ವೇದಿಕೆ ರಾಜ್ಯಮಟ್ಟದ ಪ್ರಥಮ ಸಮಾವೇಶದ ಮಾದರಿಯಲ್ಲಿ ಸಮಾವೇಶ ಆಯೋಜಿಸುವ ಚಿಂತನೆ ನಡೆದಿವೆ. ಅದಕ್ಕೂ ಮೊದಲು ಶಿವಮೊಗ್ಗ ನಾಗ-ರಿಕ ಹಿತರಕ್ಷಣಾ ವೇದಿಕೆಯಿಂದ ಮಾಹಿತಿ ಸಂಗ್ರಹಿಸಿ ಎರಡನೆಯ ರಾಜ್ಯಮಟ್ಟದ ಸಮಾವೇಶದ ರೂಪುರೇಷೆಗಳನ್ನು ಅಳವಡಿಸಿಕೊಳ್ಳಲು ಸಭೆಯಲ್ಲಿ ನಿರ್ಧ-ರಿಸಲಾಗಿದೆ ಎಂದರು.

ಸಂಘದ ಕಾರ್ಯದರ್ಶಿ ಅಶೋಕ ಕುಲ್ಲಳಿಕರ ಮಾತನಾಡಿ, ಸ್ಥಳೀಯ ನಾಗರಿಕ ಹಿತರಕ್ಷಣಾ ಸಂಘ ರಾಜ್ಯ ಸಂಘಟನೆಯೊಂದಿಗೆ ಸಂಯೋಜನೆ ಮಾಡುವ ಚರ್ಚೆಗೆ ಸಭೆ ಒಪ್ಪಿಗೆ ಸೂಚಿಸಿದೆ. ಈ ಕುರಿತು ಪತ್ರ ವ್ಯವಹಾರ ಮಾಡಲು ಸಂಪೂರ್ಣ ಅಧಿಕಾರ ನೀಡಿದ್ದು ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತೇನೆ ಎಂದರು.

ಸಂದೀಪ ಆಪ್ಟೆ ಮಾತನಾಡಿ, ಸಂಘದ ಹಿಂದಿನ ವರ್ಷದ ಲೆಕ್ಕ ಪರಿಶೋಧಕರ ವರದಿ ಮತ್ತು ಜಮಾ-ಖರ್ಚಿನ ಮಾಹಿತಿಯನ್ನು ಸಭೆಯಲ್ಲಿ ಸಲ್ಲಿಸುವ ಮೂಲಕ ಅನುಮೋದನೆ ಪಡೆದರು. ನಗರದ ಅಭಿವೃದ್ಧಿಗಾಗಿ ನಡೆಸಿದ ಹೋರಾಟದ ಬಗ್ಗೆ ಸಭೆಯಲ್ಲಿ ಮಾಹಿತಿ ನೀಡಿದರು.

ವೇದಿಕೆಯಲ್ಲಿ ಜಿ.ಆರ್.ಅನಂತಪೂರ, ಕಾಡು ಮಾಳಿ, ವಿಜಯ ಧರ್ಮದಾಸಾನಿ, ನ್ಯಾಯವಾದಿ ಆರ್.ಡಿ.ಹಳಿಂಗಳಿ, ಅನಂತ ಜೋಶಿ, ವಿಜಯ ಕಟಗಿ, ನಿಲೇಶ ಹಜಾರೆ, ಡಾ.ಟಿ.ಪಿ.ಗಿರಡ್ಡಿ, ಚಿದಾನಂದ ಚೆಟ್ಟೇರ ಸಹಿತ ಹಲವರು ಇದ್ದರು.

# ಸಂಸ್ಥೆಗಳು ಪಾರದರ್ಶಕ ಜನಸೇವೆಯಲ್ಲಿ ತೊಡಗಲಿ: ನ್ಯಾಮಗೌಡ



ಜಮಖಂಡಿ: ಸಂಘ-ಸಂಸ್ಥೆಗಳ ಆರಂಭದಿಂದ ಆರ್ಥಿಕ ವಹಿವಾಟು ಹೆಚ್ಚಾಗಿ ಆರ್ಥಿಕ ಶಕ್ತಿ ಹೆಚ್ಚಾಗಲಿದೆ. ಸಂಘ-ಸಂಸ್ಥೆಗಳು ವಿಶ್ವಾಸದಿಂದ ಪಾರದರ್ಶಕವಾಗಿ ಜನಸೇವೆಯಲ್ಲಿ ತೊಡಗಿಕೊಳ್ಳಬೇಕು. ಸಂಸ್ಥೆ ಮೇಲೆ ಜನರ ನಂಬಿಕೆಯನ್ನು ಆಡಳಿತ ಮಂಡಳಿ ಉಳಿಸಿಕೊಳ್ಳಬೇಕು ಎಂದು ಮಾಜಿ ಶಾಸಕ ಆನಂದ ನ್ಯಾಮಗೌಡ ಹೇಳಿದರು.

ನಗರದ ಬಡಿಗೇರ ಗಲ್ಲಿಯಲ್ಲಿ ಜನಸೇವಾ ಪತ್ತಿನ ಸಹಕಾರ ಸಂಘದ ಉದ್ಘಾಟನಾ ಸಮಾರಂಭದಲ್ಲಿ ಉದ್ಘಾಟಿಸಿ ಮಾತನಾಡಿದರು.

ವಿಧಾನ ಪರಿಷತ್ ಮಾಜಿ ಸದಸ್ಯ ಜಿ.ಎಸ್.ನ್ಯಾಮಗೌಡ ಮಾತನಾಡಿ, ಸಾಲ ನೀಡುವಾಗ ಸಂಘ-ಸಂಸ್ಥೆಗಳು ನಿಯಮಗಳನ್ನು ಎಚ್ಚರಿಕೆಯಿಂದ ಪಾಲಿಸಬೇಕು. ಶೇರುದಾರರು, ಗ್ರಾಹಕರು ಸರಿಯಾದ ರೀತಿಯಲ್ಲಿ ವ್ಯವಹಾರ ಮಾಡುವ ಮೂಲಕ ಬ್ಯಾಂಕಿನ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಹುಲ್ಯಾಳದ ಗುರುದೇವಾಶ್ರಮದ ಹರ್ಷಾನಂದ ಶ್ರೀಗಳು ಸಾನಿಧ್ಯ ವಹಿಸಿದ್ದರು. ವೇದಿಕೆಯಲ್ಲಿ ಧರ್ಮಲಿಂಗಯ್ಯ ಗುಡಗುಂಟಿ, ಬಿ.ಎಸ್.ಸಿಂಧೂರ, ಡಾ.ವಿಜಯಲಕ್ಷ್ಮೀ ತುಂಗಳ, ನಗರಸಭೆ ಅಧ್ಯಕ್ಷ ಪರಮಾನಂದ ಗವರೋಜಿ, ಅಪ್ಪಾಸಾಬ ಮನಗೂಳಿ, ಅಜಯ ಕಡಪಟ್ಟಿ, ಸಂಸ್ಥೆ ಅಧ್ಯಕ್ಷ ರಾಯಗೊಂಡ ಹೊನಗೌಡ, ಉಪಾಧ್ಯಕ್ಷ ಬಸವರಾಜ ಮಾಳಿ, ಅಪ್ಪು ಪೋತರಾಜ, ಸಂತೋಷ ಅಂಬಲಿ, ರಾಹುಲ ಪಾಟೀಲ, ಶ್ವೇತಾ ಅರಕೇರಿ, ಬಸವರಾಜ ಬೆಳ್ಳಗಿ ಸಹಿತ ಹಲವರು ಇದ್ದರು.

# ಜೋಯಿಡಾ ತಾಲೂಕು ದೇಶದ ಮೊದಲ ಸಾವಯವ ತಾಲ್ಲೂಕಾಗಿ ಪರಿವರ್ತನೆ : ಸಚಿವ ಚೆಲುವ ರಾಯ ಸ್ವಾಮಿ



ಉತ್ತರ ಕನ್ನಡ ಜಿಲ್ಲೆಯ ಜೋಯಿಡಾ ತಾಲೂಕಲ್ಲಿರುವ ಭೂಮಿಯಲ್ಲಿ ರಾಸಾಯನಿಕಗಳ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಿ, ಸಾವಯವ ರೀತಿಯಲ್ಲಿ ಬಳಕೆ ಮಾಡುವ ಮೂಲಕ ಮೂಲಕ ದೇಶದ ಮೊದಲ ಸಾವಯವ ಕೃಷಿ ತಾಲೂಕನ್ನಾಗಿ ಪರಿವರ್ತಿಸ ಲಾಗುವುದು ಎಂದು ಕೃಷಿ ಸಚಿವ ಎನ್ ಚಲವರಾಯ ಸ್ವಾಮಿ ಹೇಳಿದರು.

ಅವರೂ ಮಂಗಳವಾರ, ಜೋಯಿಡಾದಲ್ಲಿ, ಜಿಲ್ಲಾ ಆಡಳಿತ ಹಾಗೂ ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಕೃಷಿ ಸಂಬಂಧಿತ ಇಲಾಖೆಗಳು ಹಾಗೂ ಐ.ಸಿ.ಎ ಆರ್- ಕೃಷಿ ವಿಜ್ಞಾನ ಕೇಂದ್ರ ಶಿರಸಿ ಇವರ ಸಂಯುಕ್ತ ಆಶ್ರಯದಲ್ಲಿ ಜೋಯಿಡಾ ತಾಲ್ಲೂಕನ್ನು ಸಾವಯವ ತಾಲ್ಲೂಕನ್ನಾಗಿ ಪರಿವರ್ತಿಸುವ ಕಾರ್ಯಕ್ರಮದ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಜೋಯಿಡಾ ತಾಲೂಕು 70% ಅರಣ್ಯದಿಂದ ಕೂಡಿದ್ದು ಇಲ್ಲಿನ ವಾತಾವರಣ ಬೇರೆ ಕಡೆ ಎಲ್ಲೂ ನೋಡಲು ಸಾಧ್ಯವಿಲ್ಲ, ನೈಸರ್ಗಿಕವಾದ ಭೂಮಿ, ಅರಣ್ಯ ಪ್ರದೇಶ, ಪರಿಸರ ನೈಸರ್ಗಿಕ ಸಂಪತ್ತಿನಿಂದ ಕೂಡಿದ್ದು, ಇಲ್ಲಿನ ಭೂಮಿಯಲ್ಲಿ ರಾಸಾಯನಿಕವಲ್ಲದ ಕೃಷಿ ಚಟುವಟಿಯಲ್ಲಿ ತೊಡಗಿಸಿಕೊಂಡು, ಸಂಪೂರ್ಣ ಸಾವಯವ ಕೃಷಿ ತಾಲೂಕನ್ನಾಗಿ ಪರಿವರ್ತಿಸಲು ರೈತರ ಸಹಕಾರವು ಅಗತ್ಯವಾಗಿದೆ ಎಂದರು.

ಹಿಂದೆ ಸಾವಯವ ಗೊಬ್ಬರಗಳನ್ನು ಬಳಸಿಕೊಂಡು ಕೃಷಿ ಬೆಳೆಗಳನ್ನು ಬೆಳೆಯಲಾಗುತ್ತಿತ್ತು, ನಂತರ ರಸಾಯನಿಕ ಗೊಬ್ಬರಗಳಿಗೆ ಮಾರು ಹೋಗಲಾಗಿದೆ. ಇದರ ದುಪರಿಣಾಮಗಳ ಬಗ್ಗೆ ಕೃಷಿ ತಜ್ಞರು ಮತ್ತು ರೈತರು ಎಚ್ಚರಿಸುತ್ತಲೇ ಇದ್ದಾರೆ. ರೈತರು ರಾಸಾಯನಿಕ ಗೊಬ್ಬರ ಬಳಸುವುದನ್ನು ನಿಲ್ಲಿಸಿ, ಸಾವಯವ ಕೃಷಿ, ನೈಸರ್ಗಿಕ ಕೃಷಿ, ಸಿರಿಧ್ಯಾನದ ಬೆಳೆಗಳನ್ನು ಬೆಳೆಯುವ ಮೂಲಕ ರಾಸಾಯನಿಕದಿಂದ ಹೊರಬರಬೇಕು ಎಂದರು.

ರಸಾಯನಿಕ ಗೊಬ್ಬರ ಮತ್ತು ಔಷಧಿಗಳನ್ನು ಉಪಯೋಗಿಸುವುದರಿಂದ ಮಣ್ಣಿನ ಫಲವತ್ತತೆ, ಕಡಿಮೆ ಇಳುವರಿ,ಬೆಳೆ ನಾಶ ಮತ್ತು ಮನುಷ್ಯರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತವೆ ಇದನ್ನು ತಪ್ಪಿಸಲು ಕೃಷಿ ಪದ್ಧತಿಯಲ್ಲಿ ಪೂರ್ಣ ಪ್ರಮಾಣದಲ್ಲಿ ಸಾವಯವ ಬದಲಾವಣೆ ಮಾಡಿಕೊಳ್ಳುವ ಅಗತ್ಯವಾಗಿದೆ ಎಂದರು.

ರಾಜ್ಯದಲ್ಲಿ 224 ವಿಧಾನಸಭಾ ಕ್ಷೇತ್ರದಲ್ಲೂ ಕೃಷಿ ಹೊಂಡ ನಿರ್ಮಿಸಲು ತೀರ್ಮಾನಿಸಲಾಗಿದ್ದು ಈಗಾಗಲೇ 24000 ಕೃಷಿ ಹೊಂಡ ಮಾಡಲಾಗಿದೆ ಇನ್ನೂ ಮುಂದೆ ಹೆಚ್ಚಿನ ಕೃಷಿ ಹೊಂಡಗಳನ್ನು ನಿರ್ಮಿಸಲಾಗುವುದು. ಕಬ್ಬು ಬೆಳೆಗಾರರಿಗೆ ಕಬ್ಬು ಕಟ್ಟಾವು ಮಾಡಲು ಯತತ್ರೋಪಕರಣಕ್ಕೆ ಖರೀದಿಸಲು 50 ಲಕ್ಷದ ವರೆಗೂ ಸಬ್ಸಿಡಿ ನೀಡಲಾಗುತ್ತಿದೆ ಎಂದರು.

ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಹಾಗೂ ಹಳಿಯಾಳ ಶಾಸಕರ ಆರ್.ವಿ. ದೇಶಪಾಂಡೆ ಮಾತನಾಡಿ, ಜೊಯಿಡಾ ತಾಲೂಕಿನಲ್ಲಿ 2779 ಕೃಷಿ ಜಮೀನಿನ ಪೈಕಿ ಎರಡು ಸಾವಿರ ಹೆಕ್ಟೇರ್ ಅಲ್ಲಿ ಭತ್ತ, 60 ಹೆಕ್ಟೇರ್ ಅಲ್ಲಿ ಕಬ್ಬು ಬೆಳೆಯುತ್ತಿದ್ದಾರೆ. ವರ್ಷಕ್ಕೆ ಆರು ಸಾವಿರ ಕೆ.ಜಿ. ಜೇನು ಉತ್ಪಾದನೆ ಆಗುತ್ತಿದೆ. ತಾಲೂಕಿನಲ್ಲಿ ಕೇವಲ ಶೇ. 6.7 ಅಷ್ಟೇ ರಾಸಾಯನಿಕ ಬಳಕೆ ಆಗುತ್ತಿದೆ. ಅದೂ ಕಡಿಮೆ ಮಾಡಬೇಕು ಎಲ್ಲರೂ ಸಾವಯವ ತಾಲೂಕು ಮಾಡಲು ಸಿದ್ಧರಾಗಬೇಕು, ಯೋಜನೆ ಯಶಸ್ವಿಗೊಳಿಸಲು ಅಗತ್ಯ ಅನುದಾನ ಬಿಡುಗಡೆ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಕೃಷಿ ಇಲಾಖೆ ಆಯುಕ್ತ ವೈ ಎಸ್. ಪಾಟೀಲ್ , ಕೃಷಿ ಇಲಾಖೆ ನಿರ್ದೇಶಕ ಡಾ. ಜಿ.ಟಿ ಪುತ್ರ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಪ್ರಕಾಶ ಹಾಲಮ್ಮನವರ, ಜೋಯಿಡಾ ಗ್ರಾಮ ಪಂಚಾಯತಿ ಅಧ್ಯಕ್ಷೆ ಚಂದ್ರಿಮಾ ತುಕಾರಾಮ ಮಿರಾಶಿ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಶಿವಪ್ರಸಾದ್ ಗಾಂವಕರ್, ಜಿಎಸ್‌ಎಸ್ ಸಂಸ್ಥೆಯ ನಮೃತಾ ಮತ್ತಿತರರು ಉಪಸ್ಥಿತ-ರಿದ್ದರು.,

# ಕವಿಚಕ್ರವರ್ತಿ ರನ್ನ ಕ್ರೀಡಾಂಗಣದಲ್ಲಿ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ


ಮುಧೋಳ: ರನ್ನ ಕ್ರೀಡಾಂಗಣದ ಸಮಗ್ರ ಅಭಿವೃದ್ಧಿಗೆ ರೂ.10.ಕೋಟಿ ವೆಚ್ಚದಲ್ಲಿ ಮಡ್ಡ ಹೊದಿಕೆಯ ವಾಕಿಂಗ್ ಟ್ರ್ಯಾಕ್ ನಿರ್ಮಾಣ ಹಂತದಲ್ಲಿದೆ. ಎರಡು ಬ್ಯಾಡ್ಮಿಂಟನ್ ಕೋಟ್, ಪುರುಷ ಹಾಗು ಮಹಿಳೆಯರಿಗೆ ಪ್ರತ್ಯೇಕವಾಗಿರುವ ಜಿಮ್ ಸಲಕರಣೆ ಮತ್ತು ಒಲಂಪಿಕ್ ಮಟ್ಟದ ಸ್ವೀಮಿಂಗ್ ಫೂಲ್ ನಿರ್ಮಾಣ ಕಾರ್ಯ ನಡೆದಿದೆ. ಎಂದು ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ ಹೇಳಿದರು.

ಕವಿಚಕ್ರವರ್ತಿ ರನ್ನ ಕ್ರೀಡಾಂಗಣದಲ್ಲಿ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಕ್ರೀಡಾಂಗಣದಲ್ಲಿ ಕಾಮಗಾರಿ ಪರಿಶೀಲನೆ ಮಾಡಿ ಅವರು ಮಾತನಾಡಿದರು, ಕಳೆದ 20.ವರ್ಷಗಳ ಹಿಂದಿನ ಜನರ ಬೇಡಿಕೆ ಆಗಿರುವ ವಾಕಿಂಗ್ 15.ದಿನಗಳಲ್ಲಿ ಪೂರ್ಣಗೊಳಿಸಿ ಚಾಲನೆ ನೀಡಲಾಗುವದು, ಬಾಗಲಕೋಟೆ ಜಿಲ್ಲೆಯಲ್ಲಿ ಅಂದಾಜು 6.ಲಕ್ಷ, ಮುಧೋಳ ತಾಲುಕಿನ ಎಲ್ಲ ಸರಕಾರಿ ಶಾಲೆಗಳಲ್ಲಿ 7000. ಸಸಿಗಳನ್ನು ನೆಡುವ ಯೋಜನೆವಿದೆ.

ಸಸಿಗಳನ್ನು ನೆಟ್ಟು ಗಿಡ-ಮರಗಳನ್ನಾಗಿ ಪೋಷಿಸಿದರೆ ಶುದ್ಧವಾದ ಗಾಳಿ, ಆಕ್ಸೀಜನ್, ಉತ್ತಮ ಮಳೆ ಬೀಳಲು ಹಾಗು ವಿಷಯುಕ್ತ ಗಾಳಿಯನ್ನು ತಡೆಗಟ್ಟುವಲ್ಲಿ ಸಹಕಾರಿ ಆಗುವದು. ಕಾರಣ ಎಲ್ಲರೂ ಈ ಯೋಜನೆಗೆ ಸಹಕಾರ ನೀಡಬೇಕು,

ದತ್ತ ಕೆರೆ ಅಭಿವೃದ್ಧಿ : ನಗರಸಭೆ ವತಿಯಿಂದ ನಗರದ ಪುರಾತನ ದತ್ತ ಕೆರೆಯನ್ನು ರೂ.2.ಕೋಟಿ ವೆಚ್ಚದಲ್ಲಿ ಅಭಿವೃದ್ಧಿ ಮತ್ತು 7.5.ಕೋಟಿ ವೆಚ್ಚದಲ್ಲಿ ನಗರದ ವಿವಿಧ 6-7 ಕಡೆ ಹೈಟೆಕ್ ಶೌಚಾಲಯಗಳಿಗೆ ಹಾಗು ನಗರದ 4.ಕಡೆ ಬಸ್ ಶೆಲ್ಟರ್ ಶೀಘ್ರ ನಿರ್ಮಾಣ ಮಾಡಲಾಗುವದು ಎಂದು ತಿಮ್ಮಾಪುರ ಹೇಳಿದರು.

ನಗರಸಭೆ ಅಧ್ಯಕ್ಷೆ ಸುನಂದಾ ತೇಲಿ, ಎಪಿಎಂಸಿ. ಅಧ್ಯಕ್ಷ ಸಂಗಪ್ಪ ಇಮ್ಮನ್ನವರ,ವಕೀಲರಾದ ಅಶೋಕ ಕಿವಡಿ, ಉದಯಸಿಂಗ್ ಪಡತಾತೆ, ಆಯ್.ಎಚ್. ಅಂಬಿ, ಕಾಂಗ್ರೇಸ್ ನಗರ ಅಧ್ಯಕ್ಷ ರಾಘು ಮೊಕಾಶಿ, ದಾನೇಶ ತಡಸಲೂರ, ಬಸವಂತ ಕಾಟೆ, ಯುನೂಸ್ ಚಾಂದ, ಎಂ.ಆರ್. ಅಮ್ಮಲಜೇರಿ, ನಬಿ ಜಹಾಗಿರದಾರ, ಸುನೀಲ ಸಕ್ರಿ, ಚಿನ್ನು ಅಂಬಿ, ಕಲ್ಮೇಶ ಪಂಚಗಾಂವಿ, ತಾಪಂ. ಇಒ. ಉಮೇಶ ಸಿದ್ನಾಳ, ಅರಣ್ಯಾಧಿಕಾರಿ ಹಣಮಂತ ಡೋಣಿ, ಸಿಪಿಆಯ್. ಮಹಾದೇವ ಶಿರಹಟ್ಟಿ, ಆರ್. ಎಸ್. ನಿಡೋಣಿ, ಸಂಗಮೇಶ ನೀಲಗುಂದ, ಶಿವಾನಂದ ಮುಳ್ಳೂರ ಇತರರಿದ್ದರು.



BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :114, Postal Reg No. PMG/KA/NK/BM/135/25-27 / POST AT Vantamury Colony Post Office